ಸಂಪುಟ: ೦೭/ ಸಂಚಿಕೆ: ೧೪೧/ಶನಿವಾರ ದಿನಾಂಕ : ೧೯-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 141/ SATURDAY Date : 19-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಕುಡಿಯುವ ನೀರಿನ ಯೋಜನೆಗಳನ್ನ ಸಕಾಲದಲ್ಲಿ ಮುಗಿಸದ ಗುತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ: ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

ಬೆಂಗಳೂರು: ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗಳನ್ನು ಗುತ್ತಿಗೆ ಪಡೆದು ಕೆಲವು ವರ್ಷಗಳಿಂದ ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಕಾರ್ಯನಿರ್ವಾಹಕ ಎಂಜಿನಿಯರುಗಳಿಗೆ ಸೂಚನೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಕಾರ್ಯನಿರ್ವಾಹಕ ಎಂಜಿನಿಯರುಗಳ ಸಭೆಯಲ್ಲಿ ಮಾತನಾಡಿದ ಸಚಿವರು, ಎಂಜಿನಿಯರ್‌ಗಳ ನಿಧಾನ ಪ್ರವೃತ್ತಿಯನ್ನು ಬಿಟ್ಟು, ಗ್ರಾಮೀಣ ಜನರಿಗೆ ಕುಡಿಯುವ ನೀರು ಒದಗಿಸುವ ಯೋಜನೆಗಳನ್ನು ನಿರ್ದಿಷ್ಟ ಸಮಯದಲ್ಲಿ ಅನುಷ್ಠಾನಕ್ಕೆ ತರುವಲ್ಲಿ ಆದ್ಯತೆ ನೀಡಬೇಕು ಎಂದು ಆದೇಶಿಸಿದರು.

ಎಂಜಿನಿಯರ್‌ಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ ಖರ್ಗೆ: ಏಕಗ್ರಾಮ ಹಾಗೂ ಬಹುಗ್ರಾಮ ನೀರು ಸರಬರಾಜು ಯೋಜನೆಯ ಕಾಮಗಾರಿಗಳು ಮುಕ್ತಾಯಗೊಂಡ ನಂತರ



ಅಗೆದ ರಸ್ತೆಗಳನ್ನು ಯಥಾಸ್ಥಿತಿಗೆ ತರುತ್ತಿಲ್ಲ ಎಂಬ ದೂರುಗಳು ಬಹಳಷ್ಟು ಬರುತ್ತಿದ್ದು, ಈ ಸಂಬಂಧದಲ್ಲಿ ಎಂಜಿನಿಯರುಗಳಿಗೆ ಸ್ಪಷ್ಟ ನಿರ್ದೇಶನ ನೀಡಿದ ಸಚಿವರು ನೀರು ಸರಬರಾಜು ಕಾಮಗಾರಿ ಮುಗಿದ ನಂತರ ಆದ್ಯತೆಯ ಮೇಲೆ ರಸ್ತೆಗಳನ್ನು ಸರಿಪಡಿಸುವಲ್ಲಿ ಗಮನ ಹರಿಸಲು ಸೂಚಿಸಿದರು. ಗುತ್ತಿಗೆದಾರ-ರಿಗೆ ಕಾಮಗಾರಿಗಳನ್ನು ನೀಡುವ ಮೊದಲು ಅವರಲ್ಲಿನ ಯಂತ್ರೋಪಕರಣಗಳು ಮುಂತಾದ ಸಾಮರ್ಥ್ಯವನ್ನು ಪರೀಕ್ಷಿಸಬೇಕೆಂದು ತಿಳಿಸಿದರು.

ತಾಂತ್ರಿಕ ಕಾರಣ ನೀಡಿ ಯೋಜನೆಗಳು ವಿಳಂಬ – ಕಳವಳ: ಏಕಗ್ರಾಮ ಹಾಗೂ ಬಹುಗ್ರಾಮ ನೀರು ಸರಬರಾಜು ಯೋಜನೆಗಳಿಗೆ ಮಂಜೂರಾತಿ ಪಡೆದು, ಕಾರ್ಯಗತವಾಗುವ ಸಮಯದಲ್ಲಿ ಎದುರಾಗುವ ಅರಣ್ಯಭೂಮಿ ಹಾಗೂ ಇನ್ನಿತರ ತಾಂತ್ರಿಕ ಸಮಸ್ಯೆಗಳ ಕಾರಣ ನೀಡಿ, ಯೋಜನೆಗಳನ್ನು ವಿಳಂಬ ಮಾಡಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಯೋಜನಾ ವರದಿ ಸಿದ್ಧಪಡಿಸುವಾಗಲೇ ಎದುರಾಗುವ ಅಡ್ಡಿ ಆತಂಕಗಳನ್ನು ಗಮನಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಿಂಗಳಲ್ಲಿ ಮೂರು ದಿನ ಪಂಚಾಯತ್ ರಾಜ್, ಗ್ರಾಮೀಣ ನೀರು ಸರಬರಾಜು ಹಾಗೂ ನರೇಗಾ ಇಲಾಖೆಗಳ ಪ್ರಗತಿ ಪರಿಶೀಲಿಸಬೇಕು. ಜಿಲ್ಲಾ ಮಟ್ಟದಲ್ಲೇ ಸಿಇಒಗಳು ಸಮಸ್ಯೆಗೆ ಪರಿಹಾರ ಹುಡಕಬೇಕು ಎಂದೂ ಈ ಸಂದರ್ಭದಲ್ಲಿ ಹೇಳಿದರು.

ಇಡೀ ದಿನ ನಡೆದ ಸಭೆಯಲ್ಲಿ ಸಚಿವರು ಜಿಲ್ಲಾವಾರು ಪ್ರಗತಿ ಪರಿಶೀಲಿಸಿ, ಕಡಿಮೆ ಪ್ರಗತಿ ಸಾಧಿಸಿದ ಎಂಜಿನಿಯರ್??ಗಳ ಚಳಿ ಬಿಡಿಸಿದರಲ್ಲದೇ, ಸಾಕಷ್ಟು ಪ್ರಮಾಣದಲ್ಲಿ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಗಳಿಗೆ ಕಳುಹಿಸುವಲ್ಲಿ ಆಲಸ್ಯ ತೋರುವ ಎಂಜಿನಿಯರುಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು, ನೀರು ಕಲುಷಿತಗೊಂಡು ಗ್ರಾಮಗಳಲ್ಲಿ ಸಮಸ್ಯೆ ತಲೆದೋರಿದಲ್ಲಿ ಎಂಜಿನಿಯರುಗಳನ್ನು ಹೊಣೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಸಾರ್ವಜನಿಕರಿಂದ ಬರುವ ದೂರುಗಳನ್ನು ತಮ್ಮ ಮೇಜಿನಿಂದ ಕಳುಹಿಸಿದಲ್ಲಿ ಮಾತ್ರ ಸಮಸ್ಯೆ ಬಗೆಹರಿಯುವದಲ್ಲ, ದೂರನ್ನು ಪೂರ್ಣವಾಗಿ ಪರಿಹರಿಸುವ ಮೂಲಕ ಜನರ ಸಮಸ್ಯೆಗಳನ್ನು ದೂರ ಮಾಡಬೇಕು. ಪತ್ರಿಕೆ ಹಾಗೂ ವಾಹಿನಿಗಳಲ್ಲಿ ಬರುವ ದೂರುಗಳನ್ನು ಅಂದೇ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಕ್ರಮ ಕೈಗೊಂಡು ಸೂಕ್ತ ಸ್ಪಷ್ಟನೆ ನೀಡಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

## ರೈತರ ಅನುಕೂಲಕ್ಕಾಗಿ ತಕ್ಷಣದಿಂದಲೇ ನೀರು ಬಿಡಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಆದೇಶ



ಬೆಳಗಾವಿ : ರೈತರ ಅನುಕೂಲಕ್ಕಾಗಿ, ಅವರ ಬೆಳೆಗಳನ್ನು ರಕ್ಷಿಸಲು ತಕ್ಷಣದಿಂದಲೇ ಮಲಪ್ರಭಾ ಜಲಾಶಯದಿಂದ ನೀರು ಬಿಡುಗಡೆ ಮಾಡಲು ಮಲಪ್ರಭಾ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಆದೇಶಿಸಿದ್ದಾರೆ.

ಭೆಳಗಾವಿ ಉತ್ತರ ವಲಯ ಮುಖ್ಯ ಅಭಿಯಂತರರ ಕಚೇರಿಯಲ್ಲಿ ಶುಕ್ರವಾರ ನೀರಾವರಿ ಸಲಹಾ ಸಮಿತಿ ಸಭೆ ನಡೆಸಿದ ಸಚಿವರು, ರೈತರು ಖುಷಿಯಾಗಿದ್ದರೆ ದೇಶವೇ ಖುಷಿಯಾಗಿರುತ್ತದೆ. ನಾವೆಲ್ಲ ಖುಷಿಯಾಗಿರುತ್ತೇವೆ. ಹಾಗಾಗಿ ರೈತರ ಅನುಕೂಲಕ್ಕಾಗಿ ಇಂದಿನಿಂದಲೇ ಕಾಲುವೆಗಳಿಗೆ ನೀರನ್ನು ಹರಿಬಿಡಲಾಗುವುದು. ಕೊನೆಯವರೆಗೆ ತಲುಪುವವರೆಗು ನೀರು ಹರಿಯಲಿದೆ. ಯಾರೂ ಆತಂಕಪಡಬೇಕಾಗಿಲ್ಲ ಎಂದು ತಿಳಿಸಿದರು.

ಈವರೆಗೆ ಉತ್ತಮ ಮಳೆಯಾಗಿದೆ. ಮುಂದೆ ಕೂಡ ರೇಣುಕಾ ಯಲ್ಲಮ್ಮನ ಕೃಪೆಯಿಂದ ಉತ್ತಮ ಮಳೆಯಾಗಲಿದೆ ಎಂದು ಆಶಿಸೋಣ. ಕುಡಿಯುವ ನೀರಿನ ಪ್ರಮಾಣ ಉಳಿಸಿಕೊಂಡು, ನೀರಾವ-ರಿಗಾಗಿರುವ 4 ಟಿಎಂಸಿ ನೀರಿನಲ್ಲಿ ಕೊನೆಯ ಹಂತದವರೆಗೂ ತಲುಪುವವರೆಗೆ ನಿಲ್ಲಿಸದೆ ನೀರು ಹರಿಸಲಾಗುವುದು ಎಂದು ಅವರು ತಿಳಿಸಿದರು.

ರೈತರು ಬೆಳೆ ರಕ್ಷಣೆಗಾಗಿ ನೀರು ಬಿಡುವಂತೆ ಕೋ-ರಿದ್ದರು. ಹಾಗಾಗಿ ಸಲಹಾ ಸಮಿತಿ ಸಭೆ ನಡೆಸಿದ್ದೇನೆ. ರೈತ ಮುಖಂಡರು, ಜನಪ್ರತಿನಿದಿಗಳು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ನೀರು ಬಿಡುವ ತೀರ್ಮಾನ ತೆಗೆದುಕೊಳ್ಳಲಾಗಿದೆ. ರೈತರಿಗೆ ಎಲ್ಲ ದೃಷ್ಟಿಯಿಂದ ಅನುಕೂಲವಾಗಬೇಕೆನ್ನುವುದು ನಮ್ಮ ಉದ್ದೇಶ. ಮುಂದೆ ಕೂಡ ಉತ್ತಮ ಮಳೆಯಾಗಲಿದೆ ಎನ್ನುವ ಆಶಾಭಾವನೆ ಇದೆ ಎಂದು ಅವರು ಹೇಳಿದರು.

ಮಾಜಿ ಸಚಿವ, ಶಾಸಕ ಸಿ.ಸಿ.ಪಾಟೀಲ ಮಾತನಾಡಿ, ರೈತರ ಹಾಗೂ ನಮ್ಮೆಲ್ಲರ ಮನವಿಗೆ, ಭಾವನೆಗೆ ಸ್ಪಂದಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು, ತಕ್ಷಣ ನೀರು ಬಿಡುಗಡೆಗೆ ಆದೇಶ ನೀಡಿದ್ದಾರೆ. ಅವ-ರಿಗೆ ಎಲ್ಲರ ಪರವಾಗಿ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಶಾಸಕ ಬಿಬಿ ಚಿಮ್ಮನಕಟ್ಟಿ, ಮಹಾಮಂಡಳಿ ಅಧ್ಯಕ್ಷ ಸದುಗೌಡ ಪಾಟೀಲ, ಪ್ರಭಾರಿ ಪ್ರಾದೇಶಕ ಆಯುಕ್ತರೂ ಆಗಿರುವ ಜಿಲ್ಲಾಧಿಕಾರಿ ಮಹ್ಮದ್ ರೋಷನ್, ಮುಖ್ಯ ಎಂಜಿನಿಯರ್ ಅಶೋಕ ವಾಸನದ, ಸುಪರಿಂಟೆಂಡೆಂಟ್ ಎಂಜಿನಿಯರ್ ಲಕ್ಷ್ಮಣ ನಾಯಕ, ಎಸ್.ಬಿ.ಮಲ್ಲಿಗವಾಡ, ಮುದಿಗೌಡರ್ ಮೊದಲಾದವರು ಇದ್ದರು.

## ಕೆಪಿಸಿಸಿ ಅಧ್ಯಕ್ಷರ ಆಯ್ಕೆ ಹೈಕಮಾಂಡ್ ನಿರ್ಧಾರ: ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ: ಕೆಪಿಸಿಸಿ ಅಧ್ಯಕ್ಷರನ್ನು ಆಯ್ಕೆ ಮಾಡುವ ನಿರ್ಧಾರವನ್ನು ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುತ್ತದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ರಣದೀಪ ಸಿಂಗ್ ಸುರ್ಜೇವಾಲಾ ಅವರೊಂದಿಗೆ ರಾಜ್ಯದ ಅಭಿವೃದ್ಧಿ ವಿಷಯ ಹಾಗೂ ಅಭಿವೃದ್ಧಿಗೆ ಪ್ರತಿ ಶಾಸಕರಿಗೆ ನಿಗದಿಪಡಿಸಿದ ನಿಧಿ ಬಗ್ಗೆ ಚರ್ಚಿಸಲಾಗಿದೆಯೇ ಹೊರತು, ಕೆಪಿಸಿಸಿ ಹೊಸ ಅಧ್ಯಕ್ಷರ ಆಯ್ಕೆ ವಿಷಯವಾಗಿ ಯಾವುದೇ ಚರ್ಚೆಯಾಗಿಲ್ಲ. ಅಧ್ಯಕ್ಷರ ಆಯ್ಕೆ ಪಕ್ಷದ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ರಾಯಲ್ ಚಾಲೆಂಜರ್ಸ್ ಬೆಂಗಳೂರು (ಡಿಭಿಭ) ತಂಡದ್ಧ ವಿಜಯೋತ್ಸವ ವೇಳೆ ನಡೆದ ಘಟನೆಗಳ ವಿವರ ಬಗ್ಗೆ ತನಿಖಾ ವರದಿ ಸಲ್ಲಿಕೆಯಾಗಿದೆ. ಅಧ್ಯಯನ ಮಾಡಿ ಸರ್ಕಾರ ಕ್ರಮ ಕೈಗೊಳ್ಳಿದೆ. ಈ ಕಾರ್ಯಕ್ರಮ ಆಯೋಜನೆಗೆ ಆರ್‌ಸಿಬಿ ತಂಡದವರು ಲೋಕೋಪಯೋಗಿ ಸೇ-ರಿದಂತೆ ಯಾವುದೇ ಇಲಾಖೆಯಿಂದ ಯಾವುದೇ ಅನುಮತಿ ಪಡೆದಿಲ್ಲ' ಎಂದು ಮಾಧ್ಯಮಗಳ ಪ್ರಶ್ನೆಗೆ ಸಚಿವರು ಉತ್ತ-ರಿಸಿದರು.

## ರಾಜ್ಯದಲ್ಲಿ 2 ಸಾವಿರ ಸರ್ಕಾರಿ ಶಾಲೆಗಳ ಉನ್ನತೀಕರಣ: ಡಿಸಿಎಂ ಡಿ.ಕೆ. ಶಿವಕುಮಾರ್

ರಾಮನಗರ : ಸಿಎಸ್ ಆರ್ ಹಣದಿಂದ ರಾಜ್ಯದಲ್ಲಿ 2 ಸಾವಿರ ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಬೃಹತ್ ಯೋಜನೆ ರೂಪಿಸಲಾಗುತ್ತಿದ್ದು, ಇದು ನನ್ನ ಬಹುದೊಡ್ಡ ಕನಸಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಹೊಂಗನೂರು ಗ್ರಾಮದಲ್ಲಿ ಡಾ. ವೆಂಕಟಪ್ಪ ತಮ್ಮ ಸ್ವಂತ 14 ಕೋಟಿ ರೂ ವೆಚ್ಚ ಮಾಡಿ ಕಟ್ಟಿದ ಕರ್ನಾಟಕ ಪಬ್ಲಿಕ್ ಶಾಲೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಈ ಶಾಲೆ ರಾಜ್ಯಕ್ಕೆ ಮಾದರಿ ಶಾಲೆಯಾಗಬೇಕು ಎಂಬ ಉದ್ದೇಶದಿಂದ ಸರ್ಕಾರಿ ಶಾಲೆ ಮಕ್ಕಳ ಕೈಯಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ದೀಪದಿಂದ ದೀಪ ಉರಿಯುವಂತೆ ಅಕ್ಷರದಿಂದ ಬದುಕು ಬೆಳಗುತ್ತಿದೆ. ಬದುಕನ್ನ ಶಿಕ್ಷಕರು ರೂಪಿಸುತ್ತಾರೆ. ನಾವು ಎಷ್ಟೇ ದೊಡ್ಡವರಿದ್ದರೂ ಕೂಡ ಶಿಕ್ಷಕರಿಗೆ ಗೌರವ ಸ್ಥಾನ ಇದೆ ಎಂದರು.

ಅಕ್ಷರದಿಂದ ಮಾರ್ಗದರ್ಶನ: ಅನ್ನ ನಮಗೆ ಹೊಟ್ಟೆ ಮಾತ್ರ ತುಂಬಿಸುತ್ತದೆ. ಆದರೆ ಅಕ್ಷರ ಮಾರ್ಗದರ್ಶನ ನೀಡುವುದಲ್ಲದೇ ಶಕ್ತಿ ಹೆಚ್ಚಿಸಲಿದೆ. ಇನ್ನು ಸಿಎಸ್‌ಆರ್ ಹಣದಿಂದ ಶಾಲೆ ಮಾಡಬೇಕೆಂದು ದೊಡ್ಡ ರೂಪು ನೀಡುತ್ತಿದ್ದೇನೆ ಎಂದು ಹೇಳಿದರು.

2 ಸಾವಿರಕ್ಕೂ ಹೆಚ್ಚು ಶಾಲೆ ನಿರ್ಮಾಣ ಮಾಡುವ ಗುರಿ ಹೊಂದಿದ್ದೇನೆ. ಈ ನಡುವೆ ಡಾ. ವೆಂಕಟಪ್ಪನವರು ತಂದೆ, ತಾಯಿ ದೇವರು ಹಾಗೂ ಗುರುವಿನ ಋಣವನ್ನ ತೀರಿಸುತ್ತಿದ್ದಾರೆ. ಹುಟ್ಟು ಆಕಸ್ಮಿಕ, ಸಾವು ನಿಶ್ಚಿತ. ಹುಟ್ಟು ಸಾವಿನ ಮಧ್ಯ ನಾವು ಏನು ಮಾಡುತ್ತೇವೆ ಅನ್ನೋದೇ ನಮ್ಮ ಮುಂದೆ ಶಾಶ್ವತವಾಗಿ ಉಳಿಯುತ್ತದೆ. ಇಂತಹ ಒಂದು ಬೃಹತ್ ಸರ್ಕಾರಿ ಶಾಲೆ ಕಟ್ಟಿಕೊಡುವ ಮೂಲಕ ವೆಂಕಟಪ್ಪನವರು ಇತಿಹಾಸದ ಪುಟಕ್ಕೆ ಸೇರಿದ್ದಾರೆ. ವ್ಯಕ್ತಿ ಮನೆಯಲ್ಲಿ



ಬೆಳೆಯುತ್ತಾರೆ, ವ್ಯಕ್ತಿತ್ವ ಕೆಲವರಲ್ಲಿ ಮಾತ್ರ ಇದೆ. ಅಂತಹ ವ್ಯಕ್ತಿತ್ವವನ್ನು ಎಲ್ಲರೂ ರೂಪಿಸಿಕೊಳ್ಳಿ ಎಂದು ಕರೆ ಕೊಟ್ಟರು.

ನನಗೆ ತುಂಬಾ ಇಷ್ಟವಾದ ಇಲಾಖೆ ಎಂದರೆ ಅದು ಶಿಕ್ಷಣ ಇಲಾಖೆ. ಇದ-ರಿಂದಲೇ ಈ ಇಲಾಖೆಯಲ್ಲಿ ಸಾಧನೆ ಮಾಡಬೇಕೆಂಬ ಬಹುದೊಡ್ಡ ಆಸೆ ಇದೆ. ಇಂದು ಸರಿಯಾದ ಶಿಕ್ಷಣ ಇಲ್ಲದೇ ಎಲ್ಲರೂ ಬೆಂಗಳೂರಿಗೆ ಉದ್ಯೋಗ ಹಾಗೂ ಶಿಕ್ಷಣ-ಕ್ಕೆ ವಲಸೆ ಮಾಡುತ್ತಾರೆ. ಉದ್ಯೋಗಕ್ಕೆ ಚಿಂತನೆ ಮಾಡಬಾರದು. ಉದ್ಯಮಿಯಾಗಲು ಸಿದ್ದತೆ ಮಾಡಿಕೊಳ್ಳಬೇಕೆಂದು ಕರೆಕೊಟ್ಟರು. ರಾಜ್ಯದಲ್ಲಿ 50 ಸಾವಿರ ಶಿಕ್ಷಕರ ಕೊರತೆ ಇದೆ. ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಎಲ್ಲವನ್ನೂ ಸರಿಪಡಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, ಬೊಂಬೆನಗರಿ ಚನ್ನಪಟ್ಟಣ ತಾಲೂಕಿನ ಹೊಂಗನೂರಿನಲ್ಲಿ ಹೊಂಗನಸಿನ ಕಾರ್ಯಕ್ರಮ ಆಗುತ್ತಿದೆ. ಹೃದಯ ಶ್ರೀಮಂತಿಕೆ ಇರುವವರೇ ಇಂತಹ ಒಳ್ಳೆಯ ಕಾರ್ಯಕ್ರಮ ಮಾಡಲು ಸಾಧ್ಯವಾಗುತ್ತದೆ. ರಾಜ್ಯದಲ್ಲೆ ಮಾದರಿ ಕೆಲಸ ಮಾಡಿದ ಡಾ. ವೆಂಕಟಪ್ಪ ಅವರಿಗೆ ವಿಶೇಷ ಧನ್ಯವಾದ ಅರ್ಪಿಸಿದರು. ಶಿಕ್ಷಕರ ಕೊರತೆ ಆದಷ್ಟು ಬೇಗ ಪರಿಹಾರ ಮಾಡಲಾಗುವುದು. ಮುಂದಿನ ದಿನಗಳಲ್ಲಿ 13 ಸಾವಿರ ಶಿಕ್ಷಕರ ನೇಮಕ ಮಾಡಿಕೊಳ್ಳಲಾಗುವುದು ಎಂದರು.

ಹಾಗೆಯೇ, ಈಗಾಗಲೇ ರಾಜ್ಯದ ಹಲವು ಕಡೆಗಳಲ್ಲಿ ಸಿಎಸ್‌ಆರ್ ಹಣದಿಂದ ದೊಡ್ಡ ಶಾಲೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ರಾಜ್ಯಾದ್ಯಂತ 500 ಸರ್ಕಾರಿ ಶಾಲೆಯನ್ನ ಇದೇ ತರಹದ ಮಾದರಿ ಶಾಲೆ ಮಾಡಲಾಗುವುದು. ಕಲಿಕೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ. ಹಾಗೆಯೇ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ವಿದ್ಯಾರ್ಥಿಗಳು ಕಾಪಿ ಮಾಡದ ಹಾಗೆ ವೆಬ್ ಕಾಸ್ಟಿಂಗ್ ಮಾಡಲಾಗಿದೆ. ಇದರಿಂದ ಮಕ್ಕಳಲ್ಲಿ ಕಲಿತು ಬರವಣಿಗೆ ಶಕ್ತಿ ಹೆಚ್ಚಿದೆ ಎಂದರು. ಹಾಗೆಯೇ ಬೆಂಗಳೂರಿನಲ್ಲಿ ಕ್ಯಾನ್ಸರ್ ಮಕ್ಕಳಿಗೆ ಹೊಸ ಶಾಲೆ ಪ್ರಾರಂಭಿಸುವ ಯೋಜನೆಗೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದು ಎಂದು ಹೇಳಿದರು.

ಹಾಗೆಯೇ, ನೂತನವಾಗಿ ನಿರ್ಮಾಣವಾಗಿರುವ ಈ ಶಾಲೆಯ ಸಂಪೂರ್ಣ ಜವಬ್ದಾರಿಯನ್ನು ಸರ್ಕಾರವೇ ತೆಗೆದುಕೊಳ್ಳಲಿದೆ. ಅದನ್ನ ಕಾಪಾಡುವ ಜವಾಬ್ದಾರಿ ನಮ್ಮದು. ಮಕ್ಕಳಿಗೆ ಒಳ್ಳೆಯ ಶಿಕ್ಷಣ ಸಿಗಬೇಕೆಂಬುದು ನಮ್ಮ ಮುಂದಿನ ಗುರಿ ಎಂದರು.

******

## ಶಾಲೆಗಳಿಗೆ ಬಾಂಬ್ ಬೆದರಿಕೆಯನ್ನು ಗಂಭೀರವಾಗಿ ಪರಿಗಣಿಸಿದ್ದೇವೆ : ಗೃಹಸಚಿವ ಪರಮೇಶ್ವರ

ಬೆಂಗಳೂರು, : ನಗರದ ಹಲವು ಶಾಲೆಗಳಿಗೆ ಬಾಂಬ್ ಬೆದರಿಕೆ ಮಾಹಿತಿ ಬಂದಿರುವುದನ್ನು ಲಘುವಾಗಿ ಪರಿಗಣಿಸು ವುದಿಲ್ಲ. ಸೂಕ್ತ ರೀತಿಯಲ್ಲಿ ಪರಿಶೀಲನೆ ನಡೆಸಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆಯೂ ಶಾಲೆಗಳಿಗೆ ಬೆದರಿಕೆ ಕರೆ ಬಂದಿದ್ದು, ಬಾಂಬ್ ಬೆದರಿಕೆಯ ಅನೇಕ ಇ-ಮೇಲ್‌ಗಳೂ ಬಂದಿವೆ. ಇವುಗಳನ್ನು ಮೊದಲು ಪರಿಶೀಲನೆ ಮಾಡುತ್ತೇವೆ. ಯಾವುದನ್ನೂ ಲಘುವಾಗಿ ತೆಗೆದುಕೊಳ್ಳುವುದಿಲ್ಲ. ಏಕೆ ಈ ರೀತಿ ಮಾಹಿತಿ ಬರುತ್ತದೆ ಎಂಬುದನ್ನು ಪರಿಶೀಲಿಸುತ್ತೇವೆ. ಆನಂತರ ವಾಸ್ತವ ಏನೆಂಬುದು ಗೊತ್ತಾಗಲಿದೆ ಎಂದರು.

ರೌಡಿಶೀಟರ್ ಬಿಕ್ಲು ಶಿವು ಹತ್ಯೆ ಪ್ರಕರಣದಲ್ಲಿ ಮಾಜಿ ಸಚಿವ ಭೈರತಿ ಬಸವರಾಜ್‌ಗೆ ನೋಟಿಸ್ ನೀಡಲಾಗಿದೆ. ಅವರ ಹೇಳಿಕೆಯನ್ನು ದಾಖಲಿಸಲಾಗುತ್ತದೆ. ದೂರು ನೀಡಿದವರು ಅವರ ಹೆಸರನ್ನು ಸೇರಿಸಲೇಬೇಕೆಂದು ಒತ್ತಾಯಿಸಿರುವುದ-ರಿಂದ ಸ್ವಲ್ಪ ಗೊಂದಲವಿದೆ ಎಂದು ತಿಳಿಸಿದರು.ಈ ವಿಚಾರದಲ್ಲಿ ಏನೇ ಇದ್ದರೂ ನಿಯಮಾನುಸಾರ ಕ್ರಮವಾಗಲಿದೆ. ನೋಟಿಸ್ ಕೊಟ್ಟಿರುವುದರಿಂದ ಅವರು ಬರಲೇಬೇಕಾಗುತ್ತದೆ ಎಂದರು.

**ರಾಜಕಾರಣ ಇಲ್ಲ :** ಭೈರತಿ ಬಸವರಾಜ್ ವಿರುದ್ಧ ಎಫ್‌ಐಆರ್ ದಾಖಲಿಸಿರುವುದಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಗೃಹಸಚಿವರು, ಬಿಜೆಪಿ ಇರುವುದೇ ಆರೋಪ ಮಾಡಲು. ಸ್ವಾಭಾವಿಕವಾಗಿ ಅವರು ಆರೋಪ ಮಾಡುತ್ತಾರೆ. ಕಾನೂನು ಚೌಕಟ್ಟಿನಲ್ಲಿ ಪೊಲೀಸರು ಕೆಲಸ ಮಾಡುತ್ತಾರೆ. ಎಫ್‌ಐಆರ್ ದಾಖಲಿಸಿರುವುದರ ಹಿಂದೆ ಯಾವುದೇ ರಾಜಕಾರಣ ಇಲ್ಲ



ಎಂದು ಸ್ಪಷ್ಟಪಡಿಸಿದರು.

ಪ್ರತಿ ಮನೆಗೂ ಭೇಟಿ ಕೊಟ್ಟು ಪೊಲೀಸರು ಸ'ವ'ು'ಸ್ಯೆ'ಂ'ು'ನ'್ನ ಆಲಿಸುತ್ತಾರೆ. ಏನಾದರೂ ಬೇರೆ ರೀತಿಯ ಸಮಸ್ಯೆ ಇದ್ದರೆ ಅದನ್ನು ಸಂಗ್ರಹಿಸುತ್ತಾರೆ. ಯಾವ ಬೀದಿಯಲ್ಲಿ ಯಾ-ರಿದ್ದಾರೆ, ಏನು ನಡೆದಿದೆ, ಇದರ ಬಗ್ಗೆ ಸೂಕ್ತ ಮಾಹಿತಿ ಪಡೆಯಲು ಪೊಲೀಸ್ ಇಲಾಖೆಯಿಂದ ಹೊಸ ಕಾರ್ಯಕ್ರಮ ಹಮಿಕೊಳ್ಳಲಾಗಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು. ಒಳಮೀಸಲಾತಿ ಸಮೀಕ್ಷೆ ಪೂರ್ಣವಾಗದಿರುವುದರಿಂದ ನೇಮಕಾತಿ ಹಾಗೂ ಬಡ್ತಿ ಪ್ರಕ್ರಿಯೆ ವಿಳಂಬವಾಗಿದೆ. ಒಳಮೀಸಲಾತಿ ಸಂಪೂರ್ಣವಾದ ನಂತರ ನೇಮಕಾತಿ ಹಾಗೂ ಬಡ್ತಿಗೆ ಚಾಲನೆ ದೊರೆಯಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿರುವ ವಿಚಾರಕ್ಕೆ ಪರಮೇಶ್ವರ್ ಪ್ರತಿಕ್ರಿಯಿಸಿದರು. ಆರ್‌ಸಿಬಿ ವಿಜಯೋತ್ಸವ ಸಂದರ್ಭದಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾ.ಮೈಕಲ್ ಕುನ್ಹಾ ಅವರ ನೇತೃತ್ವದ ವಿಚಾರಣಾ ಆಯೋಗ ನೀಡಿರುವ ವರದಿಯನ್ನು ಸಂಪುಟ ಸಭೆಯ ಮುಂದೆ ಮಂಡಿಸಲಾಗಿದೆ. ಅದರ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ. ಮುಂದಿನ ಸಭೆಯಲ್ಲಿ ಆ ವಿಚಾರದ ಚರ್ಚೆಯಾಗಲಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

## ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ನೂತನ ಕಟ್ಟಡ ಉದ್ಘಾಟನೆ

# ಸಾರ್ವಜನಿಕೆಗೆ ತ್ವರಿತ ಸೇವೆ ಒದಗಿಸಬೇಕು: ಸಚಿವ ರಾಮಲಿಂಗಾರೆಡ್ಡಿ

ಬೆಳಗಾವಿ, : ಬೆಳಗಾವಿ ವಿಭಾಗ ಜಂಟಿ ಸಾರಿಗೆ ಆಯುಕ್ತರ ಕಚೇರಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ನೂತನ ಕಟ್ಟಡವನ್ನು ಸಾರ್ವಜನಿಕರಿಗೆ ಅನುಕುವಾಗುವ ರೀತಿಯಲ್ಲಿ ಸುಸಜ್ಜಿತವಾಗಿ ನಿರ್ಮಿಸಲಾಗಿದೆ. ಕಚೇರಿಯ ಅಧಿಕಾರಿಗಳು, ಸಿಬ್ಬಂದಿಗಳು ಸಾರ್ವಜನಿಕರಿಗೆ ತ್ವ-ರಿತ ಸಾರಿಗೆ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೃತ್ತದ ಬಳಿಯ ಬೆಳಗಾವಿ ವಿಭಾಗ ಜಂಟಿ ಸಾರಿಗೆ ಆಯುಕ್ತರು ಕಚೇರಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ನೂತನ ಕಟ್ಟಡವನ್ನು ಶುಕ್ರವಾರ (ಜು.17) ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರಕ್ಕೆ ಆದಾಯ ತರುವ ಪ್ರಮುಖ ಇಲಾಖೆಗಳಲ್ಲಿ ಸಾರಿಗೆ ಇಲಾಖೆ ಕೂಡ ಒಂದಾಗಿದೆ. ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇದ್ದು, ಈಗಾಗಲೇ ನೇಮಕಾತಿ ಪ್ರಕ್ರಿಯೆ ನಡೆದಿದ್ದು, ಸಿಬ್ಬಂದಿಗಳು ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಸಿಬ್ಬಂದಿಗಳ ಕೊರತೆ ಕಡಿಮೆಯಾಗಲಿದೆ ಎಂದರು.

ಬೈಲಹೊಂಗಲದಲ್ಲಿ 5 ಕೋಟಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾದ "ಸ್ವಯಂ ಚಾಲಿತ ಚಾಲನಾ ಪಥ" ಉದ್ಘಾಟನೆ ಮಾಡಲಾಗಿದೆ. ರಾಜ್ಯದಲ್ಲಿ ಎಲ್ಲ ಜಿಲ್ಲೆಗಳಲ್ಲಿ ಎಲೆಕ್ಟ್ರಿಕ್ ಬಸ್ ಗಳನ್ನು ಒದಗಿಸಲಾಗುವುದು. ಕರ್ಕಶ ಹಾರ್ನ, ಹೆಚ್ಚು ಪ್ರಕಾಶದ ಲೈಟ್ ಗಳು ಇರುವ ವಾಹನಗಳನ್ನು ಗುರುತಿಸಿ ದಂಡಗಳನ್ನು ವಿಧಿಸಬೇಕು. ಸಾರಿಗೆ ಇಲಾಖೆಯ ಕಚೇರಿಯಲ್ಲಿ ಮಧ್ಯವರ್ತಿಗಳ ಪ್ರವೇಶಕ್ಕೆ ನಿರ್ಬಂಧ ಹೇರಬೇಕು ಎಂದು ಹೇಳಿದರು.

**ಜಿಲ್ಲೆಗೆ ಹೆಚ್ಚುವರಿ ಬಸ್ ಸೌಲಭ್ಯ:**

ಬೆಳಗಾವಿ ಜಿಲ್ಲೆಗೆ ಒಟ್ಟು 300 ಬಸ್ ಗಳನ್ನು ನೀಡಲಾಗುವುದು. ಅದರಲ್ಲಿ ನಗರ ಸುತ್ತಮುತ್ತ ಸಂಚಾರಕ್ಕೆ 100 ಎಲೆಕ್ಟ್ರಿಕ್ ಬಸ್ ಗಳನ್ನು ಸಹ ಒದಗಿಸಲಾಗುವುದು. ಅದೇ ರೀತಿಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ 50:50 ಅನುಪಾತದಲ್ಲಿ ಸ್ಮಾರ್ಟ್ ಸಿಟಿಯೋಜನೆಯಡಿ ಸಿಟಿ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗಿದ್ದು, ಶೀಘ್ರದಲ್ಲೇ ಲೋಕಾರ್ಪಣೆಗೊಳಿಸಲಾಗುವುದು ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಮುಂಚೆ ಸಾರಿಗೆ ಇಲಾಖೆ ಕಚೇರಿ ಬಹಳ ಹಳೆಯದಾಗಿತ್ತು. ಬಹು ದಿನಗಳಿಂದ ನೂತನ ಕಟ್ಟಡದ ಬೇಡಿಕೆ ಇತ್ತು ಅದರಂತೆ ಸಿ.ಎಂ ಸಿದ್ದರಾಮಯ್ಯ ಅನುಮೋದನೆಯೊಂದಿಗೆ ಸಚಿವ ರಾಮಲಿಂಗಾರೆಡ್ಡಿ ಅವರ ಶ್ರಮದಿಂದ ನಗರದಲ್ಲಿ ಸಾರಿಗೆ ಇಲಾಖೆ ನೂತನ ಕಟ್ಟಡ ಲೋಕಾರ್ಪಣೆಗೊಂಡಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

**ಕಟ್ಟುನಿಟ್ಟಿನ ಸಂಚಾರಿ ನಿಯಮ ಜಾ-ರಿಗೆ ತರಲು ಸಲಹೆ:** ಸಾರಿಗೆ ಇಲಾಖೆಗೆ ಇನ್ನು ಸಾಕಷ್ಟು ಕಾಯಕಲ್ಪ ನೀಡುವ ಯೋಜನೆಗಳಿವೆ. ಇಲಾಖೆಯಿಂದ ಸಾರ್ವಜನಿಕರಿಗೆ ಸಲಹೆ-ಸೂಚನೆ ಸೇರಿದಂತೆ ವಾಹನ ಚಾಲಕರಿಗೆ ಅಗತ್ಯ ತರಬೇತಿಗಳನ್ನು ನೀಡಬೇಕು. ವಾಹನ ಚಾಲನಾ



ಪರವಾನಿಗೆ ನೀಡಲು ಇನ್ನಷ್ಟು ಕಟ್ಟುನಿಟ್ಟಿನ ನಿಯಮಗಳನ್ನು ಜಾರಿ ಮಾಡಿ ಪರವಾನಿಗೆ ನೀಡಬೇಕು. ಇದರಿಂದ ಅಪಘಾತಗಳ ಪ್ರಮಾಣ ಬಹಳಷ್ಟು ಕಡಿಮೆಯಾಗಲಿವೆ ಎಂದು ಹೇಳಿದರು. ಜಿಲ್ಲೆಯ ಅಗತ್ಯ ಸ್ಥಳಗಳಿಗೆ ಬಸ್ ಸೌಲಭ್ಯ ಕಲ್ಪಿಸಲು ಸಚಿವರು, ಶಾಸಕರೊಂದಿಗೆ ಚರ್ಚಿಸಿ ಅಗತ್ಯ ಪಟ್ಟಿ ತಯಾರಿಸಲಾಗಿದೆ. ಜನರ ಬೇಡಿಕೆಯಂತೆ ಹೆಚ್ಚುವ-ರಿಯಾಗಿ ಬಸ್ ಗಳನ್ನು ಜಿಲ್ಲೆಗೆ ನೀಡಬೇಕು. ಅಂ-ದಾಜು 500 ಬಸ್ ಗಳನ್ನು ಜಿಲ್ಲೆಗೆ ನೀಡಿದಲ್ಲಿ, ವಿದ್ಯಾರ್ಥಿಗಳ ಸಾರಿಗೆ ಸೌಲಭ್ಯಕ್ಕೆ ಅನುಕವಾಗಲಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಬೇಡಿಕೆ ಇಟ್ಟರು. **ನಿಯಮ ಉಲ್ಲಂಘಿತ ವಾಹನಗಳಿಗೆ ದಂಡ:**

ಹಳೆಯ ವಾಹನಗಳನ್ನು ಗುರುತಿಸಿ ಅಂತಹ ವಾಹನಗಳ ಆರ್ಸಿ ನವೀಕರಣಕ್ಕೆ ಸೂಚನೆ ನೀಡಬೇಕು. ಸ್ಥಳೀಯವಾಗಿ ಟ್ರ್ಯಕ್ಟರ್ ಗಳಲ್ಲಿ ಅತಿ ಬಾರ ಮತ್ತು ಅಧಿಕ ಸ್ಪೀಕರ್ ಬಳಸಿ ಸಾರ್ವಜನಿಕರಿಗೆ ಕಿರಿ-ಕಿರಿ ಮಾಡಲಾಗುತ್ತಿದೆ ಅಂತಹ ವಾಹನಗಳನ್ನು ತಡೆದು ದಂಡ ವಿಧಿಸಬೇಕು.

ಜಿಲ್ಲೆಯಲ್ಲಿ ಇನ್ನಷ್ಟು ಬಸ್ ನಿಲ್ದಾಣಗಳ ನಿರ್ಮಾಣದ ಅವಶ್ಯಕತೆ ಇದೆ. ಸರ್ಕಾರದ ಹಂತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ಸ್ಥಳಗಳನ್ನು ಮಂಜೂರು ಮಾಡಲಾಗುವುದು ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸ್ಥಳಗಳನ್ನು ಬಳಸಿಕೊಂಡು ಅಗತ್ಯವಿರುವ ಸ್ಥಳಗಳಲ್ಲಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಸಾರಿಗೆ ಇಲಾಖೆ ಯೋಜನೆಗಳನ್ನು ರೂಪಿಸಬಹುದು ಎಂದು ಸಚಿವ ಸತೀಶ ಜಾರಕಿಹೊಳಿ ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ರಾಜ್ಯದ ಎರಡನೇ ರಾಜ್ಯಧಾನಿ ಎಂದು ಬೆಳಗಾವಿ ಜಿಲ್ಲೆ ಗುರುತಿಸಿಕೊಂಡಿದೆ. ಬಹಳ ದೊಡ್ಡದಾಗಿ ಜಿಲ್ಲೆಯ ವಿಸ್ತೀರ್ಣ ಇರುವುದರಿಂದ ಇನ್ನಷ್ಟು ಬಸ್ ಗಳ ಸೌಲಭ್ಯದ ಅವಶ್ಯಕತೆ ಇದೆ. ನೂತನವಾಗಿ ನಿರ್ಮಾಣಗೊಂಡ ಸಾರಿಗೆ ಇಲಾಖೆ ಕಟ್ಟಡ ಸುಮಾರು 10 ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ ನಿರ್ಮಾಣ ಮಾಡಲಾಗಿದೆ ಎಂದರು.

ಸಾರಿಗೆ ಇಲಾಖೆಯ ಬಗ್ಗೆ ಸಾರ್ವಜನಿಕರಿಂದ ಮಧ್ಯವರ್ತಿಗಳ ಹಾವಳಿ ಇದೆ ಎಂದು ಆರೋಪವಿದೆ ಹಾಗಾಗಿ ಮಧ್ಯವರ್ತಿಗಳ ಪ್ರವೇಶ ನಿರ್ಬಂಧಿಸಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ತ್ವ-ರಿತಗತಿಯಿಂದ ಇಲಾಖೆಯ ಸಿಬ್ಬಂದಿಗಳು ಸೇವೆಗಳು ಒದಗಿಸಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಬೆಳಗಾವಿ ಉತ್ತರ ವಿಧಾನಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲೆಯ ಸಾರಿಗೆ ಇಲಾಖೆಯ ಕಚೇರಿಯಲ್ಲಿ ಪ್ರಥಮ ದರ್ಜೆ, ದ್ವಿತೀಯ ದರ್ಜೆ ಸಹಾಯಕ ಸೇರಿದಂತೆ ಇನ್ನಿತರ ಸಿಬ್ಬಂದಿಗಳ ಕೊರತೆ ಬಹಳಷ್ಟಿದೆ. ಸದ್ಯ ಇರುವ ಸಿಬ್ಬಂದಿಗಳ ಮೇಲಿರುವ ಹೊರೆ ಕಡಿಮೆ ಮಾಡಲು ಅದಷ್ಟು ಬೇಗ ಇನ್ನಷ್ಟು ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಬೇಕು ಇದರಿಂದ ಮತ್ತಷ್ಟು ಸಕ್ರಿಯವಾಗಿ ಕಾರ್ಯ ನಿರ್ವಹಿಸಲು ಇಲಾಖೆಯ ಅಧಿಕಾರಿಗಳಿಗೆ ಸಹಾಯವಾಗಲಿದೆ ಎಂದರು.

ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ವಾಹನ ಸವಾರರು ಹಾಗೂ ಕಚೇರಿಗೆ ಬರುವ ಸಾರ್ವಜನಿಕರೊಂದಿಗೆ ಸಹನೆಯಿಂದ ವರ್ತಿಸಿ, ತ್ವ-ರಿತವಾಗಿ ಸೇವೆಗಳನ್ನು ಒದಗಿಸಬೇಕು ಎಂದು ಶಾಸಕ ಆಸೀಫ್ (ರಾಜು) ಸೇಠ್ ಸಲಹೆ ನೀಡಿದರು. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಅಧ್ಯಕ್ಷ ಹಾಗೂ ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ, ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ವಿನಯ ನಾವಲಗಟ್ಟಿ, ಸಾರಿಗೆ ಮತ್ತು ರಸ್ತೆ ಸುರಕ್ಷತಾ ಆಯುಕ್ತರಾದ ಯೋಗೀಶ್ ಎ. ಎಂ, ನಗರ ಪೊಲೀಸ್ ಆಯುಕ್ತ ಭೂಷಣ್ ಗುಲಾಬರಾವ ಬೊರಸೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಧಾರವಾಡ ಉತ್ತರದ (ಪ್ರವರ್ತನ) ಅಪರ ಸಾರಿಗೆ ಆಯುಕ್ತರಾದ ಕೆ. ಟಿ ಹಾಲಸ್ವಾಮಿ, ಬೆಳಗಾವಿ ವಿಭಾಗದ ಜಂಟಿ ಸಾರಿಗೆ ಆಯುಕ್ತರಾದ ಎಂ. ಪಿ.ಓಂಕಾರೇಶ್ವರಿ, ಬೆಳಗಾವಿ ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಗೇಶ್ ಮುಂಡಾಸ, ನಿವೃತ್ತ ಪ್ರಾದೇಶಿಕ ಸಾರಿಗೆ ಆಯುಕ್ತರಾದ ಶಿವಾನಂದ ಮಗದುಮ್ಮ, ಗುತ್ತಿಗೆದಾರ ಉದಯ ಕುಮಾರ ಆರ್. ಶೆಟ್ಟಿ ಸೇರಿದಂತೆ ಸಾರಿಗೆ ಇಲಾಖೆ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಯಬಾಗ ತಾಲೂಕ ಪದಾಧಿಕಾರಿಗಳ ಆಯ್ಕೆ

ರಾಯಬಾಗ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಯಬಾಗ ತಾಲೂಕ ಘಟಕದ ಪದಾಧಿಕಾರಿಗಳ ಆಯ್ಕೆಯು ಇತ್ತೀಚಿಗೆ ರಾಯಬಾಗ ಪಟ್ಟಣದ ಲೋಕೋಪಯೋಗಿ ಇಲಾಖೆಯ ಸಭಾ ಭವನದಲ್ಲಿ ಜರುಗಿತು. ಸನ್.2025 ರಿಂದ 28ರ ವರೆಗೆ ಮೂರು ವರ್ಷಗಳ ಅವಧಿಗೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ರಾಜು ಎಂ ತಳವಾರ ಮೂರನೇ ಅವಧಿಗೆ ಅಧ್ಯಕ್ಷರಾಗಿ ಮುಂದುವರೆದಿದ್ದು. ಹಿರಿಯ ಪತ್ರಕರ್ತ ಅಬ್ಬಾಸ್ ಲತಿಪನವರ ಗೌರವಾಧ್ಯಕ್ಷರಾಗಿ ಆಯ್ಕೆಯಾದರು. ಅಮರೇಶ ತಾಳಿಕೋಟಿ, ಮಹೇಶ ಗಡಕರಿ, ಶಿವಾಜಿ ಮೇತ್ರಿ ಉಪಾಧ್ಯಕ್ಷರಾಗಿ ಆಯ್ಕೆಯಾದರು. ಭೀಮಪ್ಪ ಕಿಚಡೆ ಪ್ರಧಾನ ಕಾರ್ಯದರ್ಶಿಯಾಗಿ, ಸಂತೋಷ ಗಿರಿ, ಬಸವರಾಜ ಮಡಿವಾಳ, ಸುನಿಲ ಕಬ್ಬೂರ ಕಾರ್ಯದರ್ಶಿಯಾಗಿ ಆಯ್ಕೆಯಾದರು. ಸಂತೋಷ ಮಣ್ಣಿಕೇರಿ ಖಜಾಂಚಿಯಾಗಿ, ಸುಧೀರ ಕಳ್ಳಿ ಹಾಗೂ ಮಹೇಶ ತಾಂವಸಿ ಕಾನೂನು ಸಲಹೆಗಾರರಾಗಿ ಆಯ್ಕೆಯಾದರು.

ಸಂಚಾಲಕ ಮಂಡಳಿ ಸದಸ್ಯರಾಗಿ ಸದಾಶಿವ ಬಡಿಗೇರ, ಚೆನ್ನವೀರಯ್ಯ ಹಿರೇಮಠ, ಶ್ರೀನಾಥ ಶಿರಗೂರ, ಸುರೇಶ ಪೂಜೇರಿ, ನಾಗರಾಜ ಮಗದುಮ್ಮ, ಸಂಬಾಜಿ ಚೌವ್ಹಾಣ, ಬಸವರಾಜ ಅರಕೇರಿ, ಸುರೇಶ ಕಟ್ಟಿ, ಶ್ರೀಮತಿ ಕಾಂಚನಾ ಬಡಿಗೇರ, ಕುಮಾರ ಸುತಾರ, ವಿಠಲ ಬಡಿಗೇರ, ವಿಠಲ ಸ್ವಾಮಿ ಹಾಗೂ ಶ್ರೀಮಂತ ಘಟನಟ್ಟಿ ಆಯ್ಕೆಯಾಗಿದ್ದಾರೆಂದು ಕರ್ನಾಟಕ ಕರ್ನಾಟಕ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷರು, ವೀಕ್ಷಕರು ಯಲ್ಲಪ್ಪ ತಳವಾರ ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಜ್ಞಾನ ಭಾರತಿಯಲ್ಲಿ ಶೈಕ್ಷಣಿಕ ಸಹಮಿಲನ

ಮುದ್ದೇಬಿಹಾಳ: ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಸಮೂಹ ವಿದ್ಯಾ ಸಂಸ್ಥೆಯಲ್ಲಿ ಜು.19 ಶನಿವಾರದಂದು ವಿದ್ಯಾ ಭಾರತಿ ಕರ್ನಾಟಕ ವಿಜಯಪುರ ಜಿಲ್ಲಾ ಸಂಕುಲಗಳ ಶಾಲೆಗಳ 2025-26ನೇ ಸಾಲಿನ ಶೈಕ್ಷಣಿಕ ಸಹಮಿಲನ ನಡೆಯಲಿದೆ.

ಮುಂ.10.25ಕ್ಕೆ ಕರ್ನಾಟಕ ಸರಕಾರ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರರವರು ಉದ್ಘಾಟನೆ ಮಾಡಲಿದ್ದು , ಪಂಚ ಪರಿವರ್ತನೆ ಎನ್ನುವ ವಿಷಯದ ಮೇಲೆ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಾಂತ ಕಾರ್ಯಕಾರಿಣಿ ಸದಸ್ಯರಾದ ನಾಗೇಶ ಚಿನ್ನಾರೆಡ್ಡಿಯವರು ಉಪನ್ಯಾಸ ನೀಡಲಿದ್ದಾರೆ. ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಬಿ.ಎಸ್.ಸಾವಳಗಿ, ವಿದ್ಯಾ ಭಾರತಿ ಪ್ರಾಂತ ಕಾರ್ಯದರ್ಶಿ ವಸಂತ ಮಾಧವ, ಜ್ಞಾನ ಭಾರತಿ ವಿದ್ಯಾ ಮಂದಿರ ವಿದ್ಯಾ ಸಂಸ್ಥೆಯ ಅಧಕ್ಷರಾದ ಬಿ.ಪಿ.ಕುಲಕರ್ಣಿ ಮುಖ್ಯ ಅತಿಥಿಸ್ಥಾನ ವಹಿಸಲಿದ್ದು, ವಿದ್ಯಾ ಭಾರತಿ ಜಿಲ್ಲಾ ಅಧ್ಯಕ್ಷ ಪ್ರಭು ಎಸ್.ಕಡಿ ಅಧ್ಯಕ್ಷತೆ ವಹಿಸಲಿದ್ದಾರೆ. ಮಧ್ಯಾಹ್ನ ಸಮಾರೋಪ ಸಮಾರಂಭದಲ್ಲಿ ಮಾಜಿ ವಿಧಾನ ಪರಿಷತ್ತಿನ ಸದಸ್ಯರಾದ ಅರುಣ ಶಹಾಪುರ, ವಿದ್ಯಾ ಭಾರತಿ ಪ್ರಾಂತ ಕಾರ್ಯದರ್ಶಿ ವಸಂತ ಮಾಧವ, ಬೆಳಗಾವಿ ವಿಭಾಗ ಪ್ರಮುಖ ರಾಜಶೇಖರ ಉಮರಾಣಿ, ಸಂಯೋಜಕ ಚಂದ್ರಶೇಖರ ಕವಟಗಿ, ಜಿಲ್ಲಾ ಕಾರ್ಯದರ್ಶಿ ರಾಜಶೇಖರ ಪಾಟೀಲ, ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸಲಿದ್ದು ವಿದ್ಯಾ ಭಾರತಿ ಜಿಲ್ಲಾ ಅಧ್ಯಕ್ಷ ಪ್ರಭು ಎಸ್.ಕಡಿ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ವ್ಯಾಪ್ತಿಯಲ್ಲಿ ವಿದ್ಯಾ ಭಾರತಿ ಸಂಘಟನೆಗೆ ಒಳಪಟ್ಟ ಸುಮಾರು 31 ಶಾಲೆಗಳಿಂದ ಆಡಳಿತ ವರ್ಗ, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರೆಲ್ಲರು ಸಹಮಿಲನದ ಅಪೇಕ್ಷಿತ-ರಿದ್ದು 350ಕ್ಕೂ ಹೆಚ್ಚು ಜನರು ಸೇರುವ ನಿರೀಕ್ಷೆಯಿದೆ. ಶೈಕ್ಷಣಿಕ ಸಂಸ್ಥೆಗಳ ಬಲವರ್ಧನೆ ಹಾಗೂ ಸಂಸ್ಕಾರ ಭರಿತ ಗುಣಾತ್ಮಕ ಶಿಕ್ಷಣದ ಮೇಲೆ 3 ಅವಧಿಗಳ ಚಿಂತನ ಮಂಥ-'ನ ಮತ್ತು ಕಳೆದ ವರ್ಷ ಸಾಗಿಬಂದ ದಾರಿಗಳ ಮೇಲೆ ಅವಲೋಕನ ನಡೆಯಲಿದೆ ಎಂದು ಜಿಲ್ಲಾ ವಿದ್ಯಾ ಭಾರತಿ ಪ್ರಚಾರ ಸಮಿತಿಯ ಸಂಚಾಲಕರಾದ ಜ್ಞಾನ ಭಾರತಿ ಪ್ರೌಢ ಶಾಲೆಯ ಮುಖ್ಯಗುರು ರಾಮಚಂದ್ರ ಹೆಗಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬನಹಟ್ಟಿಯಲ್ಲಿ ನಾಳೆ 20 ರಂದು ವಿದ್ಯುತ್ ವ್ಯತ್ಯಯ

ರಬಕವಿ-ಬನಹಟ್ಟಿ,ಜು18; ಬನಹಟ್ಟಿ ನಗರದ ಕೆಎಚ್‌ಡಿಸಿ ಮಾರ್ಗವಾಗಿ 11 ಕೆವಿ ವಿದ್ಯುತ್ ತಂತಿಗಳನ್ನು ಬದಲಿಸುವ ಸಲುವಾಗಿ ಜುಲೈ 20 ರವಿವಾರದಂದು ಬನಹಟ್ಟಿ ಕೆಎಚ್‌ಡಿಸಿ, ಲಕ್ಷ್ಮೀನಗರ, ಅಶೋಕ ಕಾಲನಿ, ಆಸಂಗಿ, ಅಸ್ಕಿ ಹಾಗೂ ಜಗದಾಳ ಗ್ರಾಮದ ಕೆಲವು ಪ್ರಮುಖ ವ್ಯಾಪ್ತಿ ಪ್ರದೇಶಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 6 ರ ವರೆಗೆ ವಿದ್ಯುತ್ ಸ್ಥಗಿತವಿರುತ್ತದೆ. ಸಾರ್ವಜನಿಕರು ಸಹಕರಿಸಬೇಕೆಂದು ರಬಕವಿ ಹೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರು ತಿಳಿಸಿದ್ದಾರೆ.

## ಜಮೀನು ಬಹಿರಂಗ ಹರಾಜು

ಹಾವೇರಿ. ಜಿಲ್ಲೆಯ ಹಿರೇಕೆರೂರ ತಾಲೂಕಿನ ಹಿರೇಕೆರೂರ ಹೋಬಳಿಯ ಆಲದಗೇರಿ ಗ್ರಾಮದ ಸರಹದ್ದಿನ ರಿಸನಂ 70/1 ಕ್ಷೇತ್ರ 01ಎ 03ಗು ನೇದ್ದರ ಜಮೀನನ ಬಹಿರಂಗ ಹರಾಜು 2025 ಜುಲೈ 19 ಬೆಳಿಗ್ಗೆ 10-30ಕ್ಕೆ ಅಥ-'ವಾ ಮಧ್ಯಾಹ್ನದ ನಂತರ ನಡೆಸಲಾಗುವುದು ಎಂದು ಹಿರೇಕೆರೂರು ತಹಶೀಲ್ದಾರ ಅವರು ತಿಳಿಸಿದ್ದಾರೆ.

ಜಮೀನಿನ ಹಾಗೂ ಹರಾಜಿನ ಹೆಚ್ಚಿನ ಮಾಹಿತಿಗಾಗಿ ಹಿರೇಕೆರೂರ ತಹಶೀಲ್ದಾರ ಕಚೇರಿಯನ್ನು ಕೆಲಸದ ಸಮಯದಲ್ಲಿ ಸಂಪರ್ಕಿಸಬಹುದು.

## ಮಾದಕ ವಸ್ತುಗಳ ದುರುಪಯೋಗ ತಡೆಗಟ್ಟುವಿಕೆ-ಅರಿವು ಅಗತ್ಯ




ಇಂಡಿ: ಮಾದಕ ವಸ್ತುಗಳ ಸೇವನೆಗೆ ಒಳಗಾದರೆ, ಅದ-ರಿಂದ ಹೊರಬರುವುದು ತುಂಬಾ ಕಷ್ಟ. ಇದು ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ. ಈ ಪಿಡುಗಿನ ಜಾಗೃತಿಯ ಅರಿವು ಮಕ್ಕಳಲ್ಲಿ ಮೂಡಿಸಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಅವರು ಶುಕ್ರವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಬ್ಯಾಗ್ ಲೆಸ್ ಡೇ ಅಂಗವಾಗಿ 'ಮಾದಕ ವಸ್ತುಗಳ ದುರುಪಯೋಗ ತಡೆಗಟ್ಟುವಿಕೆ' ವಿಷಯದ ಕುರಿತು ಮಾತನಾಡಿದರು.

ಕೆಡುಕಿಗೆ ಆಕರ್ಷಣೆ ಹೆಚ್ಚು. ಬೀಡಿ, ಸಿಗರೇಟು ಸೇರಿದಂತೆ ತಂಬಾಕನ್ನು ಬೇರೆ ಬೇರೆ ರೂಪಗಳಲ್ಲಿ ಸೇವಿಸುವುದು ಆರೋಗ್ಯಕ್ಕೆ ಹಾನಿಕರ. ಇದು ಜೀವನದ ಜತೆಗೆ ಆರ್ಥಿಕ ನಷ್ಟವನ್ನು ತರುತ್ತದೆ. ಮಾನವಾಭಿವೃದ್ಧಿಗೆ ದೊಡ್ಡ ಕಂಟಕವಾಗಿರುವ ಈ ಪಿಡುಗನ್ನು ಮೂಲ ಬೇರು ಸಮೇತ ಇಲ್ಲವಾಗಿಸುವುದು ಅತ್ಯಗತ್ಯ ಎಂದು ಹೇಳಿದರು.

ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಮಾತನಾಡಿ, ಮಾದಕ ವಸ್ತುಗಳ ಉಪಯೋಗ ಸಾಮಾನ್ಯವಾಗಿ ಪ್ರಪಂಚಾದ್ಯಂತ ಕಂಡುಬರುವ ಒಂದು ದೊಡ್ಡ ಪಿಡುಗು. ಇದು ಗಂಡು-ಹೆಣ್ಣು, ಬಡವ-ಶ್ರೀಮಂತ ಎನ್ನುವ ಭೇದವಿಲ್ಲದೆ ಎಲ್ಲೆಡೆಯೂ ಕಂಡುಬರುತ್ತದೆ. ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಅರಿವು ಎಲ್ಲರಲ್ಲಿ ಮೂಡಿಸಬೇಕು ಎಂದು ಹೇಳಿದರು.

ಶಿಕ್ಷಕರಾದ ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ, ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ ಸೇರಿದಂತೆ ಮಕ್ಕಳು ಭಾಗವಹಿಸಿದ್ದರು.

## ಮಕ್ಕಳಲ್ಲಿ ರಾಷ್ಟ್ರೀಯ ಮೌಲ್ಯ ಬೆಳೆಸಲು ಶಾಲಾ ಸಂಸತ್ ಸಹಕಾರಿ-ಸುರೇಶಗೌಡ ಬಿರಾದಾರ




ವಿಜಯಪುರ: ಇಂದಿನ ಮಕ್ಕಳೇ ಇಂದಿನ ನಾಯಕರು. ಮಕ್ಕಳು ಸಹ ದೇಶದ ಪ್ರಜೆಗಳಾಗಿರುವುದರಿಂದ ಶಾಲಾ ಕಲಿಕೆಯ ಜತೆಗೆ ಮಕ್ಕಳ ಸಂಸತ್ತಿನ ಮೂಲಕ ಪ್ರಜಾಪ್ರಭುತ್ವದ ಮೂಲಾಂಶಗಳನ್ನು ಬೆಳೆಸಿ, ದೇಶಕ್ಕೆ ಉತ್ತಮ ನಾಗರಿಕರನ್ನು ಕಾಣಿಕೆಯಾಗಿ ನೀಡಲು ಸಾಧ್ಯ ಎಂದು ಮುಖ್ಯ ಶಿಕ್ಷಕ ಸುರೇಶಗೌಡ ಬಿರಾದಾರ ಹೇಳಿದರು. ಶುಕ್ರವಾರದಂದು ತಾಲೂಕಿನ ನಾಗಠಾಣ ಗ್ರಾಮದ ಶ್ರೀ ಮಲ್ಲಿಕಾರ್ಜುನ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಹಮ್ಮಿಕೊಂಡ 'ಮಕ್ಕಳ ಶಾಲಾ ಸಂಸತ್ತು-ಪ್ರತಿಜ್ಞಾ ವಿಧಿ ಬೋಧನೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ಸಂಸತ್-ಮಕ್ಕಳ ಪ್ರಾತಿನಿಧಿಕ ರಚನೆಯಾಗಿದ್ದು, ಶಾಲಾ ಸಿಬ್ಬಂದಿ ಜೊತೆ ಶಾಲಾ ನಿರ್ವಹಣೆಯಲ್ಲಿ ಮಕ್ಕಳನ್ನು ಪಾಲುದಾರರನ್ನಾಗಿ ಮಾಡುವ ಉದ್ದೇಶ ಹೊಂದಿದೆ. ಮಕ್ಕಳಲ್ಲಿ ರಾಷ್ಟ್ರೀಯ ಮೌಲ್ಯ ಬೆಳೆಸಲು ಇಂತಹ ಚಟುವಟಿಕೆಗಳು ಅಗತ್ಯವಾಗಿವೆ ಎಂದು ಹೇಳಿದರು.

ಮುಖ್ಯ ಅತಿಥಿ ಸಂತೋಷ ಬಂಡೆ ಮಾತನಾಡಿ, ಮಕ್ಕಳ ಸಂಸತ್ತಿನಿಂದ ಶಾಲಾ ದಾಖಲಾತಿ ಮತ್ತು ಹಾಜರಾತಿಯಲ್ಲಿ ಸುಧಾರಣೆ ಮಾಡಿ, ಶಾಲೆಯಲ್ಲಿ ಶಿಸ್ತಿನ ಪರಿಸರ ನಿರ್ಮಾಣ ಮಾಡಲು ಸಾಧ್ಯ. ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಶಾಲಾ ಶಿಕ್ಷಕರೇ ಮತಗಟ್ಟೆ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿದ್ದು ವಿಶೇಷವಾಗಿತ್ತು. ಮಕ್ಕಳು ಸಾಲಾಗಿ ಆಧಾರ ಕಾರ್ಡ್ ತೋರಿಸಿ, ಕೈಗೆ ಇಂಕ್ ಹಚ್ಚಿಕೊಂಡು ವಿದ್ಯುನ್ಮಾನ ಮತಯಂತ್ರದಲ್ಲಿ ತಮ್ಮ ಆಯ್ಕೆಯ ಅಭ್ಯರ್ಥಿಗೆ ಮತ ಚಲಾಯಿಸಿ ಸಂಭ್ರಮಿಸಿದರು.

ಶಿಕ್ಷಕರಾದ ರಾಘು ಮೊಗಳ, ಸಚೀನ ಅವಟಿ, ಲಕ್ಷ್ಮೀ ಮಸೂತಿ, ಜಯಶ್ರೀ ಬಿರಾದಾರ, ವೀರೇಶ ಹುಣಶ್ಯಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ದಿ.28ರಿಂದ ಹೋರ್ತಿಯಲ್ಲಿ ಶ್ರೀ ಸಿದ್ದಲಿಂಗ ದೇವರಿಂದ ಆಧ್ಯಾತ್ಮಿಕ ಪ್ರವಚನ



ತಾಳಿಕೋಟೆ, ನಡೆದಾಡುವ ದೇವರೆಂದೆ ಎಲ್ಲ ಭಕ್ತಸಮೂಹದ ಪ್ರೀತಿಗೆ ಪಾತ್ರರಾದ ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರಿಗೆ ಇಂಡಿ ತಾಲೂಕಿನ ಹೋರ್ತಿಯಲ್ಲಿ ಜರುಗಲಿರುವ ಜಾತ್ರೋತ್ಸವ ಕುರಿತು ಶ್ರೀ ರೇವಣಸಿದ್ಧೇಶ್ವರ ಸಂಸ್ಥೆಯು ಆಹ್ವಾನಿಸಿದೆ.

ಶ್ರೀ ರೇವಣಸಿದ್ಧೇಶ್ವರ ರಥ 'ೋತ್ಸವ ಅಂಗವಾಗಿ ಬರುವ ದಿನಾಂಕ 28ರಿಂದ ಅಗಸ್ಟ 11ರವರೆಗೆ 15 ದಿನಗಳಕಾಲ ಹೋರ್ತಿಯ ಶ್ರೀ ರೇವಣದ್ಧೇಶ್ವರ ದೇವಸ್ಥಾನದ ಆವರಣದಲ್ಲಿ ಜರುಗಲಿರುವ ಆಧ್ಯಾತ್ಮಿಕ ಪ್ರವಚನವನ್ನು ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರು ನೀಡಲಿದ್ದು ಈ ಪ್ರವಚನವು ಪ್ರತಿದಿನ ನಸುಕಿನ ಜಾವ 6:30 ಗಂಟೆಯಿಂದ 7:30ವರೆಗೆ ಒಂದು ಗಂಟೆಕಾಲ ನಡೆಯಲಿದೆ. ಈ ಹಿಂದೆ ಇದೇ ಶ್ರೀ ರೇವಣಸಿದ್ಧೇಶ್ವರ ದೇವಸ್ಥಾನದ ಆವರಣದಲ್ಲಿ ವಿಜಯಪುರದ ಜ್ಞಾನಯೋಗಾಶ್ರಮದ ಲಿಂ.ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳು ಆಧ್ಯಾತ್ಮಿಕ ಪ್ರವಚನ ನೀಡಿ ಭಕ್ತರನ್ನು ಸನ್ಮಾರ್ಗಕ್ಕೆ ಕೊಂಡೊಯ್ಯದದ್ದು ಈಗ ಸ್ಮರಿಸಬಹುದಾಗಿದೆ.

## ಗೋಕಾಕ ಜಿಲ್ಲೆ ರಚನೆಮಾಡಲು ಆಗ್ರಹ

ಗೋಕಾಕ: ರಾಜ್ಯದಲ್ಲಿಯೇ ಎರಡನೇಯ ಅತೀ ದೊಡ್ಡ ಜಿಲ್ಲೆಯಾಗಿರುವ ಬೆಳಗಾವಿ ಜಿಲ್ಲೆಯನ್ನು ವಿಭಜಿಸಿ ಗೋಕಾಕ ಜಿಲ್ಲೆ ರಚನೆಮಾಡಲು ಆಗ್ರಹಿಸಿ ಮತ್ತು ಈ ಕು-ರಿತು ಮುಖ್ಯಮಂತ್ರಿಗಳಲ್ಲಿ ನಿವೇದಿಸಲು ನಿಯೋಗವನ್ನು ಒಯ್ಯುವ ಕುರಿತು ಮನವಿ ಮಾಡಲು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿಯವರಿಗೆ ಗೋಕಾಕ ಜಿಲ್ಲಾ ಚಾಲನಾ ಸಮೀತಿಯ ಅಧ್ಯಕ್ಷರಾದ ಶ್ರೀ ಮುರುಘರಾಜೇಂದ್ರ ಸ್ವಾಮಿಗಳ ನೇತೃತ್ವದಲ್ಲಿ ಗೋಕಾಕ ನ್ಯಾಯವಾದಿಗಳ ಸಂಘದ ಸಹಯೋಗದೊಂದಿಗೆ ಶನಿವಾರ ದಿ.19 ರಂದು ಮು.10-30ಗಂಟೆಗೆ ಗೋಕಾಕ ಹಿಲ್‌ಗಾರ್ಡನದಲ್ಲಿರುವ ಅವರ ಸ್ವಗೃಹದ ಕಚೇರಿಯಲ್ಲಿ ಮನವಿಯನ್ನು ಸಲ್ಲಿಸಲಾಗುವದು.

ಅದಕ್ಕೆ ಪೂರಕವಾಗಿ ಗೋಕಾಕ ಮತ್ತು ಮೂಡಲಗಿ ತಾಲೂಕಿನ ಸಂಘ ಸಂಸ್ಥೆ ಮತ್ತು ಸಂಘಟನೆಗಳು, ಜಿಲ್ಲಾ ಹೋರಾಟಗಾರರು, ಚುನಾಯಿತ ಪ್ರತಿನಿಧಿಗಳು ಹಾಗೂ ಪಕ್ಷಾತೀತವಾಗಿ ಎಲ್ಲ ರಾಜಕೀಯ ಪಕ್ಷಗಳ ಮುಖಂಡರುಗಳು ಮುಂ: 10-00 ಗಂಟೆಗೆ ಗೋಕಾಕ ನಗರದ ಕೋರ್ಟ್ ಹತ್ತಿರವಿರುವ ಶ್ರೀ ಬಸವೇಶ್ವರ ವೃತ್ತದಲ್ಲಿ ಸೇರಬೇಕೆಂದು ಹಾಗೂ ಸಚಿವ-ರಿಗೆ ಮನವಿ ಸಲ್ಲಿಸುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಗೋಕಾಕ ಜಿಲ್ಲಾ ಚಾಲನಾ ಸಮೀತಿ ಪರವಾಗಿ ಹಿರಿಯ ರಾಜಕೀಯ ಧುರೀಣ ಅಶೋಕ ಪೂಜಾರಿ ಮತ್ತು ಗೋಕಾಕ ನ್ಯಾಯವಾದಿ ಸಂಘದ ಅಧ್ಯಕ್ಷರಾದ ಸುಭಾಸಗೌಡ ಪಾಟೀಲ ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

****

## ಪತ್ರಿಕಾ ದಿನಾಚರಣೆ ನಾಳೆ




ಮುಧೋಳ: ನಗರದ ರಾಜವಾಡೆ ಕಾಂಪ್ಲೆಕ್ಸ್ ಬಳಿ ಇರುವ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯಾಲಯದಲ್ಲಿ ಜು.20 ರಂದು ಬೆಳಗ್ಗೆ 10ಕ್ಕೆ ಪತ್ರಿಕಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಹುಬ್ಬಳ್ಳಿಯ ಹಿರಿಯ ಪತ್ರಕರ್ತ ಸುಶೀಲೇಂದ್ರಾಚಾರ್ಯ ಕುಂದರಗಿ ಉಪನ್ಯಾಸ ನೀಡಲಿದ್ದಾರೆ. ತಾಲೂಕು ಅಧ್ಯಕ್ಷ ಬಿ.ರತ್ನಾಕರಶೆಟ್ಟಿ ಅಧ್ಯಕ್ಷತೆಯಲ್ಲಿ ಜರುಗುವ ಕಾರ್ಯಕ್ರಮಕ್ಕೆ ಕಾನಿಪ ಜಿಲ್ಲಾಧ್ಯಕ್ಷ ಆನಂದ ಧಲಬಂಜನ, ರಾಜ್ಯ ಸಮಿತಿಯ ಸದಸ್ಯ ಮಹೇಶ ಅಂಗಡಿ, ಹಿರಿಯ ನಾಗರಿಕ ವೇದಿಕೆ ಅಧ್ಯಕ್ಷ ಕಲ್ಲಪ್ಪ ಸಬರದ ಭಾಗವಹಿಸಲಿದ್ದಾರೆ. ಎಂದು ಸಂಘದ ಪ್ರ.ಕಾ. ಎಂ.ಎಚ್.ನದಾಫ್ ತಿಳಿಸಿದ್ದಾರೆ.

## ಸರ್ಕಾರದ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಿ




ರಬಕವಿ-ಬನಹಟ್ಟಿ,ಜು18: ಸರ್ಕಾರ ಶೈಕ್ಷಣಿಕ ಅಭಿವೃದ್ಧಿಗಾಗಿ ಸಾಕಷ್ಟು ಸೌಲಭ್ಯಗಳನ್ನು ಒದಗಿಸುತ್ತಿದ್ದು, ವಿದ್ಯಾರ್ಥಿಗಳು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ರಬಕವಿ ಗುರುದೇವ ಬ್ರಹ್ಮಾನಂದ ಆಶ್ರಮದ ಶ್ರೀ ಗುರುಸಿದ್ದೇಶ್ವರ ಶ್ರೀಗಳು ಹೇಳಿದರು.

ಶುಕ್ರವಾರ ತಾಲೂಕಿನ ಯಲ್ಲಟ್ಟಿ ಸರ್ಕಾರಿ( ಆರ್‌ಎಂಎಸ್‌ಎ) ಪ್ರೌಢಶಾಲೆಯಲ್ಲಿ ಕೇಂದ್ರ ಯೋಜನಾ ಅನುಮೋದನ ಮಂಡಳಿಯಿಂದ 2022-23ನೇ ಸಾಲಿನಲ್ಲಿ ಮಂಜೂರಾದ ಹೆಚ್ಚುವರಿ ಕೊಠಡಿ ಮತ್ತು ಶೌಚಾಲಯಗಳ ನೂತನ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಸಾನಿಧ್ಯವಹಿಸಿ ಅವರು ಮಾತನಾಡಿದರು. ಸರ್ಕಾರ ಮಕ್ಕಳ ಸರ್ವತೋಮುಖ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಿಯೆಂದರು.

ಇದೇ ಸಂದರ್ಭದಲ್ಲಿ ಶಾಸಕ ಸಿದ್ದು ಸವದಿ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕ್ಷೇತ್ರದಲ್ಲಿ ಶೈಕ್ಷಣಿಕ ಅಭಿವೃದ್ಧಿಗಾಗಿ ಸಾಕಷ್ಟು ಅನೇಕ ಕ್ರಮಗಳನ್ನು ತೆಗೆದುಕೊಂಡಿದ್ದು, ಇನ್ನು ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ಮಹಾದೇವ ಮೋಪಗಾರ ರೆಡ್ಡಿ, ಎಸ್‌ಡಿಎಂಸಿ ಅಧ್ಯಕ್ಷ ಅಶೋಕ ಕಿತ್ತೂರ, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಕೆ. ಬಸಣ್ಣವರ, ಕೆ.ಎಂ. ಕೋಲೂರ, ಟಿ.ಬಿ. ತಳವಾರ, ಮುಖ್ಯೋಪಾಧ್ಯಾಯ ಎಸ್. ಆರ್. ಮರೆಗುದ್ದಿ ಸೇರಿದಂತೆ ಗ್ರಾಪಂ ಸದಸ್ಯರು, ಶಿಕ್ಷಕರಿದ್ದರು.

### ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ರೋಣ ಬಸ್ ನಿಲ್ದಾಣ ಪರಿಶೀಲನೆ

## ಸ್ವಚ್ಛತೆಗೆ ಪ್ರಥಮ ಆದ್ಯತೆ ವಹಿಸಲು ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ಸೂಚನೆ



ಗದಗ : ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಅವರ ನೇತೃತ್ವದಲ್ಲಿ ರೋಣ ತಾಲೂಕ ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಮಿಥುನ.ಜಿ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಸಮಿತಿ ಸದಸ್ಯರು ರೋಣ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಪರಿಶೀಲನೆ ನಡೆಸಿದರು.

ರೋಣ ಬಸ್ ನಿಲ್ದಾಣದ ಆವರಣವನ್ನು ಪರಿಶೀಲನೆ ನಡೆಸಿದ ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಬಿ.ಬಿ.ಅಸೂಟಿಯವರು ಮಾತನಾಡಿ ಅಗಸ್ಟ 5 ರಂದು ಪುನ: ಬಸ್‌ನಿಲ್ದಾಣಕ್ಕೆ ಸ್ವಚ್ಛತೆಯ ಪರಿಶೀಲನೆಗಾಗಿ ಆಗಮಿಸುವೆ. ಆ ಸಂದರ್ಭದಲ್ಲಿ ಬಸ್ ನಿಲ್ದಾಣ ಆವರಣ ಶುಚಿಯಾಗಿರಬೇಕು. ನಿಲ್ದಾಣದಲ್ಲಿನ ಸಾರ್ವಜನಿಕರಿಗೆ ಕೂರಲು ಉತ್ತಮ ಆಸನಗಳ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಅಲ್ಲದೇ ಪ್ಲಾಸ್ಟಿಕ್ ಮುಕ್ತ ನಿಲ್ದಾಣ ಆಗಬೇಕು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇರುವಂತೆ ನೋಡಿಕೊಳ್ಳಬೇಕು. ಶಾಲೆಯ ವಿದ್ಯಾರ್ಥಿಗಳಿಗೆ ಗ್ರಾಮಗಳಿಂದ ರೋಣ ಪಟ್ಟಣಕ್ಕೆ ಬಂದು ಹೋಗಲು ಸರಿಯಾದ ಬಸ್ಸಿನ ವ್ಯವಸ್ಥೆ ಮಾಡಬೇಕು ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸುವಂತೆ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಶೌಚಾಲಯ ವೀಕ್ಷಣೆ : ನಿಲ್ದಾಣದ ಆವರಣದಲ್ಲಿರುವ ಶೌಚಾಲಯದ ಪರಿಶೀಲನೆ ನಡೆಸಿ ಸ್ವಚ್ಛತೆಗೆ ಆದ್ಯತೆ ವಹಿಸಬೇಕು. ವಿಕಲಚೇತನರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮಾಡಬೇಕು. ಸಾರ್ವಜನಿಕರಿಂದ ನಿಗದಿತ ಶುಲ್ಕ ಪಡೆದು ಸಾರ್ವಜನಿಕರಿಗೆ ಶೌಚಾಲಯ ಬಳಕೆಗೆ ಅವಕಾಶ ಕಲ್ಪಿಸಬೇಕು . ಹೆಚ್ಚುವರಿ ಶುಲ್ಕ ವಸೂಲಿ ಮಾಡುತ್ತಿರುವ ಕುರಿತು ದೂರುಗಳು ಬಂದಿದ್ದು. ನಿಗದಿತ ದರದ ಬೋರ್ಡ್ ಹಾಕಬೇಕು ಪುನ: ದೂರುಗಳು ಬರದಂತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ನಿಗಾ ವಹಿಸಬೇಕೆಂದು ಸೂಚಿಸಿದರು.


ವಿಶ್ರಾಂತಿ ಕೊಠಡಿ : ನಿಲ್ದಾಣದ ಆವರಣದಲ್ಲಿರುವ ಶಿಶು ಆರೈಕೆ ವಿಶ್ರಾಂತಿ ಕೊಠಡಿಗೆ ಭೇಟಿ ನೀಡಿದ ಅವರು ವಿಶ್ರಾಂತಿ ಕೊಠಡಿಯಲ್ಲಿ ಶುದ್ಧ ಗಾಳಿ, ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು. ಜೊತೆಗೆ ಶುಭ್ರವಾಗಿರುವಂತೆ ನೋಡಿಕೊಳ್ಳಬೇಕು ಹಾಗೂ ಪ್ರತಿನಿತ್ಯ ವಿಶ್ರಾಂತಿ ಕೊಠಡಿಗೆ ಸಾರ್ವಜನಿಕರು ಆಗಮಿಸುವಂತೆ ಶುಚಿಯಾಗಿಟ್ಟುಕೊಳ್ಳಲು ಸಾರಿಗೆ ಸಂಸ್ಥೆಯ ಅಧಿಕಾರಿ.ಡಿ.ಸಿ. ದೇವರಾಜ ಅವರಿಗೆ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ನಿರ್ದೇಶನ ನೀಡಿದರು.

ಬಸ್ ನಿಲ್ದಾಣದ ಆವರಣದಲ್ಲಿ ಗ್ಯಾರಂಟಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದ ಸಮಿತಿ ಸದಸ್ಯರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಹಾಗೂ ಯಶಸ್ಸಿನ ಬಗ್ಗೆ ಅಭಿಪ್ರಾಯಗಳನ್ನು ಆಲಿಸಿದರು.

ಶಕ್ತಿ ಯೋಜನೆ ಮಹಿಳೆಯರ ಸಬಲತೆಗೆ ಶಕ್ತಿಯಾಗಿ ನಿಂತಿರುವುದು ಅಕ್ಷರಶ: ಸತ್ಯ. ಅದರಂತೆ ಸುಸ್ಥಿರ ಬದುಕಿಗಾಗಿ ಗೃಹಲಕ್ಷ್ಮಿ ಯೋಜನೆ, ಹಸಿವು ಮುಕ್ತ ಕರ್ನಾಟಕಕ್ಕೆ ಅನ್ನಭಾಗ್ಯ ಹಾಗೂ ಬಡವರ ಆಶಾಕಿರಣ ಗೃಹ ಜ್ಯೋತಿ, ನಿರುದ್ಯೋಗ ನಿವಾರಣೆಗೆ ಯುವನಿಧಿ ಸಹಕಾರಿಯಾಗಿವೆ ಎಂದು ಫಲಾನುಭವಿಗಳು ತಮ್ಮ ಮನದಾಳದ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್. ಸಚಿವರಾದ ಎಚ್.ಕೆ.ಪಾಟೀಲ ಸೇರಿದಂತೆ ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಗದಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಸಮಿತಿಯ ಉಪಾಧ್ಯಕ್ಷರಾದ ಪರಶುರಾಮ್ ಅಳಗವಾಡಿ ತಾಲೂಕ ಗ್ಯಾರಂಟಿ ಸಮಿತಿಯ ಸದಸ್ಯರಾದ ರಫೀಕ್ ಮೂಗನೂರ್ , ಬಿ.ಎಸ್, ರೆಡ್ಡೆರ ಸಂಗು.ನವಲಗುಂದ ಮೇಘರಾಜ್, ಸಿದ್ದಪ್ಪ ಯಾಳಗಿ, ಹನುಮಂತಪ್ಪ ಸ್ವಾಲದ, ಶ್ರೀಮತಿ.ನಾಜಬೇಗಂ ಎಲಿಗಾರ. ಬಸವರಾಜ್ ತಳವಾರ. ಸುರೇಶ್, ರೆಡ್ಡೆರ. ಎಲ್ಲಪ್ಪ ಕಿರೇಸೂರು ಶ್ರೀಮತಿ.ಗೀತಾ ಕೊಪ್ಪದ್ ಶರಣಪ್ಪ ಕುರಿಯೂರು ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಹಿರಿಯಚೇತನರ ಸೇವೆ ಸಮುದಾಯಕ್ಕೆ ಅವಶ್ಯಕ: ಬಿರಾದಾರ




ಜಮಖಂಡಿ: .ಇಂದಿನ ಯುಗದಲ್ಲಿ ಹಿರಿಯಚೇತನರ ಸೇವೆಗಳು ಸಮಾಜ ಮತ್ತು ಸಮುದಾಯಕ್ಕೆ ಅವಶ್ಯಕವಾಗಿದೆ. ಯುವ ಜನಾಂಗವನ್ನು ಸರಿದಾರಿಯಲ್ಲಿ ಮುನ್ನಡೆಸುವದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ವಿಜಯಪೂರ ಜಿಲ್ಲಾ ಸರಕಾರಿ ನಿವೃತ್ತ ನೌಕರರ ಜಿಲ್ಲಾಧ್ಯಕ್ಷ ಎಸ್.ಪಿ.ಬಿರಾದಾರ ಹೇಳಿದರು.

ನಗರದ ಬಸಬಭವನ ಸಭಾಭವನದಲ್ಲಿ ಶುಕ್ರವಾರ ರಾಜ್ಯ ಸರಕಾರಿ ನಿವೃತ್ತ ನೌಕರರ ಸಂಘ ಆಶ್ರಯದಲ್ಲಿ ಜಮಖಂಡಿ ತಾಲೂಕಾ ಸರಕಾರಿ ನಿವೃತ್ತ ನೌಕರರ ಸಂಘದ 38ನೇ ವಾರ್ಷಿಕ ಸಭೆ ಮತ್ತು 70 ವರ್ಷದ ಹಿರಿಯ ಚೇತನರ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಯುವಜನಾಂಗದಲ್ಲಿ ಗೌರವಿಸುವ ಸಂಸ್ಕೃತಿಯನ್ನು ರೂಢಿಸಬೇಕಾಗಿದೆ. ಕುಟುಂಬದ ಮೊಮ್ಮಕ್ಕಳು ಹೆಚ್ಚಾಗಿ ಅಜ್ಜ-ಅಜ್ಜಿಯನ್ನು ಅನುಕರಣೆ ಮಾಡುವ ಸ್ವಭಾವ ಹೊಂದಿರುವ ಹಿನ್ನೆಲೆಯಲ್ಲಿ ಮೊಮ್ಮಕ್ಕಳಿಗೆ ಗೌರವಿಸುವ ಸಂಸ್ಕೃತಿ, ಪರಂಪರೆಯನ್ನು ಬಳುವಳಿಯಾಗಿ ನೀಡಬೇಕಾಗಿದೆ. ಯುವಕರನ್ನು ದುಶ್ಚಟಗಳಿಂದ ದೂರ ಇಡುವ ಮೂಲಕ ಸಮಾಜ ರಕ್ಷಣೆ ಮಾಡಬೇಕಾಗಿದೆ. ಖಾಸಗಿಕ್ಷೇತ್ರ ಮತ್ತು ಸರಕಾರಿಇಲಾಖೆಗಳಲ್ಲಿ ಅಧಿಕಾರಿಗಳು ಹಿರಿಯಚೇತನರಿಗೆ ಗೌರವ ನೀಡುವ ಪರಂಪರೆ ಉಳಿಸಿಕೊಳ್ಳಬೇಕು ಎಂದರು.

ನಿರಾಣಿ ಸಮೂಹ ಸಂಸ್ಥೆಗಳ ನಿರ್ದೇಶಕ ಸಂಗಮೇಶ ನಿರಾಣಿ ಮಾತನಾಡಿ, ಹಿರಿಯ ನಾಗರಿಕರು ತಮ್ಮ ಆರೋಗ್ಯ ಕುರಿತು ಹೆಚ್ಚಿನ ಕಾಳಜಿ ವಹಿಸಬೇಕು. ನಿವೃತ್ತ ನೌಕರರು ಸಮಾಜದ ಮುಖವಾಣಿಯಾಗಿ ಸಕ್ರೀಯವಾಗಿ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕು. ನಿವೃತ್ತ ನೌಕರರ ಸಂಘದ ಜತೆಗೆ ನಿರಂತರವಾಗಿ ನಾವು ಗುರುತಿಸಿಕೊಂಡಿದ್ದೇವೆ ಎಂದರು.

ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷ ವಿ.ಬಿ.ಗೋವಿಂದಪ್ಪನವರ ಮಾತನಾಡಿ, ಪ್ರಮುಖ ಬೇಡಿಕೆ ಈಡೇರಿಕೆಗಾಗಿ ಕೇಂದ್ರ ಸರಕಾರದ ವಿರುದ್ಧ ಪ್ರತಿಭಟನೆ ಆರಂಭಗೊಂಡಿದೆ. ದೇಶದಲ್ಲಿ ಸರಕಾರಿ ನಿವೃತ್ತ ನೌಕರರ ಬೃಹತ್ ಪ್ರತಿಭಟನೆ ನಡೆಯಲಿದೆ. ಜುಲೈ 21ರಂದು ಜಮಖಂಡಿ ನಗರದಲ್ಲಿ ಪ್ರತಿಭಟನೆಯೊಂದಿಗೆ ತಹಶೀಲ್ದಾರ ಅವರಿಗೆ ಮನವಿ ಸಲ್ಲಿಸಲಾಗುವದು. ಶೀಘ್ರದಲ್ಲಿ ಮುಧೋಳದಲ್ಲಿ ಜಿಲ್ಲಾಮಟ್ಟದ ಸಮಾವೇಶ ಜರುಗಲಿದೆ ಎಂದರು.

ನಗರಸಭೆ ಅಧ್ಯಕ್ಷ ಪರಮಾನಂದ ಗವರೋಜಿ ಕಾರ್ಯಕ್ರಮ ಉದ್ಘಾಟಿಸಿದರು. ರಾಜ್ಯ ಸರಕಾರಿ ನಿವೃತ್ತ ನೌಕರರ ಸಂಘದ ತಾಲೂಕಾಧ್ಯಕ್ಷ ಎಚ್.ಎಂ.ಶೆಟ್ಟರ ಅಧ್ಯಕ್ಷತೆ ವಹಿಸಿದ್ದರು. ಬಸವ ಸಮೀತಿ ಅಧ್ಯಕ್ಷ ಕಾಡು ಮಾಳಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸರಕಾರದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಿ.ಪಿ.ಮೇಗಾಡಿ, ಧರೆಪ್ಪ ಮಾಳಿ, ಅಶೋಕ ಅರ್ಜುನಗಿ, ನೀಲಾಂಬಿಕಾ ಅವಟಗೇರ, ರತ್ನವ್ವ ಚಲವಾದಿ, ದುಂಡಪ್ಪ ಹೆಗ್ಗೊಂಡ, ಶಾರದಾ ಹಂಚಿನಾಳ ಸಹಿತ 25 ಜನರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಪಿ.ಎನ್.ಪಾಟೀಲ, ನಿವೃತ್ತ ಡಿ.ವೈ.ಎಸ್.ಪಿ. ಸಿ.ಪಿ.ಜನವಾಡ, ಬಾಲ ವಿಕಾಸ ಅಕಾಡೆಮಿ ಹೆಚ್.ವೈ.ಜೀರಾಳೆ, ರಾಜ್ಯ ಸರಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಪಿ.ಬಿ.ಅಜ್ಜನವರ ಸಹಿತ ಹಲವರು ಇದ್ದರು.

ಕಲಾವಿದ ಬಿ.ಎನ್.ಅಸ್ಕಿ ಪ್ರಾರ್ಥಿಸಿದರು. ಸಂಘದ ಗೌರವಾಧ್ಯಕ್ಷ ಉಮೇಶ ಗಸ್ತಿ ಸ್ವಾಗತಿಸಿದರು. ನಿವೃತ್ತ ಅಧ್ಯಾಪಕ ಎಸ್. ಆರ್.ಪಾಟೀಲ, ನಿವೃತ್ತ ಶಿಕ್ಷಕರಾದ ಸಂಗಮೇಶ ಗಾಣಿಗೇರ, ಎಂ.ಡಿ.ಸಂಖ ನಿರೂಪಿಸಿದರು. ನಿವೃತ್ತ ಶಿಕ್ಷಕ ಪಾಂಡು ತುಳಸಿಗೇರಿ ವಂದಿಸಿದರು.

### ರಬಕವಿಯಲ್ಲಿ ಅದ್ದೂರಿಯಾಗಿ ಜರುಗಿದ ದುರ್ಗಾದೇವಿ ಜಾತ್ರೆ

## ಮೂರು ವರ್ಷಕ್ಕೊಮ್ಮೆ ನಡೆಯುವ ಜಾತ್ರೆಯಲ್ಲಿ ಭಂಡಾರದಲ್ಲಿ ಮಿಂದೆದ್ದ ಭಕ್ತರು

ರಬಕವಿ-ಬನಹಟ್ಟಿ,ಜು18: ರಬಕವಿ ಸಿಕ್ಕಲಗಾರ ಸಮುದಾಯದವ-ರಿಂದ ಮೂರು ವರ್ಷಗಳಿಗೊಮ್ಮೆ ಜರುಗುವ ದುರ್ಗಾದೇವಿ ಜಾತ್ರೆ ಶುಕ್ರವಾರ ಅದ್ದೂರಿಯಾಗಿ ಜರುಗಿತು.

ಶುಕ್ರವಾರ ಬೆಳಿಗ್ಗೆ ದೇವಿಗೆ ವಿಶೇಷ ಪೂಜೆ, ಅಭಿಷೇಕ ಹಾಗೂ ಹೋಮ-ಹವನಗಳು ಜರುಗಿದವು, ನಂತರ ನಗರದ ಪ್ರಮುಖ ಬೀದಿಗಳಲ್ಲಿ ದೇವಿಯ ಮೆರವಣಿಗೆಯ ಜರುಗಿತು. ದೇವಿ ಪಲ್ಲಕ್ಕಿಯೊಂದಿಗೆ ಸಾವಿರಾರು ಭಕ್ತರು ಭಂಡಾರದಲ್ಲಿ ಮಿಂದೆದ್ದರು. ನಂತರ ಉಪಪೊಲೀಸ್ ಠಾಣೆ ಹಿಂಭಾದಲ್ಲಿರುವ ದೇವಸ್ಥಾನದ ಆವರಣದಲ್ಲಿ ಪ್ರಸಾದ ಜರುಗಿತು. ಮಹಾರಾಷ್ಟ್ರ, ಗೋವಾ, ಮಧ್ಯಪ್ರದೇಶ ಹಾಗೂ ಆಂದ್ರಪ್ರದೇಶದಿಂದಲೂ ಭಕ್ತರು ಭಾಗವಹಿಸಿ ದೇವಿ ಆಶೀರ್ವಾದ ಪಡೆದುಕೊಂಡರು.



# ಕೌಶಲ್ಯಾಧಾರಿತ ಉದ್ಯೋಗಗಳಿಂದ ಆರ್ಥಿಕವಾಗಿ ಸಬಲರಾಗಲು ಸಾಧ್ಯ



ಬಸವನಬಾಗೇವಾಡಿ, : ಇಂದು ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಬದುಕನ್ನು ಮೇಲ್ಮಟ್ಟಕ್ಕೆ ಕೊಂಡೊಯ್ಯುವಂತಹ ಕೌಶಲ್ಯಾಧಾರಿತ ಉದ್ಯೋಗಗಳು ಸೃಷ್ಟಿಯಾಗಿವೆ. ಇದನ್ನು ಪ್ರತಿಯೊಬ್ಬರೂ ಅರಿತುಕೊಂಡು ತಮ್ಮ ಬದುಕಿನಲ್ಲಿ ಉದ್ಯೋಗ ಮಾಡುವ ಮೂಲಕ ತಮ್ಮ ಬದುಕನ್ನು ಉತ್ತಮವಾಗಿ ಕಳೆಯಬೇಕು ಎಂದು ಬಿಎಲ್‌ಇಡಿ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಸಮಾಜಶಾಸ್ತ್ರ ಪ್ರಾಧ್ಯಾಪಕ ಡಾ.ವೈ.ಬಿ.ನಾಯಕ ಹೇಳಿದರು.

ಪಟ್ಟಣದ ಬಿಎಲ್‌ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕೌಶಲ್ಯಾಭಿವೃದ್ಧಿ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದು ಪದವಿ ಎಂಬುವದು ನಿರುದ್ಯೋಗ ಸೃಷ್ಟಿ ಮಾಡುವ ಹಂತ ಎಂದು ಬಹುತೇಕರು ನಂಬಿದ್ದಾರೆ. ಪದವಿ ಒಂದೇ ನಮ್ಮ ಬದುಕಿಗೆ ಆಸರೆಯಾಗಿ ನಿಲ್ಲುವಂತದ್ದು ಅಲ್ಲ. ಕಲಿಕೆಯ ಜೊತೆ ಜೊತೆಗೆ ಗಳಿಕೆಯನ್ನು ಮಾಡಿಕೊಳ್ಳುವುದು ಜಾಣರ ಲಕ್ಷಣವಾಗಿದೆ ಎಂದರು.

ಇಂದು ಮಹಿಳೆಯರು ಮನೆಯಲ್ಲಿಯೇ ಕುಳಿತುಕೊಂಡು ಹೊಲಿಗೆ, ವಸ್ತ್ರ ವಿನ್ಯಾಸ ಮೆಹಂದಿ, ಕಂಪ್ಯೂಟರ್, ಪ್ಯಾಶನ್ ಡಿಸೈನ್ ಮುಂತಾದ ಉತ್ತಮ ಹಣ ಗಳಿಕೆಯ ಚಿಕ್ಕ ಚಿಕ್ಕ ಉದ್ಯೋಗಗಳನ್ನು ಮಾಡುವ ಮೂಲಕ ಆರ್ಥಿಕವಾಗಿ ಸಬಲರಾಗಲು ಸಾಧ್ಯವಿದೆ. ವ್ಯವಹಾರಿಕ ಜ್ಞಾನವಿದ್ದ ಪ್ರತಿಯೊಬ್ಬ ವ್ಯಕ್ತಿಯೂ ಸ್ಪರ್ಧೆಯಲ್ಲಿ ತನ್ನನ್ನು ತಾನು ತೊಡಗಿಸಿಕೊಂಡು ಯಶಸ್ವಿ ಜೀವನ ಸಾಗಿಸಲು ಸಾಧ್ಯವಿದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯು ಒಂದಿಲ್ಲೊಂದು ಹೊಸ ಹವ್ಯಾಸವನ್ನು, ಕಲೆಯನ್ನು ಹೊಂದಿರುತ್ತಾನೆ. ತನ್ನ ವಿಶೇಷವಾದ ಕಲೆ ಮತ್ತು ಹವ್ಯಾಸಗಳನ್ನೇ ಮೆಟ್ಟಿಲುಗಳನ್ನಾಗಿ ಮಾಡಿಕೊಂಡು ತನ್ನ ಬದುಕಿನಲ್ಲಿ ಮುನ್ನಡೆದದ್ದೇ ಆದರೆ ಆರ್ಥಿಕವಾಗಿ, ಸಾಮಾಜಿಕವಾಗಿ ಒಟ್ಟಿನಲ್ಲಿ ಸಾರ್ವತ್ರಿಕವಾಗಿ ಅವನು ಮೇಲ್ಮಟ್ಟಕ್ಕೆ ಬಂದು ಗೌರವದ ಸ್ಥಾನ ಪಡೆದುಕೊಳ್ಳಲು ಸಾಧ್ಯವಿದೆ. ಕೌಶಲ್ಯಾಧಾರಿತ ದುಡಿಮೆ ಇಲ್ಲದೇ ಇರುವುದರಿಂದ ನಾವು ಬಡವರಾಗುತ್ತಿದ್ದೇವೆ. ಆದ್ದರಿಂದ ಪ್ರತಿಯೊಬ್ಬರೂ ಒಂದಿಲ್ಲೊಂದು ವಿಶೇಷವಾದ ಕೌಶಲ್ಯವನ್ನು ರೂಢಿಸಿಕೊಂಡು ಬದುಕಿನಲ್ಲಿ ಮುನ್ನಡೆದರೆ ಬದುಕು ಉತ್ತಮವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಾಂಸ್ಕೃತಿಕ ವಿಭಾಗ ಮತ್ತು ಕನ್ನಡ ವಿಷಯದ ಮುಖ್ಯಸ್ಥ ಡಾ.ಬಿ.ಎಂ.ಸಾಲವಾಡಗಿ, ಸಂಖ್ಯಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಎ.ಟಿ.ಶ್ರೀನಿವಾಸ, ದೈಹಿಕ ನಿರ್ದೇಶಕ ಪ್ರೊ.ಶಿವಮೂರ್ತಿ ಚಿಕ್ಕನರ್ತಿ, ಡಾ.ಶ್ರೀರಾಮ ಬಿಜಾಪುರ, ಎಂ.ಕೆ.ಯಾದವ, ಪಿ.ಎಸ್.ನಾಟೀಕಾರ, ಎಸ್.ಜೆ.ಸೂರ್ಯವಂಶಿ, ವ್ಹಿ.ಎನ್. ರಜಪೂತ, ಆರ್.ಎನ್.ರಾಠೋಡ, ಆರ್.ಎಂ.ಮುಜಾವರ ಇದ್ದರು. ಡಾ.ಬಿ.ಎಂ.ಸಾಲವಾಡಗಿ ನಿರೂಪಿಸಿದರು. ಡಾ.ಎಸ್.ಬಿ.ಜನಗೊಂಡ ವಂದಿಸಿದರು.

## ಮೂವರು ಪದವಿ ವಿದ್ಯಾರ್ಥಿಗಳ ಶುಲ್ಕ ತುಂಬಿದ ಹಳೆಯ ವಿದ್ಯಾರ್ಥಿ ಸಂಘದ ಸದಸ್ಯರು



ಬಸವನಬಾಗೇವಾಡಿ, : ಕಲಿಕೆಯ ಹಂಬಲ ಹೊಂದಿರುವ ಬಡ ವಿದ್ಯಾರ್ಥಿಗಳಾದ ತಾಲೂಕಿನ ಸವಳಹಳ್ಳ ತಾಂಡಾದ ಅಂಕಿತಾ ರಾಠೋಡ, ಸಾಹೀಲ ಚವ್ಹಾಣ, ಚೇತನಕುಮಾರ ರಜಪೂತ ಅವರ ಪದವಿ ವ್ಯಾಸಂಗ ಶುಲ್ಕವನ್ನು ತುಂಬುವ ಮೂಲಕ ಸ್ಥಳೀಯ ಬಿಎಲ್‌ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಹಳೆ ವಿದ್ಯಾರ್ಥಿ ಸಂಘದ ಸದಸ್ಯರಾದ ವಿನುತ ಕಲ್ಲೂರ (ವಿವೇಕ ಬ್ರಿಗೇಡ್) ಸಚೀನ ಕಲ್ಲೂರ ಅವರು ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ಆರ್ಥಿಕವಾಗಿ ಸಹಾಯ ಮಾಡಿದ್ದಾರೆ. ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಅವರಿಗೆ ಗುರುವಾರ ಮೂವರು ವಿದ್ಯಾಥಿಗಳ ಪದವಿ ಶುಲ್ಕವನ್ನು ನೀಡಿದರು. ಮೂವರು ವಿದ್ಯಾರ್ಥಿಗಳ ಪದವಿ ಶುಲ್ಕವನ್ನು ಸ್ವೀಕರಿಸಿದ ಪ್ರಾಚಾರ್ಯರು ಬಡ ವಿದ್ಯಾರ್ಥಿಗಳ ಕಲಿಕೆಗೆ ಧನಸಹಾಯ ಮಾಡಿದ ಮಹನೀಯರ ಕಾರ್ಯ ಶ್ಲಾಘನೀಯವಾಗಿದೆ ಎಂದರು.

ಧನ ಸಹಾಯ ಪಡೆದ ವಿದ್ಯಾರ್ಥಿಗಳು ನಾವು ನಿರಂತರ ಅಧ್ಯಯನ ಮಾಡುವ ಮೂಲಕ ಮಹಾವಿದ್ಯಾಲಯಕ್ಕೆ, ಧನಸಹಾಯ ಮಾಡಿದ ಮಹನೀಯರಿಗೆ ಚ್ಯುತಿ ಬಾರದಂತೆ ಉತ್ತಮ ಸಾಧನೆ ಮಾಡುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಹಳೆ ವಿದ್ಯಾರ್ಥಿ ಸಂಘದ ಸದಸ್ಯರಾದ ಪೃಥ್ವಿರಾಜ ನಾಯ್ಕೋಡಿ, ಶಿವಾನಂದ ತೋಳನೂರ, ಮಹಾವಿದ್ಯಾಲಯ ಸಿಬ್ಬಂದಿಗಳಾದ ಡಾ.ಶೋಭಾ ಜನಗೊಂಡ, ವ್ಹಿ.ಎನ್.ರಜಪೂತ ಇದ್ದರು.

### ಸಾಂಖ್ಯಿಕ ದಿನಾಚರಣೆ : ಉತ್ತಮ ಕಾರ್ಯನಿರ್ವಹಿಸಿದ ಅಧಿಕಾರಿ ಸಿಬ್ಬಂದಿಗೆ ಸನ್ಮಾನ

# ಸಂಖ್ಯಾಶಾಸ್ತ್ರ ದೇಶದ ಅಭಿವೃದ್ಧಿಗೆ ದಿಕ್ಸೂಚಿ : ಕುಲಕರ್ಣಿ



ಬಾಗಲಕೋಟೆ: : ವ್ಯಕ್ತಿ, ಸಮಾಜ ಹಾಗೂ ದೇಶದ ಬೆಳವಣಿಗೆಯಲ್ಲಿ ಸಂಖ್ಯಾಶಾಸ್ತ್ರ ದಿಕ್ಸೂಚಿಯಾಗಿದೆ ಎಂದು ಜಮಖಂಡಿ ಬಿ.ಎಲ್.ಡಿ.ಎ ಸಂಸ್ಥೆಯ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ವಿ.ಎಸ್.ಕುಲಕರ್ಣಿ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿರುವ ಆರೋಗ್ಯ ಇಲಾಖೆಯ ಸಭಾಭವನದಲ್ಲಿ ಶುಕ್ರವಾರ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಜನ್ಮ ದಿನಾಚರಣೆ ಅಂಗವಾಗಿ ಆಚರಿಸಲ್ಪಡುವ ಸಾಂಖ್ಯಿಕ ದಿನಾಚರಣೆ ಕಾರ್ಯಕ್ರಮದ ಉಪನ್ಯಾಸಕರಾಗಿ ಆಗಮಿಸಿ ಮಾತನಾಡಿದ ಅವರು ಜಗತ್ತಿನಲ್ಲಿ ಮನುಷ್ಯ ಹುಟ್ಟಿನಿಂದ ಮರಣದ ವರೆಗೆ ಹಾಗೂ ಪ್ರತಿ ಅಡುಗೆ ಮನೆಯಿಂದ ದೇಶದ ಆರ್ಥಿಕ ವ್ಯವಸ್ಥೆವರೆಗೆ ಸಂಖ್ಯಾಶಾಸ್ತ್ರ ಅಮೂಲ್ಯ ಪಾತ್ರ ವಹಿಸುತ್ತದೆ ಎಂದರು.

ಇತ್ತೀಚಿಗೆ ಗುಜರಾತನ ಅಹಮದಾಬಾದ್‌ನಲ್ಲಿ ನಡೆದ ವಿಮಾನ ಅಪಘಾತದಲ್ಲಿ ಕಣ್ಣಿಗೆ ಬರುವುದು ಮರಣ ಸಂಖ್ಯೆಯಾಗಿದ್ದು, ಜೀವನದಲ್ಲಿ ಧನಾತ್ಮಕವಾಗಲಿ, ಋಣಾತ್ಮಕವಾಗಲಿ ಪ್ರತಿಯೊಂದಕ್ಕೂ ಸಂಖ್ಯಾಶಾಸ್ತ್ರದ ಅವಲಂಬಿತವಾಗಿದೆ. ಆಸ್ಪತ್ರೆಯಲ್ಲಿ 10 ಎಂ.ಎಲ್ ರಕ್ತದ ಮೇಲೆ ನಮ್ಮ ದೇಹವನ್ನು ಅಳೆಯುತ್ತಾರೆ. ಪ್ರತಿಯೊಂದು ಹಂತದಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಕರೋನಾ ಸಮಯದಲ್ಲಿ ಹಿರಿಯರು ಹಾಗೂ ಕಿರಿಯರನ್ನು ಕಳೆದುಕೊಂಡಿದ್ದೇವೆ. ಇಂತಹ ಸಮಯದಲ್ಲಿ ವ್ಯಾಕ್ಸಿನ್ ಕೊಡುವ ಸಂದರ್ಭ ಬಂದಾಗಿ 65 ವರ್ಷ ಮೇಲ್ಪಟ್ಟ ಜನರಿಗೆ ಕೊಡಲಾಗುತ್ತಿ. ಆ ಜನ ಕೇವಲ ಶೇ.27 ರಷ್ಟು ಇತ್ತು. ಈ ಮಾಹಿತಿ ದೊರೆತಿದ್ದು, ಸಂಖ್ಯಾಶಾಸ್ತ್ರದಿಂದ ಎಂದರು.

ಪ್ರತಿಯೊಂದು ಸಂಖ್ಯಾಶಾಸ್ತ್ರ ಬೇರೆ ಬೇರೆ ಸಂದರ್ಭಗಳಲ್ಲಿ ಬಳಸುವಾಗ ಒಂದು ನಿರ್ಧಿಷ್ಟತೆ ಇದ್ದು, ಯಾವುದನ್ನು ಎಲ್ಲಿ ಬಳಸಿದರೆ ಸೂಕ್ತ ಎಂಬುದನ್ನು ಅರಿಯಬೇಕಿದೆ. ಒಂದು ದತ್ತಾಂಶ ಬೇರೆ ಬೇರೆ ದತ್ತಾಂಶದ ಮೇಲೆ ಅವಲಂಬನೆಯಾಗುತ್ತದೆ. ದತ್ತಾಂಶಗಳ ನಿಖರತೆಯನ್ನು ಸ್ಪಷ್ಟವಾಗಿ ತಿಳಿದಿದ್ದೆ ಆದರೆ ದತ್ತಾಂಶಗಳ ಪ್ರಮುಖತೆ ಹಾಗೂ ಬಳಕೆ ಅತ್ಯಂತ ಸುಭಕಾರಿಯಾಗಿರುತ್ತದೆ. ಒಂದು ವೇಳೆ ದತ್ತಾಂಶಗಳನ್ನು ಪ್ರತ್ಯೇಕವಾಗಿ ತೆಗೆದುಕೊಂಡರೆ ಹಾನಿಕಾರ ಆಗುವ ಸಾಧ್ಯತೆ ಇರುತ್ತದೆ. ಕಾರ್ಯಕ್ರಮ ಇರಬಹುದು, ಯೋಜನೆ, ತಯಾರಿ ಮುಖ್ಯವಾಗುತ್ತದೆ ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ರವೀಂದ್ರ ಹಕಾಟಿ ಮಾತನಾಡಿ ದೇಶ ಪ್ರಗತಿ ಹೊಂದಬೇಕಾದರೆ ಸಂಖ್ಯಾಶಾಸ್ತ್ರ ಪ್ರಮುಖ ಪಾತ್ರ ವಹಿಸುತ್ತದೆ. ಪ್ರತಿಯೊಂದು ಇಲಾಖೆಯಲ್ಲಿ ಸಂಖ್ಯಾ ಪಿತಾಮಹ ಇದ್ದಾರೆ. ಪ್ರತಿಯೊಂದು ಯೋಜನೆಗಳನ್ನು ಅಂಕಿ ಸಂಖ್ಯೆ ಆಧಾರದ ಮೇಲೆ ಲೆಕ್ಕ ಹಾಕಲಾಗುತ್ತದೆ. ತೋಟಗಾರಿಕೆ ಮತ್ತು ಕೃಷಿಗೆ ಸಂಬಂಧಿಸಿದ ಮಾಹಿತಿ ಕಲೆ ಹಾಕಲಾಗುತ್ತದೆ. ಪ್ರತಿಯೊಂದು ವ್ಯವಸ್ಥೆಯಲ್ಲಿ ಅಂಕಿ ಅಂಶಗಳು ಬಹಳ ಮುಖ್ಯವಾಗಿವೆ ಎಂದರು.

ಕಾರ್ಯಕ್ರಮದ ಉದ್ಘಾಟಕರು ಹಾಗೂ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಅವರು ಪ್ರಾರಂಭದಲ್ಲಿ ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಪ್ರಾರಂಭದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಜಿ.ಪಿ.ಸುಂಕದ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ಜಿಲ್ಲಾ ಪಂಚಾಯತಿಯ ನಿವೃತ್ತ ಯೋಜನಾ ಅಂದಾಜು ಮತ್ತು ಮೌಲ್ಯಮಾಪಣಾಧಿಕಾರಿ ಎಂ.ಆರ್.ಬಾಡಗಿ, ನಿವೃತ್ತ ಸಹಾಕಯ ಸಾಂಖ್ಯಿಕ ಅಧಿಕಾರಿ ಎಂ.ಎಸ್.ಘಟನೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ

2023–24ನೇ ಸಾಲಿನಲ್ಲಿ ಜಮಖಂಡಿ ತಹಶೀಲ್ದಾರ ಕಚೇರಿಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸಾಂಖ್ಯಿಕ ನಿರೀಕ್ಷಕ ರಾಜೇಶ ದೊಡಮನಿ, 2024–25ನೇ ಸಾಲಿನಲ್ಲಿ ಬಾಗಲಕೋಟೆ ತಹಶೀಲ್ದಾರ ಕಚೇರಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಗಣತಿದಾರ ಸಿ.ಎಸ್.ಕೋಟಿ ಅವರನ್ನು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸನ್ಮಾನ ಮಾಡಿ ಅಭಿನಂದನೆ ಸಲ್ಲಿಸಿದರು.

## ಬೆಳೆ ವಿಮಾ ಯೋಜನೆ ಜಿಲ್ಲೆಯಲ್ಲಿ ಅನುಷ್ಠಾನ

ಗದಗ : 2025–26 ನೇ ಸಾಲಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ (ಆರ್‌ಡಬ್ಲಯುಬಿಸಿಐಎಸ್) ಬೆಳೆ ವಿಮಾ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ಅನುಷ್ಟಾನಗೊಳಿಸಲು ಸರ್ಕಾರದ ಆದೇಶದಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ದಾಳಿಂಬೆ, ಪಪ್ಪಾಯ, ದ್ರಾಕ್ಷಿ ಹಾಗೂ ಮಾವು ಬೆಳೆಗಳನ್ನು ಬೆಳೆದ ರೈತರು ವಿಮಾ ಕಂತನ್ನು ಪಾವತಿಸಲು ದಿನಾಂಕ: 31.07.2025 ರಂದು ಕೊನೆಯ ದಿನವಾಗಿದ್ದು, ಬೆಳೆ ಸಾಲ ಪಡೆದ ರೈತರು ಸಂಬಂಧಿತ ಬ್ಯಾಂಕ್‌ಗಳ ಮೂಲಕ ಹಾಗೂ ಬೆಳೆ ಸಾಲ ಪಡೆಯದ ರೈತರು ಬ್ಯಾಂಕ್ ಅಥವಾ ಸಾಮಾನ್ಯ ಸೇವಾ ಕೇಂದ್ರ ಕಾಮನ್ ಸರ್ವಿಸ್ ಸೆಂಟರ್ ಸಿಎಸ್‌ಸಿ ಮೂಲಕ ಕೂಡಾ ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ.

ಬೆಳೆವಾರು ಪ್ರತಿ ಎಕರೆಗೆ ವಿಮಾ ಕಂತು ಮಾವು ರೂ.1600 ದ್ರಾಕ್ಷಿ ರೂ.5600 ದಾಳಿಂಬೆ ರೂ.2540 ಹಾಗೂ ಪಪ್ಪಾಯ ರೂ.2680 ಗಳನ್ನು ನಿಗದಿಪಡಿಸಲಾಗಿರುತ್ತದೆ. ಪಹಣಿ ಪತ್ರಿಕೆ, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ ಮತ್ತು ಆಧಾರ ಕಾರ್ಡನ ಪ್ರತಿ ಸೇರಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಕಚೇರಿ ಅಥವಾ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ಎಂದು ತೋಟಗಾರಿಕೆ ಉಪ ನಿರ್ದೇಶಕರು ತಿಳಿಸಿರುತ್ತಾರೆ.

## ಬೆಳೆಗಳಿಗೆ ವಿಮಾ ಸೌಲಭ್ಯ ಅಧಿಸೂಚನೆ

ಗದಗ : 2025–26 ನೇ ಸಾಲಿನ ಮುಂಗಾರು ಹಂಗಾಮು ಅವಧಿಗೆ ಸರ್ಕಾರದ ಕೃಷಿ ಇಲಾಖೆಯ ಅಧಿಸೂಚನೆಯಂತೆ ಗದಗ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗಳಿಗೆ ವಿಮಾ ಸೌಲಭ್ಯ ಅಧಿಸೂಚನೆ ಹೊರಡಿಸಲಾಗಿದೆ.

ನೀರಾವರಿ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ದಿನಾಂಕ 31–07–2025 ರಂದು ಕೊನೆಯ ದಿನವಾಗಿರುತ್ತದೆ. ಮಳೆಯಾಶ್ರಿತ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ದಿನಾಂಕ: 16–08–2025 ರಂದು ಕೊನೆಯ ದಿನವಾಗಿದೆ.

ಆಸಕ್ತ ರೈತರು ವಿಮೆಗೆ ನೋಂದಾಯಿಸಿಕೊಳ್ಳಲು ಅರ್ಜಿ ಪತ್ರ, ಪಹಣಿ, ಆಧಾರ ಸಂಖ್ಯೆ ಜೋಡಿಸಿದ ಬ್ಯಾಂಕ್ ಖಾತೆ ಪುಸ್ತಕದ ನಕಲು ಪ್ರತಿ ಹಾಗೂ ಸ್ವಯಂ ಘೋಷಿತ ಬೆಳೆ ದೃಢೀಕರಣ ಪತ್ರದೊಂದಿಗೆ ಹತ್ತಿರದ ರಾಷ್ಟ್ರೀಕೃತ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಕೇಂದ್ರಗಳಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಇಲಾಖೆ, ಕೃಷಿ ಇಲಾಖೆ ಕಛೇರಿಗಳಿಗೆ ಭೇಟಿ ನೀಡಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದೆಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿರುತ್ತಾರೆ.

# ಯಲಬುರ್ಗಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ



ಕೊಪ್ಪಳ : ರಾಜ್ಯ ಬಾಲ ಭವನ ಸೊಸೈಟಿ ಬೆಂಗಳೂರು, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸಮಿತಿ ಕೊಪ್ಪಳ, ತಾಲೂಕು ಬಾಲ ಭವನ ಸಮಿತಿ ಯಲಬುರ್ಗಾ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಹಯೋಗದಲ್ಲಿ ಗುರುವಾರ ಯಲಬುರ್ಗಾದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂಬರ್ 01ರಲ್ಲಿ ಮಕ್ಕಳ ಕಲಾ ಪ್ರತಿಭೆ ಕಾರ್ಯಕ್ರಮ ಆಯೋಜನೆ ಮಾಡಲಾಯಿತು.

ಯಲಬುರ್ಗಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬೇಟ್ಟದೇಶ ಮಾಳೆಕೊಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ಮಾತನಾಡಿ, ಮಕ್ಕಳಲ್ಲಿ ಸೃಜನಾತ್ಮಕ ಕಲೆಗಳನ್ನು ಬೆಳೆಸಿಕೊಳ್ಳಲು ವಿವಿಧ ಸ್ಪರ್ಧೆಗಳು ಮತ್ತು ಕಾರ್ಯಕ್ರಮದ ಅವಶ್ಯಕತೆಯಿದೆ. ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಅವರಲ್ಲಿ ಬೌದ್ಧಿಕ ಮಾನಸಿಕ ಹಾಗೂ ದೈಹಿಕ ಸದೃಢತೆಗೆ ಉಪಯೋಗವಾಗುತ್ತದೆ. ಇಂತಹ ಸ್ಪರ್ಧೆಗಳಲ್ಲಿ ಹೆಚ್ಚು ಹೆಚ್ಚು ಮಕ್ಕಳು ಭಾಗವಹಿಸಬೇಕು. ಮಕ್ಕಳು ಇಂತಹ ಅವಕಾಶಗಳನ್ನು ಸದುಪಯೋಗಪಡಿಸಿಕೆಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂಬರ್ 01ರ ಮುಖ್ಯೋಪಾಧ್ಯರಾದ ಜಗದೀಶ ಚಂದ್ರ ಮಾತನಾಡಿ, ಮಕ್ಕಳಿಗೆ ಇಂತಹ ಕಾರ್ಯಕ್ರಮಗಳು ಅವಶ್ಯಕತೆಯಿದ್ದು, ಮಕ್ಕಳಿಗೆ ತಮ್ಮ ಕಲೆಯನ್ನು ಹೊರಹಾಕಲು ಇಂತಹ ಸ್ಪರ್ಧೆಗಳು ಅನುಕೂಲವಾಗಲಿವೆ. ಇದಕ್ಕಾಗಿ ಬಾಲ ಭವನ ಸೊಸೈಟಿ ರವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆಂದರು.

ವಿಜೇತ ಮಕ್ಕಳಿಗೆ ಪ್ರಶಸ್ತಿ ಪತ್ರ & ಬಹುಮಾನ ವಿತರಣೆ: ಮ್ಯೂಜಿಕಲ್ ಚೇರ್ ಸ್ಪರ್ಧೆ ಮತ್ತು ಸಮೂಹ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರ ಹಾಗೂ ಬಹುಮಾನವನ್ನು ಗಣ್ಯ ಮಾನ್ಯರಿಂದ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ಸಹ ಶಿಕ್ಷಕರ ವೃಂದ, ಅತಿಥಿ ಶಿಕ್ಷಕರ ವೃಂದ ಹಾಗೂ ಶಾಲೆಯ ನೂರಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು. ಸುಧಾ ಬಟ್ಟೂರ ಅವರು ಕಾರ್ಯಕ್ರಮದ ನಿರೂಪಿಸಿದರು. ಜಿಲ್ಲಾ ಬಾಲ ಭವನ ಕಾರ್ಯಕ್ರಮ ಸಂಯೋಜಕ ಮೆಹಬೂಬಸಾಬ ಇಲಾಹಿ ಅವರು ಸ್ವಾಗತ ಮತ್ತು ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಜಯಾ ಬೆಟಗೇರಿ ಅವರು ವಂದಿಸಿದರು.

****

# ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ ವಿಶೇಷ ಸಾರಿಗೆ ಸೌಲಭ್ಯ

ಹಾವೇರಿ. ಶಿವಮೊಗ್ಗ ಜಿಲ್ಲೆಯ ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ ತೆರಳುವ ಭಕ್ತಾಧಿಗಳ ಅನುಕೂಲಕ್ಕಾಗಿ ಇದೇ ಜುಲೈ 20 ರಿಂದ ಹಾವೇರಿ ಮತ್ತು ರಾಣೇಬೆನ್ನೂರು ಬಸ್ ನಿಲ್ದಾಣಗಳಿಂದ ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ ವಿಶೇಷ ವೇಗದೂತ ವಾಹನಗಳ ಕಾರ್ಯಾಚರಣೆ ಪ್ರಾರಂಭಿಸಲು ಉದ್ದೇಶಿಸಲಾಗಿದೆ ಎಂದು ವಾ.ಕ.ರ.ಸಾ.ಸಂಸ್ಥೆ ಹಾವೇರಿ ವಿಭಾಗ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಹಾವೇರಿಯಿಂದ ಬೆಳಿಗ್ಗೆ 7–30 ಗಂಟೆಗೆ ಹೊರಟು, ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ 11–30 ತಲುಪಿ, ಪುನಃ ಮಧ್ಯಾಹ್ನನ 03–30 ಗಂಟೆಗೆ ಶ್ರೀ ಚೌಡೇಶ್ವರಿ ದೇವಸ್ಥಾನದಿಂದ ಹೊರಟು ಸಾಯಂಕಾಲ 7–30 ಕ್ಕೆ ಹಾವೇರಿಗೆ ತಲುಪುವುದು.

ರಾಣೇಬೆನ್ನೂರಿನಿಂದ ಬೆಳಿಗ್ಗೆ 7–30 ಗಂಟೆಗೆ ಹೊರಟು ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ 11ಕ್ಕೆ ತಲುಪಿ, ಪುನಃ ಮಧ್ಯಾಹ್ನ 3 ಗಂಟೆಗೆ ಶ್ರೀ ಚೌಡೇಶ್ವರಿ ದೇವಸ್ಥಾನದಿಂದ ಹೊರಟು ಸಾಯಂಕಾಲ 6–30 ಕ್ಕೆ ರಾಣೇಬೆನ್ನೂರಿಗೆ ತಲುಪುವುದು.

ಈ ವಿಶೇಷ ಬಸ್‌ಗಳಿಗೆ ಮುಂಗಡ ಟಿಕೇಟ್ ಬುಕ್ಕಿಂಗ್‌ಗಾಗಿ ಘಘಘ. ಇಡಿಣಭಿ.ಎಟ ನಲ್ಲಿ ಆಸನಗಳನ್ನು ಕಾಯ್ದಿರಿಸಬಹುದಾಗಿರುತ್ತದೆ. ಹಾವೇರಿಯಿಂದ ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ ರೂ.455/– ಹಾಗೂ ರಾಣೇಬೆನ್ನೂರನಿಂದ ಸಿಗಂದೂರು ಶ್ರೀ ಚೌಡೇಶ್ವರಿ ದೇವಸ್ಥಾನಕ್ಕೆ ರೂ.430/– (ಹೋಗಿ ಬರುವ ಸೇರಿ) ಪ್ರಯಾಣದರ ಇರುತ್ತದೆ. ಈ ಸಾರಿಗೆಗಳು ವಿಶೇಷ ಸಾರಿಗೆಗಳಾಗಿ ಕಾರ್ಯಾಚರಿಸುವುದರಿಂದ "ಮಹಿಳಾ ಪ್ರಯಾಣಿಕರಿಗೆ" ಉಚಿತ ಪ್ರಯಾಣಕ್ಕೆ ಅವಕಾಶವಿರುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಅಭಿವೃದ್ಧಿ ಸಮನ್ವಯ –ಉಸ್ತುವಾರಿ ಸಮಿತಿ ಸಭೆ

# ಅವಳಿ ನಗರ ನೀರು ಪೂರೈಕೆಗೆ ಗಂಭೀರ ಕ್ರಮ ಆಗಲಿ : ಸಂಸದ ಬಸವರಾಜ ಬೊಮ್ಮಾಯಿ




ಗದಗ : ಗದಗ ಜಿಲ್ಲೆಯ ಅವಳಿ ನಗರಕ್ಕೆ ನಿರಂತರ ನೀರು ಪೂರೈಕೆ ಯೋಜನೆಗೆ 2017 ರಲ್ಲಿಯೇ ಲೋಕಾರ್ಪಣೆಗೊಳಿಸಲಾಗಿದೆ. ಆದರೂ ಸರಿಯಾಗಿ ವಾರ್ಡವಾರು ನಿರಂತರ ನೀರು ಪೂರೈಕೆ ಸಾಧ್ಯವಾಗಿಲ್ಲ. ಈ ಬಗ್ಗೆ ನಗರಸಭೆ ಅಧಿಕಾರಿಗಳು ಗಂಭೀರವಾಗಿ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕೆಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ( ದಿಶಾ) ಸಮಿತಿ ಸಭೆ ಹಾಗೂ ವಿವಿಧ ಇಲಾಖೆಗಳ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ಬೆಟಗೇರಿ ಅವಳಿ ನಗರಕ್ಕೆ ನೀರು ಪೂರೈಕೆಗಾಗಿ ಈಗಾಗಲೇ ತುಂಗಭದ್ರಾ ಹಾಗೂ ಮಲಪ್ರಭಾ ನದಿಯಿಂದ ನೀರು ಪೂರೈಕೆಗೆ ಯೋಜನೆ ಸಿದ್ಧಪಡಿಸಿ ಅನುಷ್ಠಾನಗೊಳಿಸುವ ಮೂಲಕ ನಿರಂತರ ನೀರು ಒದಗಿಸಲು ಚಾಲನೆಯನ್ನು ನೀಡಲಾಗಿದ್ದರೂ ಸಹ ಈವರೆಗೂ ನಗರದ ಸಾರ್ವಜನಿಕರಿಗೆ ನಿಯಮಿತವಾಗಿ ನೀರು ಪೂರೈಕೆ ಸಾಧ್ಯವಾಗದಿರುವುದು ವಿಷಾದನೀಯ. ನೀರು ಪೂರೈಕೆಯಲ್ಲಿ ಇರುವ ಸಮಸ್ಯೆ ತಾತ್ಕಾಲಿಕ ಶೀಘ್ರ ಪರಿಹಾರಕ್ಕೆ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಈ ಹಿಂದಿನ ಸಭೆಯಲ್ಲಿಯೇ ಸೂಚಿಸಲಾಗಿತ್ತು. ಅಧಿಕಾರಿ ವರ್ಗ ಮಾತ್ರ ನೀಡಿರುವ ಸೂಚನೆಯನ್ನು ಪಾಲನೆ ಮಾಡುವಲ್ಲಿ ವಿಳಂಬ ಧೋರಣೆ ಕಂಡುಬರುತ್ತಿದೆ ಎಂದರು.

ಅವಳಿ ನಗರಕ್ಕೆ ನೀರು ಪೂರೈಕೆ ಕುರಿತಂತೆ ಶಾಸಕರಾದ ಸಿ.ಸಿ.ಪಾಟೀಲ ಹಾಗೂ ಎಸ್.ವಿ.ಸಂಕನೂರ ಅವರುಗಳೂ ಸಹ ಅಸಮರ್ಪಕ ನೀರು ಪೂರೈಕೆಯನ್ನು ಸರಿಪಡಿಸುವಂತೆ ಸಭೆಯಲ್ಲಿ ಸುದೀರ್ಘವಾಗಿ ಚರ್ಚಿಸಿದರು. ಇದಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಅವರು ತಾವು ಬಾಲ್ಯದಲ್ಲಿರುವಾಗಲೇ ಅಂದರೆ 1987 ರಿಂದಲೇ ಗದಗ ನೀರಿನ ಸಮಸ್ಯೆ ಕುರಿತು ಅರಿವಿದೆ. ಅದರ ಪರಿಹಾರಕ್ಕೆ ಇದುವರೆಗೂ ಸಾಧ್ಯವಾಗದಿರುವುದು ಅಧಿಕಾರಿ ವರ್ಗದ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು. ವಸತಿ ಯೋಜನೆ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಗಿ ಕೇಂದ್ರ ಪುರಸ್ಕೃತ ಯೋಜನೆಗಳ ಗುರಿ ಸಾಧನೆಗೆ ಅಧಿಕಾರಿವರ್ಗ ಕಾರ್ಯ ಪ್ರವೃತ್ತರಾಗಬೇಕು. ಆ ಮೂಲಕ ಪ್ರತಿ ಅರ್ಹ ಕುಟುಂಬಕ್ಕೂ ಸೂರು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ನಿರ್ದೇಶಿಸಿದರು.

ಹಿಂದಿನ ಸಭೆಯಲ್ಲಿ ಸೂಚಿಸಿದ ಕಾರ್ಯಗಳನ್ನು ಸರಿಯಾಗಿ ಅನುಷ್ಠಾನಗೊಳಿಸಿ ವಿಶಿಷ್ಟ ಸಾಧನೆಯೊಂದಿಗೆ ಅಧಿಕಾರಿಗಳು ಸಭೆಗೆ ಆಗಮಿಸಬೇಕು. ಪ್ರತಿ ಸಭೆಯಲ್ಲಿ ನೀಡಿರುವ ಸೂಚನೆಗಳ ಪಾಲನೆ ಮಾಡಿ ಗದಗ ಜಿಲ್ಲೆ ಆರ್ಥಿಕ ಪ್ರಗತಿಯಲ್ಲಿ ಅಧಿಕಾರಿ ವರ್ಗವು ಭಾಗಿಯಾಗಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಮೆಕ್ಕೆಜೋಳ ಬೆಳೆಯಲು ಅಧಿಕವಾಗಿ ಬಿತ್ತನೆ ಮಾಡಲಾಗಿದೆ. ಅದಕ್ಕಾಗಿ ಹೆಚ್ಚುವರಿ ಯೂರಿಯಾ ರಸಗೊಬ್ಬರ ಅಗತ್ಯವಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಸಭೆಗೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದ ಬಸವರಾಜ ಬೊಮ್ಮಾಯಿ ಅವರು ಜಿಲ್ಲೆ ಸೇರಿದಂತೆ ರಾಜ್ಯದ ಒಟ್ಟು ರಸಗೊಬ್ಬರದ ಬೇಡಿಕೆ ಪ್ರಸ್ತಾವನೆಯನ್ನುಕೇಂದ್ರಕ್ಕೆ ಸಲ್ಲಿಸಿ ಮಾಹಿತಿ ಒದಗಿಸಿದ್ದಲ್ಲಿ ರಸಗೊಬ್ಬರ ಪೂರೈಕೆಗೆ ಪ್ರಯತ್ನಿಸಲಾಗುವುದು ಎಂದರು.

ಸಭೆಯಲ್ಲಿ ವಸತಿ ಯೋಜನೆ, ಶಿಕ್ಷಣ, ಆರೋಗ್ಯ, ಕೌಶಲ್ಯ ಅಭಿವೃದ್ಧಿ, ಉನ್ನತ ಶಿಕ್ಷಣ ವಿಷಯಗಳ ಕುರಿತಂತೆ ಸುದೀರ್ಘವಾಗಿ ಶಾಸಕರುಗಳಾದ ಡಾ.ಚಂದ್ರು ಲಮಾಣಿ, ಸಿ.ಸಿ.ಪಾಟೀಲ, ಎಸ್.ವಿ.ಸಂಕನೂರ ಚರ್ಚೆ ನಡೆಸಿದರು.

ನಗರಾಭಿವೃದ್ಧಿ ಇಲಾಖೆಯಿಂದ ಎಎಚ್‌ಪಿ ಯೋಜನೆಯಡಿ ಗದಗ ಬೆಟಗೇರಿ ಅವಳಿ ನಗರದಲ್ಲಿ 3630 ಮನೆಗಳ ನಿರ್ಮಾಣದಲ್ಲಿ ಒಂದನೇ ಹಂತದಲ್ಲಿ 1008 ಮನೆಗಳ ಪೈಕಿ 248 ಮನೆಗಳು ಪೂರ್ಣಗೊಂಡಿದ್ದು ಹಂಚಿಕೆ ಮಾಡಲಾಗಿದೆ. ಉಳಿದ 758 ಮನೆಗಳು ಪೂರ್ಣಗೊಳ್ಳುವ ಹಂತದಲ್ಲಿವೆ.ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ (2015–2022) ಆರ್‌ಜಿಆರ್‌ಎಚ್‌ಸಿಎಲ್‌ದಿಂದ 7060 ಫಲಾನುಭವಿಗಳಿಗೆ ಅನುಮೋದನೆ ನೀಡಲಾಗಿದ್ದು 5066 ಮನೆಗಳು ಪೂರ್ಣಗೊಂಡಿವೆ. 1577 ಮನೆಗಳ ನಿರ್ಮಾಣ ಆರಂಭಿಸಲಾಗಿಲ್ಲ.

15 ನೇ ಹಣಕಾಸು ಯೋಜನೆಯಡಿ 2020–21 ರಿಂದ 2024–25 ರವರೆಗೆ ಜಿಲ್ಲೆಯ ಸ್ಥಳೀಯ ಸಂಸ್ಥೆ ಗಳಲ್ಲಿ 632 ಕಾಮಗಾರಿ ಮಂಜೂರಾಗಿದ್ದು 542 ಪೂರ್ಣಗೊಳಿಸುವ ಮೂಲಕ ಶೇ.85.76 ಭೌತಿಕ ಗುರಿ ಸಾಧನೆಯಾಗಿದೆ. ಆರ್ಥಿಕವಾಗಿ 9658 ಲಕ್ಷ ರೂ ಬಿಡುಗಡೆಯಾಗಿದ್ದು 6961.87 ಲಕ್ಷ ರೂ.ಗಳ ಅನುದಾನವನ್ನು ವೆಚ್ಚ ಮಾಡಲಾಗಿದೆ.

ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸಾಮಾಜಿಕ ಭದ್ರತಾ ಯೋಜನೆಯಡಿ ವೃದ್ಧಾಪ್ಯ ವೇತನ, ವಿಧವಾ ವೇತನ, ಅಂಗವಿಕಲ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ಮೃತರಹಿತ ಪತ್ನಿಗೆ ವಿಧವಾ ವೇತನ, ಮನಸ್ವಿನಿ, ಮೈತ್ರಿ ಯೋಜನೆಗಳಡಿ ಒಟ್ಟು ಜಿಲ್ಲೆಯಲ್ಲಿ 1,62,230 ಫಲಾನುಭವಿಗಳಿದ್ದಾರೆ ಎಂದು ಸಭೆಗೆ ಮಾಹಿತಿ ಒದಗಿಸಿದರು .

ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಪ್ರಸಕ್ತ ಸಾಲಿನ ಜೂನ್ ಅಂತ್ಯದವರಗೆ ಒಟ್ಟು 1,09,348 ಅರ್ಜಿಗಳು ಸ್ವೀಕೃತವಾಗಿದ್ದು ಅದರಲ್ಲಿ 1,08,219ಫಲಾನುಭವಿಗಳಿಗೆ ಗ್ಯಾಸ್ ಕನೆಕ್ಷನ್ ಒದಗಿಸಲಾಗಿದೆ. ಉಳಿದ ಅರ್ಜಿದಾರರಿಗೆ ಗ್ಯಾಸ್ ಕನೆಕ್ಷನ್ ಕೊಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಮನರೇಗಾ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ 23 ಲಕ್ಷ ಮಾನವ ದಿನಗಳ ಸೃಜನೆಯ ವಾರ್ಷಿಕ ಗುರಿಯಲ್ಲಿ 10.63 ಲಕ್ಷ ಗುರಿ ಸಾಧನೆಯಾಗಿದೆ. ಅರ್ಥಿಕವಾಗಿ 135.50 ಕೋಟಿ ಗುರಿ ಪೈಕಿ 38.82 ಕೋಟಿ ಸಾಧನೆಯಾಗಿದೆ.

ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) ಯೋಜನೆಯಡಿ ಜಿಲ್ಲೆಯಲ್ಲಿ 13884ಶೌಚಾಲಯ ನಿರ್ಮಾಣಕ್ಕೆ ಕಾರ್ಯಾದೇಶ ನೀಡಲಾಗಿದ್ದು 9436 ಶೌಚಾಲಯ ನಿರ್ಮಾಣ ಪೂರ್ಣಗೊಂಡಿದೆ. ಅದರಂತೆ ಬೂದು ನೀರು ನಿರ್ವಹಣೆಯಲ್ಲಿ 590 ಕಾಮಗಾರಿಗಳ ಗುರಿ ಹೊಂದಲಾಗಿದ್ದು 236 ಕಾಮಗಾರಿ ಪೂರ್ಣಗೊಳಿಸಲಾಗಿದೆ. 232 ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿವೆ.

ಜೆಜೆಎಂ ಯೋಜನೆಯಡಿ ಕೈಗೊಂಡ 336 ಕಾಮಗಾರಿಗಳ ಪೈಕಿ 312 ಪೂರ್ಣಗೊಳಿಸಲಾಗಿದೆ. ಆರ್ಥಿಕವಾಗಿ 346.09 ಕೋಟಿ ರೂ ಮೊತ್ತದ ಪೈಕಿ 243.13 ಕೋಟಿ ಬಿಡುಗಡೆಯಾಗಿದ್ದು ವೆಚ್ಚವಾಗಿದೆ. ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ) ಯೋಜನೆಯಡಿ 2016–17 ರಿಂದ 2019–20 ರವರೆಗೆ ಒಟ್ಟು 5748 ಆಯ್ಕೆ ಮಾಡಲಾದ ಫಲಾನುಭವಿಗಳ ಪೈಕಿ 4924 ಫಲಾನುಭವಿಗಳ ಮನೆಗಳು ಪೂರ್ಣಗೊಂಡಿವೆ. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ 2019–20 ನೇ ಸಾಲಿನಿಂದ ಜಿಲ್ಲೆಯಲ್ಲಿ 38 ಕಾಮಗಾರಿಗಳು ಮಂಜೂರಾಗಿದ್ದು ಒಟ್ಟು 167.28 ಕಿ.ಮೀ ಗಳಲ್ಲಿ 161.40 ಕಿ.ಮೀ ರಸ್ತೆ ಪೂರ್ಣಗೊಳಿಸಲಾಗಿದೆ.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಂತ್ರಸ್ತೆ ಮನೆಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಭೇಟಿ: ಪಾಲಕರಿಗೆ ಸಾಂತ್ವನ



ಕೊಪ್ಪಳ : ಬೆಂಗಳೂರಿಗೆ ದುಡಿಯಲೆಂದು ಹೋದ ಜಿಲ್ಲೆಯ ಕುಟುಂಬವೊಂದರ ಬಾಲಕಿಯ ಮೇಲೆ ಜುಲೈ 09 ರಂದು ಯಾರೋ ಅಪರಿಚಿತರು ಲೈಂಗಿಕ ಅಪರಾಧಗಳನ್ನು ಎಸಗಿ ಅವಳನ್ನು ಕೊಲೆ ಮಾಡಿದ ಬಗ್ಗೆ ಬೆಂಗಳೂರು ದಕ್ಷಿಣ ಜಿಲ್ಲೆಯ ತಾವರಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತಸ್ವಾಮಿ ಪೂಜಾರ ಅವರು ಶುಕ್ರವಾರದಂದು ಬಾಲಕಿಯ ಮನೆಗೆ ಭೇಟಿ ನೀಡಿ ಪಾಲಕರಿಗೆ ಸಾಂತ್ವನ ಹೇಳಿದರು.

ಈ ಸಂದರ್ಭ ಮಾತನಾಡಿದ ಆಯೋಗದ ಸದಸ್ಯರು, ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ನಿಯಮಾವಳಿಗಳು–2020 ರನ್ವಯ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಬಲ ವ್ಯಕ್ತಿಗಳನ್ನು ನೇಮಕ ಮಾಡಲು, ಮಧ್ಯಂತರ ಪರಿಹಾರಕ್ಕೆ ನ್ಯಾಯಾಲಯಕ್ಕೆ ಅರ್ಜಿಯನ್ನು ಸಲ್ಲಿಸುವಂತೆ ಹಾಗೂ ಘಟಕದಿಂದ ಲಭ್ಯ ಯೋಜನೆಯಲ್ಲಿ ಕುಟುಂಬಕ್ಕೆ ಆರ್ಥಿಕ ಸಹಾಯ ಲಭ್ಯವಿದ್ದಲ್ಲಿ ನೀಡುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಿಗೆ ಹಾಗೂ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳರವರಿಗೆ ಸೂಚಿಸಿದರು. ಅಲ್ಲದೇ ಸಮುದಾಯದಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆಯ ಕುರಿತು ಶಾಲೆ, ಕಾಲೇಜುಗಳ ವ್ಯಾಪ್ತಿಯಲ್ಲಿ ಮಕ್ಕಳಿಗೆ ಜಾಗೃತಿಯನ್ನು ಮೂಡಿಸುವಂತೆ ಉಪನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕೊಪ್ಪಳರವರಿಗೆ ಸೂಚಿಸಿದರು. ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ–2012 ತಿದ್ದುಪಡಿ –2019ರ ಕಲಂ 23 (4)ರಡಿಯಲ್ಲಿ ಸಂತ್ರಸ್ತ ಮಗುವಿನ ಮಾಹಿತಿಯನ್ನು ಯಾವುದೇ ಮಾಧ್ಯಮದಲ್ಲಿ ಪ್ರಕಟಿಸುವುದು, ಪ್ರಚುರ ಪಡಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಇದಕ್ಕೆ 6 ತಿಂಗಳನಿಂದ 1 ವರ್ಷದವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿರುತ್ತದೆ. ಈ ಕುರಿತು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರಿನಲ್ಲಿ ಪ್ರಕರಣವನ್ನು ಸೋ–ಮೋಟೋ ಪ್ರಕರಣವನ್ನಾಗಿ ದಾಖಲಿಸಿಕೊಳ್ಳಲಾಗುವುದು ಎಂದು ಆಯೋಗದ ಸದಸ್ಯರು ತಿಳಿಸಿದರು.

ಹೊಸಬಂಡಿ ಹರ್ಲಾಪುರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಮಕ್ಕಳ 'ಗ್ರಾಮ ಪಂಚಾಯತ್ ಮಟ್ಟದ ಮಹಿಳೆಯರ ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿ'ಸಭೆಯ ಆಯೋಜನೆ ಮತ್ತು ಮಕ್ಕಳ ಗ್ರಾಮಸಭೆಗಳ ನಿಯಮಿತ ಆಯೋಜನೆ ಇಲ್ಲದಿರುವುದನ್ನು ಗಮನಿಸಿ ಕಡ್ಡಾಯವಾಗಿ ಆಯೋಜಿಸುವಂತೆ ಸೂಚಿಸಿ ಹಾಗೂ ಮಕ್ಕಳಿಗಾಗಿ ಮೀಸಲಿರುವ ಅನುದಾನಗಳ ಬಳಕೆ ಕುರಿತು ಪರಿಶೀಲಿಸಿ ಸಮರ್ಪಕ ಬಳಕೆ ಮಾಡುವಂತೆ ಸೂಚಿಸಿದರು.

ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ರಕ್ಷಣಾ ನೀತಿ – 2016ರ ಅನುಷ್ಠಾನದ ಸಮರ್ಪಕ ನಿರ್ವಹಣೆ ಇಲ್ಲದಿರುವುದನ್ನು ಗಮನಿಸಿ ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿ, ಬಿಸಿಯೂಟದ ಆಹಾರ ಪದಾರ್ಥದಗಳ ಗುಣಮಟ್ಟವನ್ನು ಪರೀಕ್ಷಿಸಿದರು. ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ಮಕ್ಕಳ ರಕ್ಷಣಾ ನೀತಿ  2016ರ ಅನುಷ್ಠಾನದ ಕುರಿತು ಪರಿಶೀಲಿಸಲಾಗಿ, ಈ ಕುರಿತು ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳಿಗೆ ಮಾಹಿತಿ ಇಲ್ಲದಿರುವುದನ್ನು ಗಮನಿಸಿ ವಿಷಾದವನ್ನು ವ್ಯಕ್ತಪಡಿಸಿ, ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಬಾಲ್ಯವಿವಾಹ ನಿಷೇಧಾಧಿಕಾರಿಗಳಾಗಿದ್ದು, ಮಕ್ಕಳ ರಕ್ಷಣೆಯ ಜವಾಬ್ದಾರಿಯಲ್ಲಿ ಇವರೂ ಸಹ ಮುಖ್ಯ ಪಾತ್ರಧಾರಿಗಳಾಗಿದ್ದು, ಶೀಘ್ರವೇ ಎಲ್ಲ ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ – 2016ರನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಿ ಆಯೋಗಕ್ಕೆ ವರದಿ ನೀಡುವಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

ಈ ಸಂದರ್ಭ ಸಮಾಜ ಕಾರ್ಯಕರ್ತ ರವಿಕುಮಾರ ಪವಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಔಟ್‌ರೀಚ್ ವರ್ಕರ್ ಪ್ರತಿಭಾ ಕಾಶಿಮಠ, ಅಂಗನವಾಡಿ ಮೇಲ್ವಿಚಾರಕರಾದ ಸುಮಂಗಲಾ ಸಜ್ಜನ, ಮುನಿರಾಬಾದ್ ಪೊಲೀಸ್‌ಠಾಣೆಯ ಮಹಿಳಾ ಪೊಲೀಸ್ ಸುಧಾ ಉಪಸ್ಥಿತರಿದ್ದರು.

## ಕಾರ್ಮಿಕರ ರಾಜ್ಯ ವಿಮಾ ನಿಗಮ: ಸಾಮಾಜಿಕ ಭದ್ರತಾ ವ್ಯಾಪ್ತಿ ವಿಸ್ತರಣೆಗೆ ಹೊಸ ಯೋಜನೆ

ಕೊಪ್ಪಳ ಜುಲೈ 18 (ಕರ್ನಾಟಕ ವಾರ್ತೆ): ನೌಕರರ ರಾಜ್ಯ ವಿಮಾ ನಿಗಮ (ESIC) ಹಿಮಾಚಲ ಪ್ರದೇಶದ ಶಿಮ್ಲಾದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಮತ್ತು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಅವರ ಅಧ್ಯಕ್ಷತೆಯಲ್ಲಿ ನಡೆದ 196 ನೇ ಇಖಖ ಕಾರ್ಪೊರೇಷನ್ ಸಭೆಯಲ್ಲಿ ಖಕಖಇಇ 2025 ಅಂದರೆ ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆಯನ್ನು ಅನುಮೋದಿಸಿದೆ.

ಎಸ್‌ಪಿಆರ್‌ಇಇ 2025:

ನೌಕರರ ರಾಜ್ಯ ವಿಮಾ ನಿಗಮ (ಇಎಸ್‌ಐಸಿ) ಅನುಮೋದಿಸಿದ ಉದ್ಯೋಗದಾತರು ಮತ್ತು ಉದ್ಯೋಗಿಗಳ ನೋಂದಣಿಯನ್ನು ಉತ್ತೇಜಿಸುವ ಯೋಜನೆ (ಎಸ್‌ಪಿಆರ್‌ಇಇ) 2025, ಇಎಸ್‌ಐ ಕಾಯ್ದೆಯಡಿಯಲ್ಲಿ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯು ಜುಲೈ 1 ರಿಂದ ಡಿಸೆಂಬರ್ 31, 2025 ರವರೆಗೆ ಸಕ್ರಿಯವಾಗಿರುತ್ತದೆ ಮತ್ತು ನೋಂದಾಯಿಸದ ಉದ್ಯೋಗದಾತರು ಮತ್ತು ಉದ್ಯೋಗಿಗಳು, ಗುತ್ತಿಗೆ ಮತ್ತು ತಾತ್ಕಾಲಿಕ ಕೆಲಸಗಾರರು ಸೇರಿದಂತೆ ತಪಾಸಣೆ ಅಥವಾ ಹಿಂದಿನ ಬಾಕಿಗಳ ಬೇಡಿಕೆಗಳನ್ನು ಎದುರಿಸದೆ ನೋಂದಾಯಿಸಿಕೊಳ್ಳಲು ಒಂದು ಬಾರಿ ಅವಕಾಶವನ್ನು ಒದಗಿಸುತ್ತದೆ.

ಎಸ್‌ಪಿಆರ್‌ಇಇ 2025 ರ ಅಡಿಯಲ್ಲಿ ಉದ್ಯೋಗದಾತರು ತಮ್ಮ ಘಟಕಗಳು ಮತ್ತು ಉದ್ಯೋಗಿಗಳನ್ನು ಇಎಸ್‌ಐಸಿ ಪೋರ್ಟಲ್, ಶ್ರಮ ಸುವಿಧಾ ಮತ್ತು ಎಂಸಿಎ ಪೋರ್ಟಲ್ ಮೂಲಕ ಡಿಜಿಟಲ್ ರೂಪದಲ್ಲಿ ನೋಂದಾಯಿಸಿಕೊಳ್ಳಬಹುದು. ಉದ್ಯೋಗದಾತರು ಘೋಷಿಸಿದ ದಿನಾಂಕದಿಂದ ನೋಂದಣಿಯನ್ನು ಮಾನ್ಯವೆಂದು ಪರಿಗಣಿಸಲಾಗುತ್ತದೆ. ನೋಂದಣಿಗೆ ಮುಂಚಿನ ಅವಧಿಗಳಿಗೆ ಯಾವುದೇ ಕೊಡುಗೆ ಅಥವಾ ಪ್ರಯೋಜನ ಅನ್ವಯಿಸುವುದಿಲ್ಲ. ನೋಂದಣಿ ಪೂರ್ವ ಅವಧಿಗೆ ಯಾವುದೇ ತಪಾಸಣೆ ಅಥವಾ ಹಿಂದಿನ ದಾಖಲೆಗಳಿಗೆ ಬೇಡಿಕೆಯನ್ನು ಮಾಡಲಾಗುವುದಿಲ್ಲ.

ಹಿಂದಿನ ದಂಡಗಳ ಭಯವನ್ನು ತೆಗೆದುಹಾಕುವ ಮೂಲಕ ಮತ್ತು ನೋಂದಣಿ ಪ್ರಕ್ರಿಯೆಯನ್ನು ಸರಾಗಗೊಳಿಸುವ ಮೂಲಕ ಈ ಯೋಜನೆಯು ಸ್ವಯಂಪ್ರೇರಿತ ಅನುಸರಣೆಯನ್ನು ಪ್ರೋತ್ಸಾಹಿಸುತ್ತದೆ. ಎಸ್‌ಪಿಆರ್‌ಇಇ ಗಿಂತ ಮೊದಲು, ನಿರ್ದಿಷ್ಟ ಸಮಯದ ಚೌಕಟ್ಟಿನೊಳಗೆ ನೋಂದಣಿ ಮಾಡದಿರುವುದು ಕಾನೂನು ಕ್ರಮ ಮತ್ತು ಹಿಂದಿನ ಬಾಕಿಗಳ ಬೇಡಿಕೆಗೆ ಕಾರಣವಾಗಬಹುದು. ಎಸ್‌ಪಿಆರ್‌ಇಇ 2025 ಈ ಅಡೆತಡೆಗಳನ್ನು ಪರಿಹರಿಸುತ್ತದೆ, ಬಿಟ್ಟುಹೋದ ಸಂಸ್ಥೆಗಳು ಮತ್ತು ಕಾರ್ಮಿಕರನ್ನು ಇಎಸ್‌ಐ ವ್ಯಾಪ್ತಿಗೆ ತರುವ ಮತ್ತು ವಿಶಾಲವಾದ ಸಾಮಾಜಿಕ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

ಎಸ್‌ಪಿಆರ್‌ಇಇ 2025 ಅನ್ನು ಪ್ರಾರಂಭಿಸುವುದು ನೌಕರರ ರಾಜ್ಯ ವಿಮಾ ನಿಗಮವು ಎಲ್ಲರನ್ನೂ ಒಳಗೊಳ್ಳುವ ಮತ್ತು ಪ್ರವೇಶಿಸಬಹುದಾದ ಸಾಮಾಜಿಕ ಭದ್ರತೆಯ ಕಡೆಗೆ ಇಟ್ಟಿರುವ ಪ್ರಗತಿಪರ ಹೆಜ್ಜೆಯಾಗಿದೆ. ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಮತ್ತು ಹಿಂದಿನ ಹೊಣೆಗಾರಿಕೆಗಳಿಂದ ವಿನಾಯಿತಿ ನೀಡುವ ಮೂಲಕ ಈ ಯೋಜನೆಯು ಉದ್ಯೋಗದಾತರು ತಮ್ಮ ಕಾರ್ಯಪಡೆಯನ್ನು ಕ್ರಮಬದ್ಧಗೊಳಿಸಲು ಪ್ರೋತ್ಸಾಹಿಸುವುದಲ್ಲದೆ, ಹೆಚ್ಚಿನ ಕಾರ್ಮಿಕರು, ವಿಶೇಷವಾಗಿ ಗುತ್ತಿಗೆ ವಲಯಗಳಲ್ಲಿರುವವರು, ಇಎಸ್‌ಐ ಕಾಯ್ದೆಯಡಿಯಲ್ಲಿ ಅಗತ್ಯ ಆರೋಗ್ಯ ಮತ್ತು ಸಾಮಾಜಿಕ ಪ್ರಯೋಜನಗಳನ್ನು ಪಡೆಯುವುದನ್ನು ಖಚಿತಪಡಿಸುತ್ತದೆ. ಭಾರತದಲ್ಲಿ ಕಲ್ಯಾಣ ಕೇಂದ್ರಿತ ಕಾರ್ಮಿಕ ಪರಿಸರ ವ್ಯವಸ್ಥೆಯ ದೃಷ್ಟಿಕೋನಕ್ಕೆ ಅನುಗುಣವಾಗಿ, ತನ್ನ ವ್ಯಾಪ್ತಿಯನ್ನು ಬಲಪಡಿಸಲು ಮತ್ತು ಸಾರ್ವತ್ರಿಕ ಸಾಮಾಜಿಕ ರಕ್ಷಣೆಯ ಆದೇಶವನ್ನು ಪೂರೈಸಲು ಇಎಸ್‌ಐಸಿ ಬದ್ಧವಾಗಿದೆ ಎಂದು ಕಾರ್ಮಿಕರ ರಾಜ್ಯ ವಿಮಾ ನಿಗಮದ ಪ್ರಕಟಣೆ ತಿಳಿಸಿದೆ.

## ವಿದ್ಯುತ್ ಸಮಸ್ಯೆ ಕುರಿತು ಸಾರ್ವಜನಿಕರೊಂದಿಗೆ ಸಂವಾದ

ವಿಜಯಪುರ, : ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ವಿಜಯಪುರ ತಾಲೂಕಿನ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗಕ್ಕೆ ಸಂಬಂಧಿಸಿದ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ರೈತರು ಹಾಗೂ ವಿದ್ಯುತ್ ಗ್ರಾಹಕರರೊಂದಿಗೆ ಜುಲೈ 19ರ ಮಧ್ಯಾಹ್ನ 3:30ಕ್ಕೆ ಸಂವಾದ ಸಭೆಯನ್ನು ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗ ಕಚೇರಿಯಲ್ಲಿ ನಡೆಸಲಾಗುವುದು.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಂವಾದ ಸಭೆಯಲ್ಲಿ ಭಾಗವಹಿಸಿ,ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಹೆಸ್ಕಾಂ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಮೆಟ್ರಿಕ್ ನಂತರದ ಬಾಲಕ-ಬಾಲಕೀಯರ ವಿದ್ಯಾರ್ಥಿನಿಲಯಕ್ಕೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ವಿಜಯಪುರ : 2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗಾಗಿ) ಬಾಲಕ–ಬಾಲಕೀಯರ ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಆಗಸ್ಟ್ 14ರ ಒಳಗಾಗಿ **https://shp.karnataka.gov.in/bcwd** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ **https://bcwd.karnataka.gov.in** ಹಾಗೂ ಸಹಾಯವಾಣಿ ಸಂಖ್ಯೆ: 8050770004 ಮತ್ತು 8050770005 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ವಿದೇಶಿ ವ್ಯಾಸಂಗ ಯೋಜನೆ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ವಿಜಯಪುರ : 2025–26ನೇ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದೇಶಿ ವ್ಯಾಸಂಗ ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್ **https://sevasindhu.karnataka.gov.in**, ಗ್ರಾಮ ಒನ್ **https://gramaone.karnataka.gov.in** ಹಾಗೂ ಬೆಂಗಳೂರು ಒನ್ **https://klapp.karnatakaone.gov.in** ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವನ್ನು ಹಾಗೂ ನಿಗಮದ ದೂರವಾಣಿ ಸಂಖ್ಯೆ: 08352–258128 ಸಂಪರ್ಕಿಸಬಹುದಾಗಿದೆ ಎಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೈಮಗ್ಗ ನೇಕಾರರಿಗೆ ಸಾಲ-ಸೌಲಭ್ಯ : ಅರ್ಜಿ ಆಹ್ವಾನ

ವಿಜಯಪುರ, : ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಜಿಲ್ಲೆಯ ಕೈಮಗ್ಗ ನೇಕಾರರಿಗೆ 2025–26ನೇ ಸಾಲಿಗೆ ರಾಷ್ಟ್ರೀಕೃತ ಬ್ಯಾಂಕುಗಳಿಂದ ಸಾಲ ಸೌಲಭ್ಯ ಒದಗಿಸಲಾಗುತ್ತಿದ್ದು, ಆಸಕ್ತ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಾಲ ಸೌಲಭ್ಯ ಪಡೆಯಲಿಚ್ಛಿಸುವ ಕೈಮಗ್ಗ ನೇಕಾರರು ಅರ್ಜಿಗಳನ್ನು ಕೈಮಗ್ಗ ಮತ್ತು ಜವಳಿ ಇಲಾಖೆ ವಿಜಯಪುರ ಕಚೇರಿಯಿಂದ ಪಡೆದು, ಭರ್ತಿ ಮಾಡಿ, ಅರ್ಜಿಯೊಂದಿಗೆ ಕೇಂದ್ರ ಸರ್ಕಾರ ನೀಡಿರುವ ನೇಕಾರರ ಪೆಹಚಾನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ರೇಷನ್ ಕಾರ್ಡ್, ಆಧಾರ ಕಾರ್ಡ್, ಆಧಾರ ನಂಬರ್ ಸೀಡ್ ಇರುವ ಬ್ಯಾಂಕ್ ಪಾಸ್ ಬುಕ್, ಭಾವಚಿತ್ರದಂತಹ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಜುಲೈ 30ರೊಳಗೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಶಿಕಾರಖಾನಾ, ಸ್ಟೇಶನ್ ಬ್ಯಾಕ್ ರೋಡ, ವಿಜಯಪುರ ಇವರನ್ನು ಸಂಪರ್ಕಿಸುವಂತೆ ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಂಚಮಸಾಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಾಳೆ




ರಾಮದುರ್ಗ : ತಾಲೂಕಿನ ಲಿಂಗಾಯತ ಪಂಚಮಸಾಲಿ ಸಮಾಜದ ವಿದ್ಯಾರ್ಥಿಗಳಿಗೆ ತಾಲೂಕಾ ಮಟ್ಟದ ಪ್ರತಿಭಾ ಪುರಷ್ಕಾರ ಕಾರ್ಯಕ್ರಮವನ್ನು ಪಟ್ಟಣದ ವಿಶ್ವೇಶ್ವರಯ್ಯ ಕಲ್ಯಾಣ ಮಂಟಪದಲ್ಲಿ ಜುಲೈ–20 ರಂದು ರವಿವಾರ ಮುಂಜಾನೆ 11 ಘಂಟೆಗೆ ಏರ್ಪಡಿಸಲಾಗಿದ್ದು, ತಾಲೂಕಿನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಂ'ಂ ಶ ಸ್ವಿಗ ಒ ಳಿ ಸ ಬೇ ಕ ಎಂದು ಎಂದು ಲಿಂಗಾಯತ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಹಾಗೂ ನಿವೃತ್ತ ಅರಣ್ಯಾಧಿಕಾರಿ ಸಿ.ಬಿ. ಪಾಟೀಲ ಮನವಿ ಮಾಡಿದ್ದಾರೆ.

ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಅವರ ಮುಂದಿನ ವ್ಯಾಸಂಗಕ್ಕಾಗಿ ಪ್ರೋತ್ಸಾಹಿಸಲು 2024–25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇಕಡಾ 90ಕ್ಕಿಂತ ಅಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸಮಾರಂಭದಲ್ಲಿ ಸತ್ಕರಿಸಲಾಗುತ್ತಿದೆ. ಈ ಬಾರಿ ವೈದ್ಯಕೀಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಸಹ ಸಮಾರಂಭದಲ್ಲಿ ಸತ್ಕರಿಸಲಾಗುತ್ತದೆ.

ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಸಮಾಜದ ಜಿಲ್ಲಾಧ್ಯಕ್ಷ ನಿಂಗಪ್ಪ ಪಿರೋಜಿ, ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ರಾಮದುರ್ಗ ತಾಲೂಕಿನ ಸಮಸ್ತ ಲಿಂಗಾಯತ ಪಂಚಮಸಾಲಿ ಸಮಾಜ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಸಿ.ಬಿ. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಾಯದಗುಂದಿ ಮಲ್ಲಯ್ಯ ಮುತ್ಯಾರು ಪ್ರಶಸ್ತಿ ಪ್ರಕಟ







ರಾಮದುರ್ಗ : ಪಟ್ಟಣದ ಮಹಾಂತೇಶ ನಗರದ ಡಾ. ರಾಜೇಂದ್ರ ಮುತ್ಯಾರು ಪುಣ್ಯಾಶ್ರಮ ಸೇವಾ ಟ್ರಸ್ಟ್ ನೇತೃತ್ವದಲ್ಲಿ ಪ್ರತಿವರ್ಷ ನೀಡಲಾಗುವ ರಾಜ್ಯ ಮಟ್ಟದ ಲಾಯದಗುಂದಿ ಮಲ್ಲಯ್ಯ ಮುತ್ಯಾರು ಪ್ರಶಸ್ತಿಗಳನ್ನು ಪ್ರಕಟಿಸಲಾಗಿದ್ದು, ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮೂವರು ಮಹನೀಯರನ್ನು ಆಯ್ಕೆ ಮಾಡಲಾಗಿದೆ ಎಂದು ಡಾ. ರಾಜೇಂದ್ರ ಅಣ್ಣಾನವರ ಮುತ್ಯಾರು ತಿಳಿಸಿದ್ಧಾರೆ.

ಸನ್ಮಾರ್ಗಿ ಪ್ರಶಸ್ತಿಗೆ, ಸಾಲಹಳ್ಳಿ ಚಿಪ್ಪಲಕಟ್ಟಿಯ ಅಯ್ಯಪ್ಪಯ್ಯ ಗುರುಮಠದ ಶ್ರೀ ಗುರುಸಿದ್ಧಲಿಂಗ ಶ್ರೀಗಳನ್ನು, ರಾಜೇಂದ್ರ ಪ್ರಶಸ್ತಿಗೆ ಬಾಗಲಕೋಟ ಜಿಲ್ಲೆ ಇಲಕಲ್‌ದ ಪಂಡಿತ ಪಂಚಾಕ್ಷರಿ ಸೋಮಣ್ಣ ಲಿಂಗಸೂರ ಗವಾಯಿಗಳನ್ನು, ಗದಗ ಜಿಲ್ಲೆ ರೋಣದ ಅನ್ನಪೂರ್ಣಾದೇವಿ ಗುರುಪಾದಗೌಡ ಪಾಟೀಲ ಅವರನ್ನು ಅಕ್ಕಮಹಾದೇವಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಬಸವರಾಜ ಮುತ್ಯಾರ ಲಿಂಗಾನಂದ ಮಹೋತ್ಸವ, ಅನುಭಾವ ಚಿಂತನೆ, ದಂಪತಿಗಳ ಅಮೃತ ಮಹೋತ್ಸವ, ಸಾಮೂಹಿಕ ವಿವಾಹ, ವಿದ್ಯಾರ್ಥಿಗಳಿಗೆ ವಸ್ತ್ರ ವಿತರಣೆ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಅಗಸ್ಟ್–4 ರಂದು ನಡೆಯಲಿದ್ದು, ಪ್ರಶಸ್ತಿ ಆಯ್ಕೆ ಸಮಿತಿಯಲ್ಲಿ ಅಧ್ಯಕ್ಷರಾಗಿ ಶಾಮಣ್ಣ ಧಡಿಗೌಡ್ರ, ಸದಸ್ಯರಾಗಿ ಸಿದ್ದು ಮೋಟೆ, ಆರ್.ಬಿ. ಯಾದವಾಡ, ಹಣಮಂತಪ್ಪ ಕರಡಿಗುಡ್ಡ, ಅರ್ಜುನ ಮಾಳಿ, ಶೃತಿ ಅಣ್ಣಾನವರ, ಡಾ. ಮೃತ್ಯುಂಜಯ ಅಣ್ಣಾನವರ ಕಾರ್ಯ ನಿರ್ವಹಿಸಿದ್ದಾರೆ ಎಂದು ಟ್ರಸ್ಟ್ ಕಾರ್ಯದರ್ಶಿ ಶಿವಯೋಗಿ ಅಣ್ಣಾನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರ ಅಧ್ಯಕ್ಷತೆಯಲ್ಲಿ ಕೃಷಿ ಬೆಳೆ ವಿಮಾ ಯೋಜನೆ ಕುರಿತು ಇಂದು ಜರುಗಿದ ಸಭೆ



ಧಾರವಾಡ : ಇಂದು (ಜು.17) ಬೆಳಿಗ್ಗೆ ಬೆಂಗಳೂರಿನ ವಿಕಾಸ ಸೌಧದ ಕಚೇರಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರ ಅಧ್ಯಕ್ಷತೆಯಲ್ಲಿ ಧಾರವಾಡ ಕೃಷಿ ಬೆಳೆ ವಿಮಾ ಯೋಜನೆ ಬಗ್ಗೆ ಮತ್ತು ಧಾರವಾಡ ಜಿಲ್ಲೆಯ ವಿವಿಧ ಟೆನೆಂಟ್ ಫಾರ್ಮಿಂಗ್ ಸೊಸೈಟಿಗಳಿಗೆ ಲೀಜ್ ಮೇಲೆ ನೀಡಲಾಗಿದ್ದ ಜಮೀನುಗಳನ್ನು ಸಾಗುವಳಿದಾರರಿಗೆ ಮಂಜೂರು ಮಾಡುವ ಕುರಿತು ಸಭೆ ಜರುಗಿತ್ತು. ಈ ಸಭೆಯಲ್ಲಿ ಸರ್ಕಾರದ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಠಾರಿಯ, ಕಂದಾಯ ಆಯುಕ್ತ ಪೊಮ್ಮಲ ಸುನಿಲ್ ಕುಮಾರ್, ಕೃಷಿ ಆಯುಕ್ತ ವೈ. ಎಸ್.ಪಾಟೀಲ್, ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು, ಉಪ ವಿಭಾಗಾಧಿಕಾರಿ ಶಾಲಂ ಹುಸೇನ್, ಕೃಷಿ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆ ಜು.19 ರಂದು

ಬೆಳಗಾವಿ ಕಾರ್ಯ ಮತ್ತು ಪಾಲನೆ ನಗರ ಉಪವಿಭಾಗ–3ರ ಕಛೇರಿಯಲ್ಲಿ ಜುಲೈ.19, 2025 ರಂದು ಬೆಳಿಗ್ಗೆ 10. 30 ಗಂಟೆಗೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಇವರ ಅಧ್ಯಕ್ಷತೆಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳ ನಿವಾರಣಾ ಸಭೆಯನ್ನು ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ಸದರಿ ಸಭೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆ/ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಶೀಘ್ರ ರೇಲ್ವೆ ಮಾರ್ಗ ಆರಂಭಕ್ಕೆ ಆಗ್ರಹಿಸಿ ಮನವಿ



ರಾಮದುರ್ಗ : ಲೋಕಾಪೂರದಿಂದ ರಾಮದುರ್ಗ ಮಾರ್ಗವಾಗಿ ಧಾರವಾಡಕ್ಕೆ ನೂತನ ರೇಲ್ವೆ ಮಾರ್ಗ ನಿರ್ಮಾಣಕ್ಕೆ ಆಗ್ರಹಿಸಿ, ರೇಲ್ವೆ ಹೋರಾಟ ಸಮಿತಿಯ ಪದಾಧಿಕಾರಿಗಳು ಹುಬ್ಬಳ್ಳಿ ನೈರುತ್ಯ ರೇಲ್ವೆ ಪ್ರಧಾನ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದ್ದಾರೆ.

ರಾಮದುರ್ಗ ತಾಲೂಕಿನಲ್ಲಿ ಸುಕ್ಷೇತ್ರ ಗೊಡಚಿ ವೀರಭದ್ರೇಶ್ವರ, ಸವದತ್ತಿ ತಾಲೂಕಿನಲ್ಲಿ ದೇಶದಲ್ಲಿ ಮನೆ ಮಾತಾಗಿರುವ ಯಲ್ಲಮ್ಮದೇವಿ ದೇವಸ್ಥಾನ, ಶಿರಸಂಗಿ ಕಾಳಿಕಾದೇವಿ ದೇವಸ್ಥಾನ, ಶಬರಿಕೊಳ್ಳ ಸೇರಿದಂತೆ ಐತಿಹಾಸಿಕ ಪ್ರಸಿದ್ಧ ಪುಣ್ಯ ಕ್ಷೇತ್ರಗಳಿಗೆ ರಾಜ್ಯದ ಮೂಲೆ, ಮೂಲೆಗಳಿಂದ ಜನತೆ ಸಂಚಾರ ಮಾಡುತ್ತಾರೆ. ಬಡವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಲೋಕಾಪೂರದಿಂದ ರಾಮದುರ್ಗ ತಾಲೂಕಿನ ಮಾರ್ಗವಾಗಿ ಧಾರವಾಡದ ವರೆಗೆ ನೂತನ ರೇಲ್ವೆ ಮಾರ್ಗ ನಿರ್ಮಾಣಕ್ಕೆ ಕಳೆದ 20 ವರ್ಷಗಳಿಂದ ಹೋರಾಟ ಮಾಡುತ್ತಾ ಬಂದಿದ್ದೇವೆ. ಆದರೆ ಉಭಯ ಸರಕಾರಗಳು ಈ ಭಾಗದ ನಾಗರಿಕರ ಬೇಡಿಕೆಯನ್ನು ಕಡೆಗಣಿತ್ತಾ ಬಂದಿವೆ. 2024 ನವ್ಹೆಂಬರನಲ್ಲಿ ರಾಮದುರ್ಗ ಮತ್ತು ಸವದತ್ತಿ ತಾಲೂಕಿನಾದ್ಯಂತ ಬೃಹತ್ ಹೋರಾಟ ನಡೆಸಿ, ಚುನಾಯಿತ ಪ್ರನಿಧಿಗಳು, ಕೇಂದ್ರ, ರಾಜ್ಯ ರೇಲ್ವೆ ಸಚಿವರು, ಯೋಜನೆ ಅನುಷ್ಠಾನಕ್ಕೆ ಸಹಕಾರ ನೀಡುವಂತೆ ರಾಜ್ಯ ಸರಕಾರಕ್ಕೂ ಮನವಿ ಮಾಡಲಾಗಿದೆ. ಚುನಾಯಿತ ಪ್ರತಿನಿಧಿಗಳು ಈ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಕೇಂದ್ರ ರೇಲ್ವೆ ಸಚಿವ ಅಶ್ವಿನ ವೈಷ್ಣವಿ ಅವರು ಮಾರ್ಗ ನಿರ್ಮಾಣದ ಪುನರ್ ಸಮೀಕ್ಷೆಗೆ ಪರಿಶೀಲಿಸುವಂತೆ ನಿರ್ದೇಶನ ನೀಡಿದ್ದಾರೆ. ಇಲಾಖೆಯ ಅಧಿಕಾರಿಗಳು ಗಮನ ಹರಿಸಿ, ಶೀಘ್ರ ರೇಲ್ವೆ ಮಾರ್ಗ ನಿರ್ಮಾಣ ಪ್ರಾರಂಭ ಕಾರ್ಯಕ್ಕೆ ಮುಂದಾಗಬೇಕು ಎಂದು ಅವರು ಮನವಿ ಮೂಲಕ ಆಗ್ರಹಿಸಿದ್ದಾರೆ.

ರೇಲ್ವೆ ಹೋರಾಟ ಸಮಿತಿಯ ಮುಖಂಡರಾದ ಕುತುಬುದ್ಧಿನ ಖಾಜಿ, ಗೈಬು ಜೈನೆಖಾನ, ಎಂ.ಕೆ. ಯಾದವಾಡ, ಪ್ರೊ ಎಸ್.ಜಿ ಚಿಕ್ಕನರಗುಂದ, ಶಶಿಕಾಂತ ನೆಲ್ಲೂರ, ಡಿ.ಎಫ್. ಹಾಜಿ, ದಾದಾಪೀರ ಕೆರೂರ, ಸವದತ್ತಿ ಹೋರಾಟ ಸಮಿತಿಯ ಬಸವರಾಜ ಕಪ್ಪನ್ನವರ, ಶಂಕ್ರೆಪ್ಪ ತೊರಗಲ್, ರಾಜಶೇಖರ ನಿಡೋಜಿ, ಬಾಗಲಕೋಟೆ ಸಮಿತಿಯ ಮೈನುದ್ಧಿನ ಖಾಜಿ, ಮಂಜುಳಾ ಬೋಕರೆ, ಪ್ರೇಮಾ ರಾಠೋಡ, ಮಮತಾಜ ಸುತಾರ ಸೇರಿದಂತೆ ಇತರರಿದ್ದರು.

## ಸಿಇಓ ಭುವನೇಶ ಪಾಟೀಲ ಅಧ್ಯಕ್ಷತೆಯಲ್ಲಿ ಜರುಗಿದ ಜಿಲ್ಲಾ ಪಂಚಾಯತ ವಿವಿಧ ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ



ಧಾರವಾಡ : ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಇಂದು (ಜು.17) ಬೆಳಿಗ್ಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯಲ್ಲಿ ಅನುಷ್ಠಾನದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿತ್ತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ಜಿಲ್ಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಯಲ್ಲಿ ವಿದ್ಯುತ್ ಬಿಲ್ ಮರು ಹೊಂದಾಣಿಕೆಗೆ ಹೆಸ್ಕಾಂ ಕಾರ್ಯಪಾಲಕ ಅಭಿಯಂತರರ ಜೊತೆಗೆ ಗ್ರಾಮ ಪಂಚಾಯಿತಿಯಿಂದ ಹಣ ಪಾವತಿ ಆಗುತ್ತಿರುವ ಬಗ್ಗೆ ಚರ್ಚಿಸಿದರು.


ಜಿಲ್ಲೆಯಲ್ಲಿ ಬಾಕಿ ಕರ ವಸೂಲಾತಿ ಮತ್ತು ಗ್ರಂಥಾಲಯ ಉಪಕರ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ಪ್ರತಿ ತಿಂಗಳು ಶೇ.10 ರಷ್ಟು ಗುರಿ ನಿಗದಿಪಡಿಸಿಕೊಂಡು ಪ್ರಗತಿ ಸಾಧಿಸಬೇಕು. ಐಪಿಜಿಆರ್–ಎಸ್ ಇ–ಗ್ರಾಮಸ್ವರಾಜ್ ತಂತ್ರಾಂಶದಲ್ಲಿ ಅನುಮೋದಿತ ಕ್ರಿಯಾ ಯೋಜನೆಯನ್ನು ಅಳವಡಿಸಿ, ಇ–ಸ್ವತ್ತು ಕುರಿತು ಹಲವಾರು ಗ್ರಾಮ ಪಂಚಾಯತಿಗಳಲ್ಲಿ ಬಹಳಷ್ಟು ಅರ್ಜಿಗಳು 30 ದಿನಗಳಿಗಿಂತ ಹೆಚ್ಚು ದಿನಗಳಿಂದ ವಿಲೇವಾರಿಯಾಗದೇ ಬಾಕಿ ಉಳಿಸಿಕೊಂಡಿದ್ದು ಈ ಕುರಿತು ಕ್ರಮ ವಹಿಸಬೇಕೆಂದು ಅವರು ಸೂಚಿಸಿದರು.

ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿ ಈಗಾಗಲೇ ವೈಯಕ್ತಿಕ ಶೌಚಾಲಯ ಹಾಗೂ ಸಮುದಾಯ ಶೌಚಾಲಯ ನಿರ್ಮಾಣ ಮಾಡಲು ಕಾರ್ಯಾದೇಶ ಪಡೆದ ಫಲಾನುಭವಿಗಳು ತುರ್ತಾಗಿ ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸಬೇಕು. ಮತ್ತು ಹೊಸ ಕೂಸಿನ ಮನೆ ಪ್ರಾರಂಭಿಸಲು ಪಿಡಿಒಗಳಿಗೆ ಅವರು ತಿಳಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ 2025–26 ನೇ ಸಾಲಿನ ಮೇ–2025 ರ ಪ್ರಗತಿಯನ್ನು ಪರಿಶೀಲಿಸಿದಾಗ ಗುರಿ ಸಾಧನೆಗೆ ಇನ್ನೂ ಬಾಕಿ ಇದೆ. ಮಹಿಳಾ ಭಾಗವಹಿಸುವಿಕೆ ಪ್ರಮಾಣವನ್ನು ಸರಕಾರದಿಂದ ನಿಗದಿಪಡಿಸಿದ ಶೇ.50 ರಷ್ಟು ಗುರಿ ಸಾಧಿಸಲು ಹಾಗೂ ಬೂದು ನೀರು ನಿರ್ವಹಣೆ ಕಾಮಗಾರಿಗಳ ಡಿಪಿಆರ್‌ಗಳನ್ನು ತಯಾರಿಸಿ ಸಲ್ಲಿಸಲು ಮತ್ತು ಜಿಲ್ಲೆಯಲ್ಲಿ ದಾಖಲಾಗಿರುವ ಸಾಮಾಜಿಕ ಲೆಕ್ಕ ಪರಿಶೋಧನಾ ಆಕ್ಷಪಣೆ ಮತ್ತು ವಸೂಲಾತಿ ಮಾಡಿ ಇತ್ಯರ್ಥಪಡಿಸಬೇಕು. ವಸತಿ ಯೋಜನೆ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ಮಂಜೂರಾದ ಮನೆಗಳಿಗೆ ಎನ್‌ಎಮ್‌ಆರ್ ಸೃಜನೆ ಮಾಡಲು ತುರ್ತಾಗಿ ಕ್ರಮ ವಹಿಸಬೇಕು ಎಂದು ಸಿಇಓ ಭುವನೇಶ ಪಾಟೀಲ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಿ.ಎಸ್.ಮೂಗನೂರುಮಠ, ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ, ಮುಖ್ಯ ಯೋಜನಾ ಅಧಿಕಾರಿ ದೀಪಕ ಮಡಿವಾಳ, ಪಿಆರ್‌ಇಡಿ ಕಾರ್ಯಪಾಲಕ ಅಭಿಯಂತರ ಆರ್. ಎಮ್.ಸೊಪ್ಪಿಮಠ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಜಗದೀಶ ಪಾಟೀಲ, ಹೆಸ್ಕಾಂ ಕಾರ್ಯಪಾಲಕ ಅಭಿಯಂತರಾದ ಎಮ್.ಟಿ.ದೊಡ್ಡಮನಿ, ಅರವಿಂದ ಗದಗಕರ, ಕೃಷಿ ಇಲಾಖೆಯ ಉಪನಿರ್ದೇಶಕಿ ಜಯಶ್ರೀ ಹಿರೇಮಠ ಹಾಗೂ ಎಲ್ಲ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಪಂಚಾಯತ ವಿವಿಧ ಶಾಖೆಗಳ ಮುಖ್ಯಸ್ಥರು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜು.21 ರಂದು ಪಂ.ಬಸವರಾಜ ರಾಜಗುರು ಅವರ ಪುಣ್ಯಸ್ಮರಣೆ ಕಾರ್ಯಕ್ರಮ



ಧಾರವಾಡ : ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸ್ವರಸಾಮ್ರಾಟ ಪಂ.ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ (ರಿ) ಟ್ರಸ್ಟ್, ಧಾರವಾಡ ವತಿಯಿಂದ ಪದ್ಮಭೂಷಣ, ಸ್ವರ ಸಾಮ್ರಾಟ ಪಂ. ಬಸವರಾಜ ರಾಜಗುರು ಅವರ 34ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಜುಲೈ 21, 2025 ರಂದು ಬೆಳಿಗ್ಗೆ 9:30 ಗಂಟೆಗೆ ಧಾರವಾಡದ ಹೊಸಯಲ್ಲಾಪುರದಲ್ಲಿರುವ ಪಂ. ಬಸವರಾಜ ರಾಜಗುರು ಅವರ ಸಮಾಧಿ ಸ್ಮಾರಕ ಸ್ಥಳದಲ್ಲಿ ಏರ್ಪಡಿಸಲಾಗಿದೆ. ಪಂ.ಬಸವರಾಜ ರಾಜಗುರು ಅವರ ಸಮಾಧಿ ಸ್ಮಾರಕದಲ್ಲಿ ಪೂಜಾ ಕಾರ್ಯಕ್ರಮ ಹಾಗೂ ಸಂಗೀತ ನಮನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಬೆಳಗಾವಿ ವಿಭಾಗದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಕೆ.ಹೆಚ್.ಚನ್ನೂರ, ಟ್ರಸ್ಟ್‌ನ ಅಧ್ಯಕ್ಷ ಚಂದ್ರಕಾಂತ ಬೆಲ್ಲದ, ಹಾಗೂ ಟ್ರಸ್ಟ್ ಸದಸ್ಯೆ ಭಾರತಿದೇವಿ ರಾಜಗುರು, ಡಾ. ಮುದ್ದುಮೋಹನ್, ಡಾ. ಜಿ.ಎಂ. ಹೆಗಡೆ, ಡಾ. ಉದಯಕುಮಾರ ದೇಸಾಯಿ, ನಿಜಗುಣ ರಾಜಗುರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ಪಂ.ಬಸವರಾಜ ರಾಜಗುರು ಅವರ ಶಿಷ್ಯರು ಮತ್ತು ಸಂಗೀತ ಅಭಿಮಾನಿಗಳು ಭಾಗವಹಿಸಬೇಕೆಂದು ಟ್ರಸ್ಟ್ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶೇಷ ತರಬೇತಿ ಕಾರ್ಯಕ್ರಮ



ಗದಗ : ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಧಾರವಾಡ ಹಾಲು ಒಕ್ಕೂಟ, ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಂಡರಗಿ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮವನ್ನು ಜುಲೈ 18 ರಂದು ಎ.ಪಿ.ಎಂ.ಸಿ ಸಭಾಭವನ ಬೆಳ್ಳಟ್ಟಿ ತಾ.ಶಿರಹಟ್ಟಿ ಜಿ.ಗದಗದಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಧಾರವಾಡ ಹಾಲು ಒಕ್ಕೂಟ. ಧಾರವಾಡ ಇದರ ನಿರ್ದೇಶಕರಾದ ಲಿಂಗರಾಜಗೌಡ ಎಚ್. ಪಾಟೀಲ ರವರು ಉದ್ಘಾಟಿಸಿ ಮಾತನಾಡುತ್ತಾ ಹಾಲನ್ನು "ಜಾಗತಿಕ ಆಹಾರ" ವನ್ನಾಗಿ ವಿಶ್ವಕ್ಕೆ ಪರಿಚಯಿಸುವುದು ಮತ್ತು ಹೈನೋದ್ಯಮದ ಕಾರ್ಯಚಟುವಟಿಕೆ ಸಾಧನಗಳನ್ನು ಪ್ರಚುರಪಡಿಸುವುದರ ರೊಂದಿಗೆ ಪ್ರೋತ್ಸಾಹಿಸುವುದಾಗಿದೆ. ಆಹಾರ ಮತ್ತು ಕೃಷಿ ಸಂಸ್ಥೆಯ ಇಂತಹ ಪ್ರೇರಣ ಪೂರಕ ಉಪಕ್ರಮಗಳಿಂದಾಗಿ ಇಂದು ವಿಶ್ವದಾದ್ಯಂತ 100 ಕೋಟಿಗೂ ಅಧಿಕ ರೈತ ಕುಟುಂಬಗಳು ಹೈನುಗಾರಿಕೆಯಲ್ಲಿ ತೊಡಗಿಕೊಂಡು ಗುಣಮಟ್ಟದ ಹಾಲು ಉತ್ಪಾದನೆಯೊಂದಿಗೆ ಅವರ ಜೀವನ ಸುಧಾರಣೆಗೂ ಸಹಕಾರಿಯಾಗಿರುತ್ತದೆ, ವಿಶ್ವವನ್ನು ಅದರಲ್ಲಿಯೂ ಯುವ ಸಮುದಾಯವನ್ನು ಆಕರ್ಷಿಸುತ್ತಿರುವ ಕ್ರಿಕೆಟ್ ಕ್ರೀಡೆಯನ್ನು ಪ್ರೋತ್ಸಾಹಿಸುವುದರ ಮೂಲಕ ತನ್ನ 'ನಂದಿನಿ" ಬ್ರ್ಯಾಂಡುಗಳನ್ನು ವಿಶ್ವಕ್ಕೆ ಪರಿಚಯಿಸುವ ಪ್ರಯತ್ನದಲ್ಲಿ ಕೆ.ಎಂ.ಎಫ್ ಯಶಸ್ಸನ್ನು ಕಂಡಿದೆ. ಹೈನುಗಾರಿಕಾ ವಲಯ ಗ್ರಾಮೀಣ ಪ್ರದೇಶಗಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿದೆ. ಆದ್ದರಿಂದ ದೇಶದ ಆರ್ಥಿಕತೆಗೆ ಪೂರಕವಾಗಿ ಒತ್ತು ನೀಡಲು ಗ್ರಾಮೀಣ ಪ್ರದೇಶದ ಹೈನುಗಾರಿಕೆ ಮತ್ತು ಗ್ರಾಮೀಣ ಗುಡಿ ಕೈಗಾರಿಕೆಗಳಿಗೆ ಹೆಚ್ಚು ಒತ್ತು ನೀಡಬೇಕಾಗಿದೆ. ಹಾಲು ಉತ್ಪಾದಕರು ಹೆಚ್ಚಿನ ಮಟ್ಟದಲ್ಲಿ ಆರ್ಥಿಕವಾಗಿ ಸದೃಢವಾಗಬೇಕಾದರೆ, ಉತ್ಪಾದನೆ ಹೆಚ್ಚಾಗಬೇಕು ಅದರಿಂದ ಸಂಘವು ಹೆಚ್ಚಿನ ಲಾಭ ಹೊಂದಲು ಸಾಧ್ಯವಾಗುತ್ತದೆ. ಈ ಆಯಾಮಗಳಲ್ಲಿ ಹೊಸ ಯೊಜನೆಗಳನ್ನು ಕೈಗೊಳ್ಳಬೇಕಾಗಿದೆ ಎಂದು ಹೇಳಿದರು.

ಹಿರಿಯ ಸಹಕಾರಿಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಬೆಳ್ಳಟ್ಟಿ ಇದರ ಅಧ್ಯಕ್ಷರಾದ ಪ್ರಕಾಶ ಬಿ. ಮಹಾಜನಶೆಟ್ಟರವರು ಸಹಕಾರ ಪಿತಾಮಹಾ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ ಮಾತನಾಡುತ್ತಾ ಕೃಷಿ ಆಧಾರಿತವಾಗಿ ಭಾರತದ ಜನರ ಜೀವನದ ಉಪಕಸಬುಗಳಲ್ಲೊಂದಾದ ಹೈನುಗಾರಿಕೆ ತುಂಬಾ ಶ್ರೀಮಂತದಾಯಕ ಕಾಯಕವಾಗಿದೆ, ಭಾರತ ದೇಶವಿಂದು ವಿಶ್ವದಲ್ಲಿಯೇ ಅತೀ ಹೆಚ್ಚು ಹಾಲು ಉತ್ಪಾದಿಸುತ್ತಿರುವ ಅಗ್ರಮಾನ್ಯ ರಾಷ್ಟ್ರವಾಗಿದ್ದು ಸುಮಾರು230.58 ಮಿಲಿಯನ್ ಮೆಟ್ರಿಕ್ ಟನ್ ಹಾಲು ಉತ್ಪಾದನೆ ಮಾಡಿ ಶೇ.4 ರಷ್ಟು ವಾರ್ಷಿಕ ಬೆಳವಣಿಗೆ ಕಂಡಿದೆ. ಕರ್ನಾಟಕ ರಾಜ್ಯದ ಜನರ ಸ್ವಾವಲಂಬಿ ಮತ್ತು ಸಮಗ್ರ ಸಹಕಾರಿ ಹಾಲು ಉತ್ಪಾದನೆ ಅಭಿವೃದ್ಧಿಯನ್ನು ಉತ್ತೇಜಿಸುವ ಮೂಲಕ ಹಾಲು ಉತ್ಪಾದಕ ಸದಸ್ಯರ ಜೀವನದಲ್ಲಿ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಏಳಿಗೆಗೆ ಶ್ರಮಿಸುವ ಮೂಲಕ ಕೆ.ಎಂ.ಎಫ್ ಕೋಟ್ಯಾಂತರ ಜನರ ಜೀವನಾಸರೆಯಾಗಿದೆ ಎಂದು ಹೇಳಿದರು.

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಿ. ಟಿ. ಕಳಸದ ರವರು ಮಾತನಾಡುತ್ತಾ 1983 ರಲ್ಲಿ ನಂದಿನಿ ಹೆಸರನ್ನು ತನ್ನ ಉತ್ಪನ್ನಗಳ ಬ್ರ್ಯಾಂಡ್ ಆಗಿ ಕೆ.ಎಂ.ಎಫ್ ಘೋಷಿಸಿತು. ನಂದಿನಿ ಎಂಬುದು ಹಿಂದೂ ದೇವತೆಯ ಹೆಸರು, ಹಾಗೆಯೇ ಗೋವಿನ ಹೆಸರುಗಳಲ್ಲಿ ಒಂದು ಹೀಗಾಗಿ, ನಂದಿನಿ ಹೆಸರನ್ನು ಆಯ್ಕೆ ಮಾಡಲಾಗಿದೆ. "ನಂದಿನಿ"ಯು ಕರ್ನಾಟಕ ರಾಜ್ಯದ ಮನೆ ಮಾತಾಗಿರುವ ಬ್ರ್ಯಾಂಡ್ ಆಗಿರುವುದಲ್ಲದೇ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಗ್ರಾಹಕರಿಗೆ ಗುರುತಿಸುವ ಪ್ರತಿಷ್ಠಿತ ಬ್ರ್ಯಾಂಡ ಆಗಿ ಹೊರಹೊಮ್ಮಿದೆ. ಕೆ.ಎಂ.ಎಫ್ ಮತ್ತು ಜಿಲ್ಲಾ ಹಾಲು ಒಕ್ಕೂಟಗಳ ಮೂಲಕ ಹಾಲು ಉತ್ಪಾದಕರಿಗೆ ಪಶು ವೈದ್ಯಕೀಯ ಸೌಲಭ್ಯ, ವಿವಿಧ ರೀತಿಯ ಮೇವಿನ ಬೀಜಗಳು, ರಾಸುಗಳ ಗುಂಪು ವಿಮೆ, ಲಸಿಕೆ ಕಾರ್ಯಕ್ರಮಗಳನ್ನು ಶೇ.50 ರಷ್ಟು ಅನುದಾನದಲ್ಲಿ ನೀಡಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯೂನಿಯನ್‌ದ ಉಪಾಧ್ಯಕ್ಷರಾದ ವಾಯ್. ಎಫ್. ಪಾಟೀಲರವರು ವಹಸಿ ಮಾತನಾಡುತ್ತಾ ಸಮಾಜದಲ್ಲಿ ಆರ್ಥಿಕವಾಗಿ ಅಬಲರಾದವರು, ಅವಕಾಶವಂಚಿತ ಜನರಿದ್ದು, ಇಂತಹ ಜನರ ಆರ್ಥಿಕ, ಸಾಮಾಜಿಕ ಸ್ಥಿತಿಗತಿಯನ್ನು ಉತ್ತಮಗೊಳಿಸಲು ಹಾಲು ಉತ್ಪಾದಕರ ಸಹಕಾರ ಸಂಘಗಳಿಂದ ಮಾತ್ರ ಸಾಧ್ಯ, ಗ್ರಾಮೀಣ ಪ್ರದೇಶದ ಮಹಿಳೆಯರು ಸಂಘಟಿತರಾಗಿ ಹಾಲು ಉತ್ಪಾದಕರ ಸಹಕಾರ ಸಂಘಗಳನ್ನು ಸ್ಥಾಪಿಸಿಕೊಂಡು ತಮ್ಮ ಆರ್ಥಿಕ ಅಭಿವೃದ್ಧಿಯನ್ನು ಹೊಂದಲು ಪ್ರಯತ್ನಿಸಬೇಕೆಂದು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು ಹಾಗೂ ಗದಗ ಜಿಲ್ಲಾ ಸಹಕಾರ ಯೂನಿಯನ್‌ದ ಸಹಯೋಗದೊಂದಿಗೆ ಜರುಗುವ ಇಂತಹ ಕಾರ್ಯಕ್ರಮದಲ್ಲಿ ಎಲ್ಲಾ ಸಂಘದವರು ಭಾಗವಹಿಸಿ ಕಾಲಕಾಲಕ್ಕೆ ಜರುಗುವ ತರಬೇತಿಯಲ್ಲಿ ಭಾಗವಹಿಸಿ ಅದರ ಸದುಪಯೋಗ ಪಡೆದು ತಮ್ಮ ಸಂಘಗಳ ಏಳ್ಗೆಗೆ ಶ್ರಮಿಸಬೇಕೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಯೂನಿಯನ್ನಿನ ನಿರ್ದೇಶಕರಾದ ಶಿದ್ದನಗೌಡ ಬಿ. ಪಾಟೀಲ, ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಕೆ.ಸಿ.ಕೂಸನೂರಮಠ, ಮಾರಾಟಾಧಿಕಾರಿಗಳಾದ ಬಿ.ಆರ್. ನಿಡಗುಂದಿ, ಧಾರವಾಡ ಹಾಲು ಒಕ್ಕೂಟದ ಧಾರವಾಡ ವ್ಯವಸ್ಥಾಪಕರು (ಶೇ & ತಾಂ) ಡಾ. ರಾಕೇಶ ತಲ್ಲೂರ, ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥರಾದ ಪ್ರಸನ್ನ ಪಟ್ಟೇದ, ಹಾಲು ಒಕ್ಕೂಟದ ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ ತಾಲೂಕಿನ ವಿಸ್ತರಣಾಧಿಕಾರಿಗಳಾದ ಸಿ.ಎಸ್.ಕಲ್ಲನಗೌಡರ, ಬಸವರಾಜ ಎಸ್. ಜುಮ್ಮಣ್ಣವರ, ಉಮೇಶ ಹುಂಡೇಕಾರ ರವರು ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ ಮಾರುಕಟ್ಟೆಯ ಮೇಲೆ ಹಾಲಿನ ಗುಣಮಟ್ಟ ಪ್ರಭಾವ ಕುರಿತು, ಡಾ. ವೀರೇಶ ತರಲಿ ವಿಶ್ರಾಂತ ವ್ಯವಸ್ಥಾಪಕ ನಿರ್ದೇಶಕರು, ಧಾರವಾಡ ಹಾಲು ಒಕ್ಕೂಟ, ಧಾರವಾಡ, ಶುದ್ದ ಹಾಗೂ ಅಧಿಕ ಹಾಲು ಉತ್ಪಾದನೆ ಮತ್ತು ಅಘೋಚರ ಕೆಚ್ಚಲುಬಾವು ಕುರಿತು, ಡಾ.ಎಂ.ಬಿ.ಮಡಿವಾಳರ ನಿವೃತ್ತ ಜಂಟಿ ನಿರ್ದೇಶಕರು, ಕ.ಹಾ.ಮ ತರಬೇತಿ ಕೇಂದ್ರ ರಾಯಾಪೂರ, ಧಾರವಾಡ ಮತ್ತು ಸಹಕಾರ ಸಂಘಗಳಲ್ಲಿ ಲೆಕ್ಕಪತ್ರಗಳ ನಿರ್ವಹಣೆ ಕುರಿತು. ಬಿ. ಪಿ. ಹಿರೇಮಠ ನಿವೃತ್ತ ಸಹಾಯಕ ವ್ಯವಸ್ಥಾಪಕರು ಧಾರವಾಡ ಹಾಲು ಒಕ್ಕೂಟ, ಧಾರವಾಡ ಉಪನ್ಯಾಸವನ್ನು ನೀಡಿದರು.

ಪ್ರಾರಂಭದಲ್ಲಿ ಯಳವತ್ತಿ ಹಾಗೂ ಕಡಕೋಳ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳಾದ ಶ್ರೀಮತಿ ಗಂಗಾ ಫ. ಮಲ್ಲರಡ್ಡಿ ಹಾಗೂ ಶ್ರೀಮತಿ ಭಾಗೀರಥಿ ಯ. ಭಂಡಾರಿ ಇವರು ಪ್ರಾರ್ಥನೆ ಮಾಡಿದರು ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಇವರು ಸ್ವಾಗತಿಸಿ ನಿರೂಪಿಸಿದರು. ವಿಸ್ತರಣಾಧಿಕಾರಿಗಳಾದ ಸಿ. ಎಸ್. ಕಲ್ಲನಗೌಡರ ವಂದಿಸಿದರು.

## ಸರ್ಕಾರಿ ಮೆಟ್ರಿಕ್‌ಪೂರ್ವ ಬಾಲಕಿಯರ ವಸತಿನಿಲಯಕ್ಕೆ ಜಿ.ಪಂ. ಸಿಇಓ ಭುವನೇಶ ಪಾಟೀಲ ಭೇಟಿ, ಪರಿಶೀಲನೆ



ಧಾರವಾಡ : ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ಉಣಕಲ್ ಕ್ರಾಸ್ ಹತ್ತಿರುವಿರುವ ಸರ್ಕಾರಿ ಮೆಟ್ರಿಕ್‌ಪೂರ್ವ ಬಾಲಕಿಯರ ವಸತಿನಿಲಯಕ್ಕೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಇಂದು (ಜು.17) ಮಧ್ಯಾಹ್ನ ಭೇಟಿ ನೀಡಿ, ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಅವರು ವಸತಿನಿಲಯದ ಕೊಠಡಿಗಳು, ಗ್ರಂಥಾಲಯ, ಅಡುಗೆ ಕೋಣೆ, ಭೋಜನಾಲಯ, ಉಗ್ರಾಣ ಪರಿಶೀಲಿಸಿ, ವಿದ್ಯಾರ್ಥಿನೀಯರೊಂದಿಗೆ ವಸತಿನಿಲಯದ ಸೌಲಭ್ಯಗಳ ಕುರಿತು ಸಂವಾದ ನಡೆಸಿದರು.

ವಿಶೇಷವಾಗಿ 10ನೇ ತರಗತಿ ವಿದ್ಯಾರ್ಥಿನೀಯರಿಂದ ಪಠ್ಯ ಪುಸ್ತಕದಲ್ಲಿನ ಪಾಠಗಳನ್ನು ಓದಿಸಿದರು. ವಿದ್ಯಾರ್ಥಿಗಳ ಪಠ್ಯೇತರ ಚಟುವಟಿಕೆಗಳ ಬಗ್ಗೆ ಇರುವ ಆಸಕ್ತಿ ಬಗ್ಗೆ ವಿಚಾರಿಸಿದರು.

ಮಕ್ಕಳೊಂದಿಗೆ ಶಿಕ್ಷಣ, ಗುಣಮಟ್ಟದ ಕಲಿಕೆ, ಜ್ಞಾನ ಸಂಗ್ರಹಣೆ ಸೇರಿದಂತೆ ವಿವಿಧ ವಿಷಯಗಳನ್ನು ಮುಕ್ತವಾಗಿ ಚರ್ಚಿಸಿದರು. ಅಡುಗೆ ಕೋಣೆಗೆ ಭೇಟಿ ನೀಡಿ, ಆಹಾರ ಪದಾರ್ಥಗಳನ್ನು ಪರಿಶೀಲಿಸಿದರು.

## ಹಳಿಯಾಳ ಆರ್‌ಸೆಟಿ ಸಂಸ್ಥೆ: ತರಬೇತಿಗೆ ಅರ್ಜಿ ಆಹ್ವಾನ

ಕೊಪ್ಪಳ : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ ಸಂಸ್ಥೆಯಿಂದ ಉಚಿತವಾಗಿ ಜೂಟ್ ಬ್ಯಾಗ್ ತಯಾರಿಕೆ ಹಾಗೂ ಮಹಿಳೆಯರಿಗಾಗಿ ಹೊಲಿಗೆ ಮತ್ತು ಮೊಬೈಲ್ ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ಕುರಿತು ಉಚಿತ ತರಬೇತಿಯನ್ನು ನೀಡುತ್ತಿದ್ದು, ಆಸಕ್ತ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಜುಲೈ ತಿಂಗಳಲ್ಲಿ ಜೂಟ್ ಬ್ಯಾಗ್ ತಯಾರಿಕೆ ತರಬೇತಿ ಹಾಗೂ ಆಗಸ್ಟ್ ತಿಂಗಳಲ್ಲಿ ಮಹಿಳೆಯರಿಗಾಗಿ ಹೊಲಿಗೆ ಮತ್ತು ಮೊಬೈಲ್ ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ತರಬೇತಿಗಳನ್ನು ಉಚಿತವಾಗಿ ನೀಡಲಾಗುತ್ತದೆ. ಈ ತರಬೇತಿಗಳು ಸ್ವ-ಉದ್ಯೋಗ ಪ್ರಾರಂಭಿಸಿ, ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗಲಿವೆ. ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳ ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ನೀಡಲಾಗುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಜುಲೈ 25 ಕೊನೆಯ ದಿನವಾಗಿದೆ. ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ, ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ವಿಳಾಸಕ್ಕೆ ಅಥವಾ ಮೊ.ಸಂ: 8217236973, 9844796998, 9483485489 ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ತಂಬಾಕು ನಿಯಂತ್ರಣ ಘಟಕ: ಒಂದು ದಿನದ ತರಬೇತಿ ಕಾರ್ಯಗಾರ

ಬೆಳಗಾವಿ, : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯ ರೋಗ ನಿರ್ಮೂಲನ ಕಾರ್ಯಕ್ರಮ ಬೆಳಗಾವಿ ಹಾಗೂ ರಾಜ್ಯ ತಂಬಾಕು ನಿಯಂತ್ರಣ ಘಟಕ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ (ಜು.18) ಬೆಳಗಾವಿಯ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿಗಳಿಗೆ ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ಲಭ್ಯವಿರುವ ಸೌಲಭ್ಯಗಳ ಕುರಿತು ಒಂದು ದಿನದ ತರಬೇತಿ ಕಾರ್ಯಗಾರ ಜರುಗಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಐ ಪಿ ಗಡಾದ್ ಅವರು ಮಾತನಾಡಿ ಜೀವನವನ್ನು ಆಯ್ದುಕೊಳ್ಳಿ ತಂಬಾಕ್ಕನ್ನಲ್ಲ, ತಂಬಾಕು ತ್ಯಜಿಸಿ ಮರಣ ಪ್ರಮಾಣ ಕಡಿಮೆ ಮಾಡಲು ತಿಳಿಸಿದರು.

ಜಿಲ್ಲಾ ಸರ್ವೇಕ್ಷಣಾ ಹಾಗೂ ತಂಬಾಕು ನಿಯಂತ್ರಾಧಿಕಾರಿ ಡಾ. ಎಸ್ ಎಸ್ ದೂಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿ ತಂಬಾಕು ದುಷ್ಪರಿಣಾಮದ ಕುರಿತು ತಮ್ಮ ಕಾರ್ಯಕ್ಷೇತ್ರದಲ್ಲಿ ಜಾಗೃತಿ ಮೂಡಿಸಿ ಕಾರ್ಯಕ್ರಮ ಹಮ್ಮಿಕೊಂಡು ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.

ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ. ಚಾಂದನಿ ಅವರು ತಂಬಾಕು ವ್ಯಸನ ಮುಕ್ತ ಕೇಂದ್ರದಲ್ಲಿ ದೊರೆಯುವ ಸೇವಾ ಸೌಲಭ್ಯಗಳ ಕುರಿತು ಸಾರ್ವಜನಿಕರಿಗೆ ತಿಳಿಸಬೇಕು ಆರೋಗ್ಯಯುತ ಸಮಾಜ ನಿರ್ಮಾಣ ಮಾಡಲು ಆರೋಗ್ಯ ಇಲಾಖೆಯ ಸಿಬ್ಬಂದಿಗಳ ಪಾತ್ರ ಅತಿ ಮುಖ್ಯವಾಗಿದೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದಂತಹ ರಾಷ್ಟ್ರೀಯ ತಂಬಾಕು ವ್ಯಸನ ಮುಕ್ತ ಕಾರ್ಯಕ್ರಮದ ತಾಂತ್ರಿಕ ಸಲಹೆಗಾರ ಡಾ. ಉಪೇಂದ್ರ, ರಾಜ್ಯ ಕಾರ್ಯಕ್ರಮ ಸಂಯೋಜಕರು ರಾಜ್ಯ ತಂಬಾಕು ನಿಯಂತ್ರಣ ಘಟಕದ ರಾಜೇಶ್. ವಿಭಾಗೀಯ ಸಂಯೋಜಕರು ರಾಜ್ಯ ತುಂಬಾ ಘಟಕದ ಮಹಾಂತೇಶ್ ಉಳ್ಳಾಗಡ್ಡಿ. ಕೆಎಲ್‌ಇ ವಿಕೆಐಡಿಎಸ್ ದಂತ ವೈದ್ಯಕೀಯ ಮಹಾವಿದ್ಯಾಲಯದ ಸಾರ್ವಜನಿಕ ದಂತ ಆರೋಗ್ಯ ವಿಭಾಗದ ಮುಖ್ಯಸ್ಥರು ಡಾ.ರೋಪಾಲಿ ಸಂಕೇಶ್ವರಿ ಅವರುಗಳು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದರು.

ಜಿಲ್ಲಾ ಸಲಹೆಗಾರರಾದ ಡಾ.ಶ್ವೇತಾ ಪಾಟೀಲ್, ಪ್ರಭಾರ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಶಿವಾಜಿ ಮಾಳ್ಗನವರ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಕವಿತಾ ರಾಜಣ್ಣವರ್, ಆಶಾ ಹಿರೇಮಠ, ರಮೇಶ ಹೂಲಿಕೇರಿ, ಸಮುದಾಯ ಆರೋಗ್ಯ ಅಧಿಕಾರಿಗಳು ಜಿಲ್ಲಾ ಕ್ಷಯರೋಗ ನಿರ್ಮೂವಿನಾ ಕಾರ್ಯಕ್ರಮದ ಸಿಬ್ಬಂದಿ ವರ್ಗದವರು, ಆಶಾ ಮೆಂಟರ್‌ಗಳು ತರಬೇತಿ ಕಾರ್ಯಾಗಾರದಲ್ಲಿ ಉಪಸ್ಥತರಿದ್ದರು.

## ನಬಾರ್ಡ ನೆರವು ಸ್ವಾವಲಂಬಿ ಸಖಿ ಒಕ್ಕೂಟದ ಉತ್ಪನ್ನಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದ ರಾಜ್ಯ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನಿಶ್

ಧಾರವಾಡ : ಜುಲೈ 15 ರಂದು ನಬಾರ್ಡ ಕ್ಷೇತ್ರಿಯ ಕಾರ್ಯಲಯ ಬೆಂಗಳೂರುನಲ್ಲಿ ಆಯೋಜಿಸಿದ್ದ ನಬಾರ್ಡ 44 ಸಂಸ್ಥೆ ದಿನಾಚರಣೆ ಅಂಗವಾಗಿ ಸ್ವಾವಲಂಬಿ ಒಕ್ಕೂಟಗಳು ಆಯೋಜಿಸಿದ್ದ ಕೈ ಕುಸುರಿ ಹಾಗೂ ಕೈಮಗ್ಗ ವಸ್ತುಗಳ ಪ್ರದರ್ಶನದಲ್ಲಿ ಭಾಗವಹಿಸಿದ್ದ ಧಾರವಾಡದ ಸ್ವಾವಲಂಬಿ ಸಖಿ ಒಕ್ಕೂಟ ತಯಾರಿಸಿದ ಅದ್ಭುತವಾದ ಆರಿ ಕಸೂತಿ ಉತ್ಪನ್ನಗಳಿಗೆ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಆರಿ ಕಲೆಯು, ಕಾಶ್ಮೀರದಲ್ಲಿ ಹುಟ್ಟಿಕೊಂಡಿದ್ದರು, ನಮ್ಮ ಧಾರವಾಡದ ಮಹಿಳೆಯರು ಅದನ್ನು ವಿವಿಧ ಉತ್ಪನ್ನಗಳಿಗೆ ಅಳವಡಿಸಿಕೊಂಡಿದ್ದಾರೆ. ಅದರಿಂದ ಅವರು ಬಹಳಷ್ಟು ಕಲಾತ್ಮಕ ವಸ್ತುಗಳನ್ನು ತಯಾರಿಸಿದ್ದಾರೆ. ಇದುವರೆಗೆ 1.85 ಕೋಟಿಯ ವ್ಯವಹಾರ ಮಾಡಿದ್ದು, ಅದಕ್ಕೆ ಅವರು ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ.

ಅವರು ಖಣದ ಬಟ್ಟೆ ಮತ್ತು ಆರಿ ಕಲೆಯನ್ನು ನವೀಕರಿಸಿ ಅದರಿಂದ ಆಭರಣಗಳು, ಬ್ಯಾಗುಗಳು, ಮಕ್ಕಳ ಉಡುಪುಗಳು, ಲೆಹೆಂಗಾ ಬ್ಲೌಸ್ ಇತ್ಯಾದಿ ಉಡುಪುಗಳನ್ನು ತಯಾರಿಸಿದ್ದಾರೆ. ಹುಬ್ಬಳ್ಳಿಯ ಶಿರೂರ ಪಾರ್ಕ್ ಹತ್ತಿರ ಇವರು ಒಂದು ಮಳಿಗೆಯನ್ನು ತೆರೆದು, ಸದರಿ ಉತ್ಪನ್ನಗಳ ಮಾರಾಟವನ್ನು ಉತ್ತಮವಾಗಿ ಕೈಗೊಂಡಿದ್ದಾರೆ.



2021 ರಲ್ಲಿ ಧಾರವಾಡ ಜಿಲ್ಲೆಯಲ್ಲಿ, ನಬಾರ್ಡ್ ಸಹಭಾಗಿತ್ವದಲ್ಲಿ, 350 ಸದಸ್ಯರನ್ನು ಒಳಗೊಂಡು ಈ ಕಂಪನಿ ಪ್ರಾರಂಭಿಸಿದರು. ಇದಕ್ಕೆ 9 ಜನ ಮಹಿಳಾ ನಿರ್ದೇಶಕರು ಎಲ್ಲರೂ ಗ್ರಹಿಣಿಯರಾಗಿದ್ದು ಈ ಕಂಪನಿಯನ್ನು ಬಲಿಷ್ಠವಾಗಿ ನಡೆಸಿಕೊಂಡು ಬರುತ್ತಿದ್ದಾರೆ. ಇದರಲ್ಲಿ ಆರು ಘಟಕಗಳಿದ್ದು, ಆರಿಬ್ಯಾಗ್ ಯೂನಿಟ್, ಎಥನಿಕ್ ವೇರ್, ಲಾಂಜ್ ವೇರ, ಫ್ರೇಮ್ ಯುನಿಟ್, ಜುವೆಲರಿ ಯೂನಿಟ್, ಕುರ್ತಿ ಯೂನಿಟ್ ಹೀಗೆ ಆರು ಘಟಕಗಳನ್ನು ನಿರ್ವಹಿಸುತ್ತಿದ್ದಾರೆ. ಎಲ್ಲಾ ಉತ್ಪನ್ನಗಳನ್ನು ಅಲ್ಲಿಯೇ ತಯಾರಿಸಲಾಗುತ್ತಿದೆ.

ಕರ್ನಾಟಕ ಹುಬ್ಬಳ್ಳಿಯ ವಿಮಾನ ನಿಲ್ದಾಣದಲ್ಲಿ ಅವಸರ್ ಎಂಬ ಒಂದು ಮಳಿಗೆಯನ್ನು ಸ್ಥಾಪಿಸಿದ್ದಾರೆ. ಈ ಮಳಿಗೆ ನಮಗೆ ದೊರೆತಿರುವುದು , ಒಂದು ಸುವರ್ಣ ಅವಕಾಶವಾಗಿದೆ. ಎಂದು ಡಾ. ಶಾಲಿನಿ ರಜನೀಶ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ತಮ್ಮ ಸ್ವಾವಲಂಬಿ ಸಖಿ ಕಂಪನಿಯು, ಸಾಮಾಜಿಕ ಜಾಲ ತಾಣಗಳಾದ **face book,instagram (@authentic_Karnataka)** ನಲ್ಲಿಂಯೂ ಸಕ್ರಿಯವಾಗಿದೆ. ತಮ್ಮ ವೆಬ್ ಸೈಟ **authentickarnataka.in** ಮೂಲಕ ವ್ಯವಹರಿಸುತ್ತಿದೆ. ಈ ಚಟುವಟಿಕೆಗಳಿಗೆ ನಬಾರ್ಡ್ ಬ್ಯಾಂಕ ಆರ್ಥಿಕವಾಗಿ ಹಾಗೂ ಟ್ರೈನಿಂಗ್ ಗಳಿಗಾಗಿ ಸಹಾಯವನ್ನು ನೀಡುವ ಮೂಲಕ ಮಹಿಳೆಯರಿಗೆ ಆಧಾರವಾಗಿ ನಿಂತಿದೆ. ಸ್ವಾವಲಂಬಿ ಮಹಿಳೆಯರ ಈ ಕಥೆಯು ಎಲ್ಲ ಮಹಿಳೆಯರಿಗೂ ಸ್ಫೂರ್ತಿಯಾಗಲಿ ಎಂದು ಡಾ. ಶಾಲಿನಿ ರಜನೀಶ್ ರವರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ನಬಾರ್ಡ್‌ನ ಚೀಫ್ ಜನರಲ್ ಮ್ಯಾನೇಜರ ಡಾ. ಸುರೇಂದ್ರ ಬಾಬು ಗುಪ್ತಾ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ರೀಜನಲ್ ಡೈರೆಕ್ಟರ್ ಡಾ.ಸೋನಾಲಿ ಸೇನ್, ಕೆನರಾ ಬ್ಯಾಂಕ್ ಎಕ್ಸಿಕ್ಯೂಟಿವ್ ಡೈರೆಕ್ಟರ್ ಭವೇಂದ್ರ ಕುಮಾರ್, ಧಾರವಾಡ ನಬಾರ್ಡನ ಸಹಾಯಕ ಮಹಾ ಪ್ರಬಂಧಕ ಮಯೂರ ಕಾಂಬ್ಳೆ, ಸ್ವಾಲಂಬಿ ಸಖಿ ಒಕ್ಕೂಟದ ಸರ್ವಮಂಗಳ ಮೊತಿ, ವಿಜಯ ಮುದಿಗೌಡರ ಮತ್ತು ಅಕ್ಷತಾ ಎಫ್. ಅವರು ಇದ್ದರು.

### ಗ್ಯಾರಂಟಿ ಯೋಜನೆಗಳ ಜೊತೆಗೇ ನಿರಂತರ ಅಭಿವೃದ್ಧಿ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## ಬೆಳಗಾವಿಯ ಜಂಟಿ ಸಾರಿಗೆ ಕಚೇರಿ- ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ನೂತನ ಕಟ್ಟಡದ ಉದ್ಘಾಟನೆ

ಬೆಳಗಾವಿ: ನಮ್ಮ ಸರ್ಕಾರ ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಯಲ್ಲೂ ಹಿಂದೆ ಬಿದ್ದಿಲ್ಲ. ಎರಡನ್ನೂ ಅಚ್ಚುಕಟ್ಟಾಗಿ ಮುಂದುವರಿಸಿಕೊಂಡು ಹೊಗುತ್ತಿದ್ದೇವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿಯ ಜಂಟಿ ಸಾರಿಗೆ ಕಚೇರಿ, ಬೆಳಗಾವಿ ವಿಭಾಗದ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ನೂತನ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಬಡವರಿಗಾಗಿ ಬಿಜೆಪಿಗರು ಒಂದೇ ಒಂದು ಯೋಜನೆ ತಂದ ಉದಾಹರಣೆ ಇಲ್ಲ, ಜನರಿಗೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವುದು ವಿರೋಧಿಗಳಿಗೆ ಬೇಕಿಲ್ಲ, ಜನರಿಗೆ ಅವರು ಯಾವತ್ತೂ ಒಳ್ಳೆಯದನ್ನು ಮಾಡಿಲ್ಲ. ನಮ್ಮ ಯೋಜನೆಗಳನ್ನು ಟೀಕಿಸುತ್ತಿದ್ದ ಅವರು ಈಗ ಬಿಹಾರ ಚುನಾವಣೆ ಸಂದರ್ಭದಲ್ಲಿ ನಮ್ಮ ಗ್ಯಾರಂಟಿ ಯೋಜರ್ನೆಗಳನ್ನು ಕಾಪಿ ಮಾಡುತ್ತಿದ್ದಾರೆ ಎಂದರು.

ಸಾರಿಗೆ ಇಲಾಖೆಯ ನೂತನ ಕಟ್ಟಡದಿಂದಾಗಿ ಬೆಳಗಾವಿಯ ಎರಡನೇ ರಾಜಧಾನಿ ಸ್ಥಾನಮಾನಕ್ಕೆ ಮತ್ತೊಂದು ಗರಿ ಮೂಡಿದಂತಾಗಿದೆ. ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಬೆಳಗಾವಿಯಲ್ಲಿ ಹಂತ ಹಂತವಾಗಿ ಮೂಲಸೌಕರ್ಯ ಅಭಿವೃದ್ಧಿಯಾಗುತ್ತಿದ್ದು, ಈಗ ಸುಸಜ್ಜಿತ ಪ್ರಾದೇಶಿಕ ಸಾರಿಗೆ ಕಚೇರಿ ಮತ್ತು ಜಂಟಿ



ಸಾರಿಗೆ ಆಯುಕ್ತರ ಕಚೇರಿ ಕೂಡ ಹೊಸ ಕಟ್ಟಡವನ್ನು ಹೊಂದಿದಂತಾಗಿದೆ. ಇದು ನಮ್ಮ ಅಭಿವೃದ್ಧಿಗೆ ಹಿಡಿದ ಕನ್ನಡಿಯಾಗಿದೆ ಎಂದು ಹೇಳಿದರು.

ಗ್ಯಾರಂಟಿಗಳಿಂದ ರಾಜ್ಯದಲ್ಲಿ ಅಭಿವೃದ್ಧಿಯಾಗುತ್ತಿಲ್ಲ ಎನ್ನುವ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ. ಗ್ಯಾರಂಟಿಯ ಜೊತೆ ಜೊತೆಗೇ ನಮ್ಮ ಸರ್ಕಾರ ಅಭಿವೃದ್ಧಿ ಕಾರ್ಯಗಳನ್ನೂ ಮುಂದುವರಿಸಿಕೊಂಡು ಬರುತ್ತಿದೆ. ರಾಜ್ಯದ ಆದಾಯದಲ್ಲಿ ಬಹು ದೊಡ್ಡ ಪಾಲನ್ನು ನೀಡುವ ಸಾರಿಗೆ ಇಲಾಖೆಗೆ ಉತ್ತಮ ಮೂಲಭೂತ ಸೌಲಭ್ಯಗಳು ಕೂಡ ಅಗತ್ಯ. ಹಾಗಾಗಿ ನಮ್ಮ ಸರ್ಕಾರ ಅಂತಹ ಕಟ್ಟಡವನ್ನು ಇಲ್ಲಿ ಒದಗಿಸಿದೆ. ಇಲ್ಲಿಂದ ಜನರಿಗೆ ತ್ವರಿತ ಮತ್ತು ಕಿರುಕುಳ ರಹಿತ ಸೇವೆ ಸಿಗಲಿದೆ ಎಂದು ಆಶಿಸುತ್ತೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಸಾರಿಗೆ ಇಲಾಖೆ ಸಿಬ್ಬಂದಿ ಜನಸ್ನೇಹಿಯಾಗಿ ಕೆಲಸ ನಿರ್ವಹಿಸಬೇಕು. ಕಿರುಕುಳವಿಲ್ಲದೆ ಸೇವೆ ನೀಡುವ ಮೂಲಕ ನಮ್ಮ ಸರಕಾರಕ್ಕೆ ಒಳ್ಳೆಯ ಹೆಸರು ತರಬೇಕು. ರಾಮಲಿಂಗಾ ರೆಡ್ಡಿ ಅವರು ನಮ್ಮ ಸರ್ಕಾರದ ಅತ್ಯಂತ ಹಿರಿಯ ಸಚಿವರು. ನಮ್ಮೆಲ್ಲರಿಗೆ ಹಿರಿಯಣ್ಣನಂತೆ, ಅವರಿಂದಾಗಿ ಇಲಾಖೆಗೆ ಹೆಚ್ಚಿನ ಗೌರವ ಬಂದಿದೆ. ರಾಮಲಿಂಗಾ ರೆಡ್ಡಿ ಅವರು ಸಾರಿಗೆ ಇಲಾಖೆಯ ಅಧಿಕಾರ ವಹಿಸಿಕೊಂಡಾಗಿನಿಂದ ಇಲಾಖೆಗೆ ಹೊಸ ಸ್ವರೂಪ ನೀಡಿದ್ದಾರೆ. ಅನೇಕ ಹೊಸ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಬೆಳಗಾವಿ ದೊಡ್ಡ ಜಿಲ್ಲೆಯಾಗಿರುವುದರಿಂದ ಇನ್ನೂ ಹೆಚ್ಚಿನ ಬಸ್ ಒದಗಿಸಬೇಕು ಎಂದು ಸಚಿವರು ವಿನಂತಿಸಿದರು.

ಕಾರ್ಯಕ್ರಮದಲ್ಲಿ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾ ರಡ್ಡಿ, ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಶಾಸಕರಾದ ಆಸಿಫ್ ಸೇಠ್, ಮಹಾಂತೇಶ ಕೌಜಲಗಿ, ಬುಡಾ ಅಧ್ಯಕ್ಷರಾದ ಲಕ್ಷ್ಮಣರಾವ್ ಚಿಂಗಳೆ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ವಿನಯ ನಾವಲಗಟ್ಟಿ, ಸಾರಿಗೆ ಮತ್ತು ರಸ್ತೆಯ ಸುರಕ್ಷತೆಯ ಆಯುಕ್ತರಾದ ಯೋಗೀಶ್ ಎ.ಎಂ, ಬೆಳಗಾವಿ ನಗರ ಪೋಲೀಸ್ ಆಯುಕ್ತರಾದ ಭೂಷಣ ಗುಲಾಬರಾವ್ ಬೋರಸೆ, ಜಂಟಿ ಆಯುಕ್ತರಾದ ಓಂಕಾರೇಶ್ವರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಹೆಚ್ಚುವರಿ ಆಯುಕ್ತರಾದ ಹಾಲಸ್ವಾಮಿ, ಬೆಳಗಾವಿ ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಗೇಶ ಮುಂಡಾಸೆ, ಬಿ.ಪಿ.ಉಮಾಶಂಕರ್, ಪುರುಷೋತ್ತಮ್, ಸಿ.ಟಿ.ಮೂರ್ತಿ ಸೇರಿದಂತೆ ಅನೇಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಸ್ ಇಂಡಿಯಾ ಫೌಂಡೇಶನ ಹೆಡ್ ಸಿಎಸ್‌ಆರ್ ಸಕಿನಾ ಬಕೇರ ಉದ್ಘಾಟನೆ



ಯರಗಟ್ಟಿ: ಸ್ಥಳೀಯ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮ ಪ್ರಾಥಮಿಕ ವಿಭಾಗಗಳನ್ನು ಒಳಗೊಂಡ ಶಾಲಾ ಕಟ್ಟಡದಲ್ಲಿ ನಿರ್ಮಿಸಲಾದ ಸಭಾಭವನ, ಸ್ಮಾರ್ಟ್‌ಕ್ಲಾಸ್, ವಿಜ್ಞಾನ ಲ್ಯಾಬ್ ವಿಭಾಗವನ್ನು ಉದ್ಘಾಟಿಸಲಾಯಿತು.

ಬಾಸ್ ಇಂಡಿಯಾ ಫೌಂಡೇಶನ ಹೆಡ್ ಸಿಎಸ್‌ಆರ್ ಸಕಿನಾ ಬಕೇರ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯ ಅತಿ ಹಳೆಯ ಪ್ರಾಥಮಿಕ ಶಾಲೆಗಳಲ್ಲಿ ಒಂದಾದ ಈ ವಿದ್ಯಾಸಂಸ್ಥೆಯಲ್ಲಿ ಹಲವಾರು ಮಂದಿ ವಿದ್ಯಾರ್ಜನೆಗೈದು ಉನ್ನತ ಸ್ಥಾನಗಳಲ್ಲಿ ಜೀವನ ಸಾಗಿಸುತ್ತಿದ್ದಾರೆ. ಈ ವಿದ್ಯಾಸಂಸ್ಥೆ ಪಠ್ಯ-ಪಠ್ಯೇತರ ಚಟುವಟಿಕೆಗಳಲ್ಲಿ ಜಿಲ್ಲೆ, ರಾಜ್ಯವನ್ನು ಪ್ರತಿನಿಧಿಸಿದೆ ಎಂದರು.

ಸಾವಿರಾರು ವಿದ್ಯಾರ್ಥಿಗಳ ಕಲಿಕೆಗೆ ಪೂರಕವಾಗಿ ನಿರ್ಮಿಸಲ್ಪಟ್ಟ ಹೊಸ ಸಭಾಭವನ, ಸ್ಮಾರ್ಟ್‌ಕ್ಲಾಸ್, ವಿಜ್ಞಾನ ಲ್ಯಾಬ್ ತರಗತಿಗಳು ಇಂದು ಅತ್ಯಂತ ಅವಶ್ಯಕ. ಶಿಕ್ಷಕರು, ವಿದ್ಯಾರ್ಥಿಗಳು ಇದರ ಸದುಪಯೋಗ ಮಾಡಿಕೊಳ್ಳಿ. ಮುಂದಿನ ಪೀಳಿಗೆಗೆ ಇವು ಪ್ರೇರಣೆ ನೀಡಲಿ ಎಂದರು.

ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ ಎಂ. ವ್ಹಿ. ಗುಂಡಪ್ಪಗೋಳ ಮಾತನಾಡಿ ಇಂದು ಮಕ್ಕಳ ಪ್ರತಿಭೆ ವಿಶಿಷ್ಟವಾಗಿ ಅರಳಬೇಕಾದರೆ ಸ್ಮಾರ್ಟ್ ತರಗತಿಗಳೂ ಅವಶ್ಯ. ಇದರಿಂದ ಮಕ್ಕಳು ಕ್ರಿಯಾಶೀಲವಾಗಿ ಸರ್ವಾಂಗೀಣ ಬೆಳವಣಿಗೆಗೆ ಸಹಕಾರವಾಗಲಿ ಎಂದರು.

ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಬಾಸ್ ಇಂಡಿಯಾ ಫೌಂಡೇಶನ ಹೆಡ್ ಕಾರ್ಪೊರೇಟ್ ಪ್ರಕಾಶಗೌಡ ಪಾಟೀಲ, ರಾಕೇಶಕುಮಾರ ತ್ರಿಪಾಠಿ, ಡಾ. ಮಂಡಲೀಕ ಕಾಮತ್, ಯಶವಂತ ಪಾಟೀಲ, ಎಸ್. ಕೆ. ಹುಚ್ಚರೆಡ್ಡಿ, ಸಿ. ಈ. ಹಿರೇಮಠ, ಎಸ್‌ಡಿಎಂಸಿ ಉಪಾಧ್ಯಕ್ಷೆ ಸಕ್ಕುಬಾಯಿ ಕುಂಬಾರ, ಮಾಜಿ ಸೈನಿಕರಾದ ಕುಮಾರ ಹಿರೇಮಠ, ಸಿಆರ್‌ಸಿ ವಸಂತ ಬಡಿಗೇರ, ಮುದಕಪ್ಪ ತಡಸಲೂರ, ಪ್ರಧಾನ ಗುರುಗಳಾದ ಎ. ಎಂ. ಮಕ್ತುಮನ್ನವರ, ಪ್ರಮೋದ ಬಡಿಗೇರ, ಗದಿಗೆಪ್ಪ ಕಡಕೋಳ, ದೀಪಾ ಬಡಿಗೇರ, ಇಬ್ರಾಹಿಂ ಚಾಂದಖಾನ್ನವರ, ಶಿವಾನಂದ ಬಳಿಗಾರ, ಎಂ. ಎಂ. ಚೀಲದ, ಶಿವಾನಂದ ಮಿಕಲಿ, ಎಂ. ಎಸ್. ಅತ್ತಾರ, ಜಯಶ್ರೀ ಬಡಕಪ್ಪನವರ ಸೇರಿದಂತೆ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಪೋಷಕರು ಭಾಗವಹಿಸಿದ್ದರು.

